RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 84 ಪುಟ: 06 ಸೋಮವಾರ 24-02-2025

Mail:mussanje2010@gmail.com www.mussanjenews.com


# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



ಸದ್ದಿಲ್ಲದೇ ಮದುವೆಯಾದ 'ರಾಕ್‌ಸ್ಟಾರ್' ನರ್ಗಿಸ್

ಆಲಿಯಾ ಭಟ್ ಮತ್ತು ಅನನ್ಯಾ ಪಾಂಡೆ ಅಚ್ಚುಮೆಚ್ಚು

ಏನೋ ಮಿಸ್ಸಿಂಗ್

ಪುಟ 6

# ಪ್ರತಿಭಟನೆಗೆ ಗ್ರೀನ್ ಸಿಗ್ನಲ್

## ಉದಯಗಿರಿ ಗಲಭೆ ಪ್ರಕರಣ; ಭಾರತೀಯ ಜನತಾ ಪಕ್ಷಕ್ಕೆ ಪ್ರತಿಭಟನೆ ನಡೆಸಲು ಷರತ್ತು ಬದ್ಧ ಅನುಮತಿ

**ಮೈಸೂರು:** ಉದಯಗಿರಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರಿನಲ್ಲಿ ಭಾರತೀಯ ಜನತಾ ಪಕ್ಷ ನಡೆಸಲು ಮುಂದಾಗಿದ್ದ ಪ್ರತಿಭಟನೆಗೆ ಸೋಮವಾರ ಹೈಕೋರ್ಟ್ ಷರತ್ತು ಬದ್ಧ ಅನುಮತಿ ನೀಡಿದೆ.

ಉದಯಗಿರಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಭಟನೆಗೆ ಅನುಮತಿ ನೀಡಲು ನಿರಾಕರಿಸಿದ್ದನ್ನ ಪ್ರಶ್ನಿಸಿ ಬಿಜೆಪಿ ಹೈಕೋರ್ಟ್ ಮೆಟ್ಟಿಲೇರಿತ್ತು. ಈ ಕುರಿತು ವಿಚಾರಣೆ ನಡೆಸಿದ ಹೈಕೋರ್ಟ್ ಬಿಜೆಪಿ ಪ್ರತಿಭಟನೆಗೆ ಗ್ರೀನ್ ಸಿಗ್ನಲ್ ನೀಡಿದೆ.

ಫುಟ್ ಬಾಲ್ ಮೈದಾನದಲ್ಲಿ ಪ್ರತಿಭಟನೆಗೆ ಸಮ್ಮತಿ ನೀಡಿದ್ದು, ಧರಣಿಯಲ್ಲಿ 300 ಕ್ಕಿಂತ ಹೆಚ್ಚು ಜನ ಸೇರುವಂತಿಲ್ಲ. ಧರಣಿ ವೇಳೆ ಪ್ರಚೋದನಾಕಾರಿ ಹೇಳಿಕೆ ನೀಡಬಾರದು. ಹಾಗೆಯೇ 1 ಲಕ್ಷ ರೂ. ಬಾಂಡ್ ನೀಡಬೇಕು ಎಂದು ಆಯೋಜಕರಿಗೆ ಹೈಕೋರ್ಟ್ ತಾಕೀತು ಮಾಡಿದೆ.

ಪ್ರತಿಭಟನೆ ವೇಳೆ ಅಹಿತಕರ ಘಟನೆ ನಡೆದರೇ ಅರ್ಜಿದಾರರೇ ಹೊಣೆ. ಅಂದು ಮಧ್ಯಾಹ್ನ 3.30ರಿಂದ ಪ್ರತಿಭಟನೆಗೆ ಅವಕಾಶ ನೀಡಲಾಗಿದೆ.

ಪ್ರತಿಭಟನೆ ಶಾಂತಿಯುತವಾಗಿರಬೇಕು ಹಾಗೂ ಇದನ್ನು ಅಲ್ಲಿನ ಪೊಲೀಸ್ ಇಲಾಖೆ ವಿಡಿಯೋ ಮಾಡಬೇಕು. ಸರ್ಕಾರ ಕಾನೂನು ಸುವ್ಯವಸ್ಥೆಗೆ ಭಂಗ ಮಾಡಬಾರದು ಎಂದು ಹೈಕೋರ್ಟ್ ತನ್ನ ತೀರ್ಪಿನಲ್ಲಿ ಹೇಳಿದೆ.

**ಸರ್ಕಾರದ ಪರ ವಕೀಲರ ವಾದ ಏನು?**

ಪ್ರತಿಭಟನೆಗೆ ಅವಕಾಶ ನೀಡಿದರೆ ಕಾನೂನು ಸುವ್ಯವಸ್ಥೆಗೆ ಸಮಸ್ಯೆಯಾಗಬಹುದು. 8 ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ, 9 ಮಂದಿ ಪೊಲೀಸರಿಗೆ ಗಾಯವಾಗಿದೆ. ಬೇರೆ ಸಂಘಟನೆಗಳು ಧರಣಿ ನಡೆಸಲು ಅನುಮತಿ ಕೋರಿದ್ದರು, ನೀಡಿಲ್ಲ.

ಸೂಕ್ಷ್ಮತೆ ಪರಿಗಣಿಸಿ ಪ್ರತಿಭಟನೆ ನಿರ್ಬಂಧಿಸಿ ನಿಷೇಧಾಜ್ಞೆ ಹೇರಲಾಗಿದೆ ಎಂದು ಸರ್ಕಾರದ ಪರ ಹೆಚ್ಚುವರಿ ಎಜಿ ಭಾನು ಪ್ರಕಾಶ್ ಹೈಕೋರ್ಟ್‌ಗೆ ತಿಳಿಸಿದರು.

ಜತೆಗೆ, ಫುಟ್‌ಬಾಲ್ ಮೈದಾನ, ಮಹಾರಾಜ ಕಾಲೇಜ್ ಗ್ರೌಂಡ್‌ನಲ್ಲಿ ಅವಕಾಶ ನೀಡಬಹುದು, ಆದರೆ 300ಕ್ಕಿಂತ





ಹೆಚ್ಚಿನ ಜನರಿಗೆ ಅವಕಾಶ ನೀಡದಂತೆ ಮನವಿ ಮಾಡಿದರು.

**ಅರ್ಜಿದಾರರ ವಾದವೇನು?**

ರಾಷ್ಟ್ರೀಯ ಸುರಕ್ಷಾ ಜನಾಂದೋಲನ ಸಮಿತಿಯ ರಿಟ್ ಅರ್ಜಿ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿ, ಪ್ರತಿಭಟನೆಗೆ ಅನುಮತಿ ನೀಡಲು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಏನಾದರೂ ಅಹಿತಕರ ಘಟನೆ ನಡೆದರೆ ಯಾರು ಹೊಣೆ? ರಸ್ತೆ ಬಿಟ್ಟು ಬೇರೆ ಮೈದಾನದಲ್ಲಿ ಪ್ರತಿಭಟನೆ ನಡೆಸಿದರೆ ಪರಿಗಣಿಸುವುದಾಗಿ ತಿಳಿಸಿತು.

ನಂತರ ಸೂಕ್ತ ಸ್ಥಳ ತಿಳಿಸಲು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿ ವಿಚಾರಣೆಯನ್ನು ಕೆಲಕಾಲ ಮುಂದೂಡಿತು. ನಂತರ ಸರ್ಕಾರದ ಪರ ವಕೀಲರ ವಾದ ಆಲಿಸಿ, ಪ್ರತಿಭಟನೆಗೆ ಷರತ್ತುಬದ್ಧ ಅನುಮತಿ ನೀಡಿತು.

## ನಾವು ಯಾವುದಕ್ಕೂ ಹೆದರಲ್ಲ: ಆರ್.ಅಶೋಕ್



**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಘಟನೆ ಖಂಡಿಸಿ ನಾವು ನಡೆಸಲು ಮುಂದಾಗಿರುವ ನಮ್ಮ ಹೋರಾಟವನ್ನು ಹತ್ತಿಕ್ಕಲು ಮೈಸೂರಿನಲ್ಲಿ ನಿಷೇದಾಜ್ಞೆ ಜಾರಿ ಮಾಡಲಾಗಿದೆ. ನಾವು ಯಾವುದಕ್ಕೂ ಹೆದರಲ್ಲ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.

ಮೈಸೂರಿನಲ್ಲಿ ಸೋಮವಾರ ಮಾತನಾಡಿದ ಆರ್.ಅಶೋಕ್, ಮುಸ್ಲೀಮರ ಓಲೈಕೆಯಷ್ಟೆ ಕಾಂಗ್ರೆಸ್ ಉದ್ದೇಶ . ನಮಗೆ ಮತ ಹಾಕಿ ನೀವು ಏನು ಬೇಕಾದರೂ ಮಾಡಿ. ಇದು ಕಾಂಗ್ರೆಸ್ ಸರ್ಕಾರದ ಸ್ಲೋಗನ್. ಮುಸ್ಲೀಂ ಮತಕ್ಕಾಗಿ ಯಾವ ಹಂತಕ್ಕೆ ಬೇಕಾದರೂ ಹೋಗುತ್ತಾರೆ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಸರ್ಕಾರ ಬಂದಾಗ ಕಾನೂನು ಸುವ್ಯವಸ್ಥೆ ಹಾಳಾಗುತ್ತದೆ. ಈ ಸರ್ಕರ ಕಿತ್ತು ಒಗೆಯುವುದೇ ನಮ್ಮ ಉದ್ದೇಶ ಎಂದು ಆರ್.ಅಶೋಕ್ ತಿಳಿಸಿದರು.





2023 ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪರಾಜಿತ ಅಭ್ಯರ್ಥಿಗಳ ಸಭೆಯನ್ನು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ನಡೆಸಿದರು. ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ, ಕಾರ್ಯಾಧ್ಯಕ್ಷರಾದ ಡಾ ಜಿ ಸಿ ಚಂದ್ರಶೇಖರ್, ವಸಂತ್ ಕುಮಾರ್, ಎಐಸಿಸಿ ಕಾರ್ಯದರ್ಶಿ ಮಯೂರ್ ಪಟೇಲ್, ಗೋಪಿನಾಥ್ ಪಳನಿಯಪ್ಪನ್, ಮುಖಂಡರಾದ ರಮಾನಾಥ ರೈ, ಶಿವಶಂಕರ್ ರೆಡ್ಡಿ, ಯು ಬಿ ವೆಂಕಟೇಶ್ ಮತ್ತಿತರರು ಉಪಸ್ಥಿತರಿದ್ದರು.

## ಶುದ್ಧ ಕುಡಿಯುವ ನೀರು ಸರಬರಾಜು ಪಾಲಿಕೆಗೆ ಹಸ್ತಾಂತರ



**ಬೆಂಗಳೂರು :** ಬೆಂಗಳೂರು ನಗರದ ಶುದ್ಧ ಕುಡಿಯುವ ನೀರು ಘಟಕಗಳ ನಿರ್ವಹಣೆಯನ್ನು ಬಿಬಿಎಂಪಿಯಿಂದ ಬೆಂಗಳೂರು ಜಲಮಂಡಳಿಗೆ ಹಸ್ತಾಂತರಿಸುವಂತೆ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ. ಈ ಸಂಬಂಧ ನಗರರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪತ್ರ ಮುಖೇನ ಸೂಚನೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬೆಂಗಳೂರು ನಗರದ ನಾಗರಿಕರಿಗೆ ಕುಡಿಯುವ ನೀರು ಪುಟ 2

## ಮೂಟೆಗಟ್ಟಲೆ ಕಲ್ಲು ತೆಗೆದುಕೊಂಡು ಬಂದು ಹೊಡೆದವರನ್ನ ರಕ್ಷಣೆ ಮಾಡಬೇಕಾ?



**ಮೈಸೂರು:** ಉದಯಗಿರಿ ಪೊಲೀಸ್ ಠಾಣೆಯ ಮೇಲೆ ಕಲ್ಲು ತೂರಾಟ ಪ್ರಕರಣ ಸಂಬಂಧ ಮೂಟೆಗಟ್ಟಲೆ ಕಲ್ಲು ತೆಗೆದುಕೊಂಡು ಬಂದು ಹೊಡೆದವರನ್ನ ರಕ್ಷಣೆ ಮಾಡಬೇಕಾ? ಕ್ರಮ ತೆಗೆದುಕೊಳ್ಳಬೇಕಾದದ್ದು ರಾಜ್ಯ ಸರ್ಕಾರದ ಕರ್ತವ್ಯ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಕಿಡಿಕಾರಿದರು.

ಮೈಸೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ಕುವೆಂಪು ಅವರ ಸಂದೇಶ ಜಾರಿಗೆ ಬರಬೇಕು. ರಾಜ್ಯ ಸರ್ವಜನಾಂಗದ ಶಾಂತಿಯ ತೋಟ ಆಗಿ ಉಳಿಯಬೇಕು. ಬಿಜೆಪಿ ಸ್ನೇಹಿತರಿಗೆ ಮನವಿ ಮಾಡಿಕೊಳ್ಳುತ್ತೇನೆ. ಸಮಾಜಕ್ಕೆ ರಕ್ಷಣೆ ನೀಡಬೇಕೆಂದು ಹೋಗುತ್ತೀರಿ. ಮತ್ತೊಂದೆಡೆ ಅವರು ಭದ್ರವಾಗುತ್ತಾ ಹೋಗುತ್ತಾರೆ. ಎರಡೂ ಪಕ್ಷದ ನಾಯಕರಿಗೆ ಮನವಿ ಮಾಡಿಕೊಳ್ಳುತ್ತೇನೆ. ರಾಜ್ಯದಲ್ಲಿ ಹಲವು ಜ್ವಲಂತ ಸಮಸ್ಯೆಗಳಿಗೆ ಇಂತಹವರನ್ನ ಬಲಿ ಹಾಕಲೇಬೇಕು. ಪೊಲೀಸ್ ವಾಹನದ ಮೇಲೆ ಕಲ್ಲು ತೂರಿದವರನ್ನ ಬಲಿ ಹಾಕಬೇಕು. ಎಷ್ಟು ದಿನ ಅಂತ ಇದನ್ನ ಸಹಿಸಿಕೊಳ್ಳುತ್ತೀರಿ. ಯಾರನ್ನೋ ಓಲೈಸಲು ಸರ್ಕಾರ ಇಲ್ಲ. ಕಾನೂನು ಬಾಹಿರ ಚಟುವಟಿಕೆ ನಡೆಸುವವನು ಯಾರೇ ಇರಲಿ ಕ್ರಮ ತೆಗೆದುಕೊಳ್ಳಬೇಕಾದದ್ದು ರಾಜ್ಯ ಸರ್ಕಾರದ ಕರ್ತವ್ಯ. ಮೂಟೆಗಟ್ಟಲೆ ಕಲ್ಲು ತೆಗೆದುಕೊಂಡು ಬಂದು ಹೊಡೆದುವವರನ್ನ ರಕ್ಷಣೆ ಮಾಡಬೇಕಾ? ಎಂದು ಕಿಡಿಕಾರಿದರು. ಪುಟ 2

## ಕಂಡಕ್ಟರ್ ಆರೋಗ್ಯ ವಿಚಾರಿಸಿದ ಸಚಿವ

**ಬೆಳಗಾವಿ :** ಕನ್ನಡದಲ್ಲಿ ಮಾತನಾಡಿ ಎಂದಿದ್ದಕ್ಕೆ ಹಲ್ಲೆಗೊಳಗಾಗಿದ್ದ ಬಸ್ ಕಂಡಕ್ಟರ್ ಮಹದೇವಪ್ಪ ಅವರನ್ನ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಸಾರಿಗೆ ಸಚಿವ ರಾಮಲಿಂಗರೆಡ್ಡಿ, ಬಸ್ ನಿರ್ವಾಹಕ ಮಹಾದೇವ ಹುಕ್ಕೇರಿ ಅವರ ಆರೋಗ್ಯ ವಿಚಾರಿಸಿದರು. ಪುಟ 2

## ತೆಂಗಿನ ಮರ ಬಿದ್ದು ಮಗು ಸಾವು

**ಗೌರಿಬಿದನೂರು:** ಮನೆಯ ಮುಂದೆ ಆಟವಾಡುತ್ತಿದ್ದ 3 ವರ್ಷದ ಮಗುವಿನ ಮೇಲೆ ತೆಂಗಿನ ಮರ ಬಿದ್ದು ಸಾವನ್ನಪ್ಪಿರುವ ಘಟನೆ ತಾಲೂಕಿನ ಹಾಲಗಾನಹಳ್ಳಿಯಲ್ಲಿ ನಡೆದಿದೆ. ಪೃಥ್ವಿರಾಜ್ (3) ಮೃತ ಮಗುವಾಗಿದ್ದು, ಗರ್ಭಿಣಿ ತಾಯಿ ಮೋನಿಕಾ ಕಾಲಿಗೆ ಗಂಭೀರ ಗಾಯಗಳಾಗಿವೆ. ಕಳೆದ 15 ದಿನಗಳ ಹಿಂದೆ ಹೆರಿಗೆಗಾಗಿ ಮೋನಿಕಾ ತವರು ಮನೆ ಹಾಲಗಾನಹಳ್ಳಿಗೆ ಪುಟ 2

## ರೀಲ್ಸ್: ಪ್ರಪಾತಕ್ಕೆ ಬಿದ್ದ ಯುವಕ

**ಹಾಸನ :** ರೀಲ್ಸ್ ಮಾಡಲು ಬೆಟ್ಟದ ತುದಿಯಲ್ಲಿ ನಿಂತ ಯುವಕ ಆಯತಪ್ಪಿ ಪ್ರಪಾತಕ್ಕೆ ಬಿದ್ದು ಗಾಯಗೊಂಡ ಘಟನೆ ಸಕಲೇಶಪುರ ತಾಲೂಕಿನ ಗವಿಬೆಟ್ಟದಲ್ಲಿ ನಡೆದಿದೆ. ರಾಕಿದ್ (18) ನೂರು ಅಡಿಗೂ ಹೆಚ್ಚು ಆಳದ ಪ್ರಪಾತಕ್ಕೆ ಬಿದ್ದು ಗಂಭೀರವಾಗಿ ಗಾಯಗೊಂಡ ಯುವಕ. ಶನಿವಾರಸಂತೆಯಿಂದ ತನ್ನ ಇಬ್ಬರು ಸ್ನೇಹಿತರೊಂದಿಗೆ ಸಕಲೇಶಪುರದ ಪುಟ 2

## ಸರ್ಕಾರಕ್ಕೆ ಪೂರ್ಣ ಬದ್ಧತೆ ಇದೆ: ಸಿಎಂ

**ಬೆಂಗಳೂರು:** ಬಸವ ತತ್ವ, ವಚನ ಸಂಸ್ಕೃತಿ, ಶರಣರ ಹೋರಾಟದ ಬಗ್ಗೆ ನಮ್ಮ ಸರ್ಕಾರಕ್ಕೆ ಪೂರ್ಣ ಬದ್ಧತೆ ಇದ್ದು, ಪೂಜ್ಯರ ಬೇಡಿಕೆಗಳಲ್ಲಿ ಸಾಧ್ಯ ಇರುವವಗಳನ್ನು ಹಂತ ಹಂತವಾಗಿ ಈಡೇರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದರು.

ಕಾವೇರಿ ನಿವಾಸದಲ್ಲಿ ತಮ್ಮನ್ನು ಭೇಟಿಯಾದ ಲಿಂಗಾಯತ ಸ್ವಾಮೀಜಿಗಳು, ಸಚಿವರು, ಶಾಸಕರು, ಸಮಾಜದ ಮುಖಂಡರ ಸಭೆಯಲ್ಲಿ ಮಾತನಾಡಿದರು.



ಮೊದಲ ಬಾರಿ ಮುಖ್ಯಮಂತ್ರಿ ಆದಾಗ ಬಸವ ಜಯಂತಿಯಂದೇ ಪ್ರಮಾಣವಚನ ಸ್ವೀಕರಿಸಿದೆ. ಬಸವಣ್ಣನವರ ಭಾವಚಿತ್ರ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯಗೊಳಿಸಿದ್ದು ನಮ್ಮದೇ ಕಾಂಗ್ರೆಸ್ ಸರ್ಕಾರ ಎಂದರು.

ಬಸವಣ್ಣನವರ ವಿಚಾರ ಮತ್ತು ಹೋರಾಟ ಜಾತ್ಯತೀತ ಸಮಾಜ ನಿರ್ಮಾಣಕ್ಕೆ ಪೂರಕ. ಜಾತಿವಾದಿ ಪಟ್ಟಭದ್ರರಿಗೆ ಬಸವಣ್ಣನವರ ವಿಚಾರಗಳು ಹಿಡಿಸಲ್ಲ. ಪಟ್ಟಭದ್ರರು ಬಹಿರಂಗವಾಗಿ ಬಸವಣ್ಣನವರನ್ನು ವಿರೋಧಿಸಲು ಸಾಧ್ಯವಿಲ್ಲ. ಅದಕ್ಕೇ ಆಂತರಿಕವಾಗಿ ವಿರೋಧಿಸುತ್ತಿದ್ದಾರೆ ಎಂದರು.

ಜಾತಿ ವ್ಯವಸ್ಥೆ ಬಹಳ ಗಟ್ಟಿಯಾಗಿ ಬೇರೂರಿದೆ. ಇದಕ್ಕೆ ಪಟ್ಟಭದ್ರರು ನೀರು ಗೊಬ್ಬರ ಹಾಕುತ್ತಿದ್ದಾರೆ. ಜಾತ್ಯತೀತ, ಸಮ ಸಮಾಜ ನಿರ್ಮಾಣ ಮಾಡಲು ಬಸವಣ್ಣನವರ ಹೋರಾಟ ಪೂರಕ. ನಮ್ಮ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಜಾತಿ ಜಡತ್ವ, ಆರ್ಥಿಕ ಜಡತ್ವ ಇರುವ ಸಮಾಜದಲ್ಲಿ ಚಲನೆ ಸಾಧ್ಯವಿಲ್ಲ. ಬಸವಣ್ಣನವರ ವಿಚಾರಗಳೇ ಅಂಬೇಡ್ಕರ್ ವಿಚಾರಗಳಾಗಿದ್ದು ಇವೆಲ್ಲವೂ ಸಂವಿಧಾನದಲ್ಲಿ ಅಡಕವಾಗಿವೆ ಎಂದರು.

ಗೊರುಚ ಅಧ್ಯಕ್ಷತೆಯಲ್ಲಿ ಅನುಭವ ಮಂಟಪ ಪುನರುಜ್ಜೀವನಕ್ಕೆ ಮುಂದಾಗಿದ್ದು ನಾವು. ಅನುಭವ ಮಂಟಪ ಮೊದಲ ಪ್ರಜಾಪ್ರಭುತ್ವದ ವೇದಿಕೆ. ಯಾರ ಒತ್ತಾಯವೂ ಇಲ್ಲದ ವೇಳೆಯಲ್ಲೇ ನಮ್ಮಪುಟ 2

## ಉದಯಗಿರಿ ಗಲಾಟೆ: ಬಿಜೆಪಿಗೆ ರಾಜಕೀಯ ಅಸ್ತ್ರ



**ತುಮಕೂರು :** ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯಲ್ಲಿ ನಡೆದ ಗಲಾಟೆಗೆ ಸಂಬಂಧಿಸಿದಂತೆ ಪೊಲೀಸರು ಅಗತ್ಯ ಕ್ರಮ ಕೈಗೊಂಡಿದ್ದಾರೆ. ಆದರೆ, ಪ್ರಕರಣವನ್ನು ಬಿಜೆಪಿ ರಾಜಕೀಯ ಅಸ್ತ್ರವಾಗಿ ಉಪಯೋಗಿಸಿಕೊಳ್ಳುತ್ತಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಹೇಳಿದರು. ತುಮಕೂರು ಜಿಲ್ಲಾ ಕೆಡಿಪಿ ಪ್ರಗತಿ ಪರಿಶೀಲನೆ ಸಭೆ ನಡೆಸಲು ಜಿಲ್ಲಾ ಪಂಚಾಯತ್ ಸಭಾಂಗಣಕ್ಕೆ ಆಗಮಿಸಿದ್ದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮೈಸೂರು ಉದಯಗಿರಿ ಗಲಾಟೆಗೆ ಯಾರು ಕಾರಣಕರ್ತರಾಗಿದ್ದರೋ ಅವರನ್ನೆಲ್ಲ ಪೊಲೀಸರು ಬಂಧಿಸಿದ್ದಾರೆ. ತನಿಖೆ ಮುಂದುವರಿದಿದೆ. ಈ ಸಂದರ್ಭದಲ್ಲಿ ಬಿಜೆಪಿಯವರು ಘಟನೆಯನ್ನು ರಾಜಕೀಯ ಅಸ್ತ್ರವಾಗಿ ಉಪಯೋಗ ಮಾಡಿಕೊಂಡು ಪುಟ 2

## ಕಾಂಗ್ರೆಸ್‌ನಿಂದ ತುಷ್ಟೀಕರಣ ರಾಜಕಾರಣ



**ಬೆಂಗಳೂರು:** ಇತ್ತೀಚೆಗೆ ಮೈಸೂರಿನ ಉದಯಗಿರಿಯಲ್ಲಿ ಕೆಲ ದೇಶದ್ರೋಹಿಗಳು ಅಟ್ಟಹಾಸ ಮೆರೆದಿದ್ದಾರೆ. ಇವತ್ತು ಅಲ್ಲಿ ಜಾಗೃತಿ ಜಾಥಾಗೆ ಕರೆ ಕೊಡಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಮೈಸೂರಿಗೆ ಹೋಗುವ ಮುನ್ನ ಸೋಮವಾರ ಬೆಂಗಳೂರಿನ ತಮ್ಮ ನಿವಾಸದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್‌ನಿಂದ ಕಳೆದೆರಡು ವರ್ಷಗಳಿಂದ ತುಷ್ಟೀಕರಣ ರಾಜಕಾರಣ ಮಾಡ್ತಿದೆ. ಇದನ್ನು ನೋಡಿದರೆ ನಿಜಾಮರ ಆಡಳಿತ ನೆನಪಾಗುತ್ತದೆ. ರಾಜರ ಕಾಲದ ಆಡಳಿತ ಏನೋ ಅನ್ನುವ ಹಾಗೆ ಹಿಂದೂಗಳಿಗೆ ಭಾಸವಾಗುತ್ತಿದೆ ಎಂದರು.

ಪೊಲೀಸರಿಗೂ ಸ್ವಾತಂತ್ರ್ಯ ಕೊಟ್ಟಿಲ್ಲ, ಖುದ್ದು ಪೊಲೀಸ್ ಇಲಾಖೆ ಅಸಹಾಯಕವಾಗಿದೆ. ಗೃಹ ಸಚಿವರೇ ರಾಜೀನಾಮೆ ಬಗ್ಗೆ ಮಾತನಾಡುವ ಮೂಲಕ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

ನಾವು ಕೂಡಾ ಇವತ್ತು ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಸರ್ಕಾರವನ್ನು ಎಚ್ಚರಿಸ್ತೇವೆ ಎಂದು ಹೇಳಿದರು.

ದೇಶ ದ್ರೋಹಿಗಳು ಕಲ್ಲೆಸೆದಾಗ ನಿಷೇಧಾಜ್ಞೆ ಹೇರಬೇಕಿತ್ತು. ಇವತ್ತು ಹಿಂದೂ ಕಾರ್ಯಕರ್ತರು ಹೋರಾಟ ಮಾಡುತ್ತೇವೆ ಎಂದರೆ ನಿಷೇಧಾಜ್ಞೆ ಹೇರೋದು ಅಲ್ಲ. ಯಾಕೆ ಆವತ್ತು ಸರ್ಕಾರ, ಗೃಹ ಇಲಾಖೆ ಸತ್ತು ಹೋಗಿತ್ತಾ?. ಏನೇ ಆದರೂ ನಾವು ಹೋರಾಟ ಮಾಡ್ತೇವೆ, ನಮ್ಮ ಹೋರಾಟ ತಡೆಯಲು ಏನೇ ನಿಷೇಧಾಜ್ಞೆ ಹಾಕಿದ್ರೂ ಆಗಲ್ಲ. ಇವತ್ತು ಎಲ್ಲ ಪುಟ 2

## ಅಪಘಾತ: 6 ಸಾವು



**ಬೆಳಗಾವಿ:** ಪ್ರಯಾಗ್‌ರಾಜ್‌ನ ಮಹಾಕುಂಭಮೇಳಕ್ಕೆ ತೆರಳಿ ವಾಪಸ್ ಬರುವಾಗ ಗೋಕಾಕ್‌ನ ಆರು ಮಂದಿ ಮಧ್ಯಪ್ರದೇಶದ ಜಬಲಪೂರ ಪೆಹರಾ ಟೋಲ್ ನಾಕಾ ಬಳಿ ಸೋಮವಾರ ಬೆಳಗಿನ ನಸುಕಿನಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಮೃತಪಟ್ಟು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲೂಕಿನ ಲಕ್ಕಿ ಬಡಾವಣೆ ನಿವಾಸಿಗಳಾದ ಬಾಲಚಂದ್ರ ಗೌಡರ (50), ಸುನೀಲ್ ಶೇಡಶ್ಯಾಳೆ (45), ಬಸವರಾಜ್ ಕುರ್ತಿ (63), ಬಸವರಾಜ್ ದೊಡಮಾಳ್ (49), ಈರಣ್ಣ ಶೇಬಿನಕಟ್ಟಿ (27), ವಿರೂಪಾಕ್ಷ ಗುಮತಿ (61) ಪುಟ 2

## ವಿಕಸಿತ ಭಾರತಕ್ಕೆ ಮೋದಿ ಸಂಕಲ್ಪ



**ಭೋಪಾಲ್:** ದೇಶದ ಇತಿಹಾಸದಲ್ಲಿ ಮೊದಲ ಬಾರಿಗೆ, ಇಡೀ ಜಗತ್ತು ಭಾರತದ ಬಗ್ಗೆ ತುಂಬಾ ಆಶಾವಾದಿಯಾಗಿದೆ. 2047ರ ವೇಳೆ ವಿಕಸಿತ ಭಾರತ ನಿರ್ಮಾಣ ಮಾಡುವುದು ಕೇಂದ್ರ ಸರ್ಕಾರದ ಸಂಕಲ್ಪ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

"ಸಾಮಾನ್ಯ ಜನರು, ಆರ್ಥಿಕ ನೀತಿ ತಜ್ಞರು, ವಿವಿಧ ದೇಶಗಳು ಅಥವಾ ಸಂಸ್ಥೆಗಳು ಇರಲಿ, ಪ್ರತಿಯೊಬ್ಬರೂ ಭಾರತದಿಂದ ಹೆಚ್ಚಿನ ನಿರೀಕ್ಷೆ ಹೊಂದಿದ್ದಾರೆ. ಕಳೆದ ಕೆಲವು ವಾರಗಳಲ್ಲಿ ಬಂದಿರುವ ಅವಕಾಶಗಳಿ ಭಾರತದ ಪ್ರತಿಯೊಬ್ಬ ಹೂಡಿಕೆದಾರರ ಉತ್ಸಾಹವನ್ನು ಹೆಚ್ಚಿಸಲಿವೆ ಎಂದಿದ್ದಾರೆ

ಭೋಪಾಲ್‌ನಲ್ಲಿ ಜಾಗತಿಕ ಹೂಡಿಕೆದಾರರ ಶೃಂಗಸಭೆಯನ್ನು ಉದ್ಘಾಟಿಸಿದರು ಮತ್ತು ಕೈಗಾರಿಕೆ, ನವೋದ್ಯಮಗಳು ಮತ್ತು ಇತರ ವಿಷಯಗಳ ಕುರಿತು ಮಧ್ಯಪ್ರದೇಶ ಸರ್ಕಾರದ 18 ನೀತಿಗಳನ್ನು ಅನಾವರಣಗೊಳಿಸಿ ಮಾತನಾಡಿ, ಶೀಘ್ರವೇ ಮದ್ಯಪ್ರದೇಶವನ್ನು ಹೂಡಿಕೆದಾರರ ಪ್ರಮುಖ ತಾಣವನ್ನಾಗಿ ಮಾಡಲಾಗಿದೆ ಎಂದಿದ್ದಾರೆ ಪುಟ 2

ಭಾರತ ಜಾಗತಿಕ ಏರೋಸ್ಪೇಸ್ ಸಂಸ್ಥೆಗಳಿಗೆ ಅತ್ಯುತ್ತಮ ಪೂರೈಕೆ ಸರಪಳಿಯಾಗಿ ಹೊರಹೊಮ್ಮುತ್ತಿದೆ . "ರಾಜ ಭೋಜದ ಈ ಭೂಮಿಗೆ ನಿಮ್ಮೆಲ್ಲರನ್ನೂ ಸ್ವಾಗತಿಸಲು ಸಂತೋಷವಾಗಿದೆ. ವಿವಿಧ ಕ್ಷೇತ್ರಗಳ ಅನೇಕ ಹೂಡಿಕೆದಾರರು ಇಲ್ಲಿಗೆ ಬಂದಿದ್ದಾರೆ. ಅಭಿವೃದ್ಧಿ ಹೊಂದಿದ ಮಧ್ಯಪ್ರದೇಶದಿಂದ ಅಭಿವೃದ್ಧಿ ಹೊಂದಿದ ಭಾರತಕ್ಕೆ ಪ್ರಯಾಣ ಬೆಳೆಸುವಲ್ಲಿ ಈ ಕಾರ್ಯಕ್ರಮ ಬಹಳ ಮುಖ್ಯವಾಗಿದೆ" ಎಂದು ಅವರು ಹೇಳಿದ್ದಾರೆ.

ಕೆಲವೇ ದಿನಗಳ ಹಿಂದೆ, ಪುಟ 2

# ಶುದ್ಧ ಕುಡಿಯುವ ನೀರು ಸರಬರಾಜು ಪಾಲಿಕೆಗೆ ಹಸ್ತಾಂತರ

ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಜವಾಬ್ದಾರಿಯನ್ನು ಬೆಂಗಳೂರು ಜಲಮಂಡಳಿ ನಿರ್ವಹಿಸುತ್ತಿದೆ. ಪ್ರಸ್ತುತ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಬಿಬಿಎಂಪಿ ಸುಪರ್ದಿನಲ್ಲಿದೆ. ಇದನ್ನು ತಕ್ಷಣದಿಂದಲೇ ಬೆಂಗಳೂರು ಜಲಮಂಡಳಿಯ ಸುಪರ್ದಿಗೆ ವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಅವರು ಪತ್ರದಲ್ಲಿ ತಿಳಿಸಿದ್ದಾರೆ. ಬೇಸಿಗೆ ಕಾಲದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ನೀರು ಪೂರೈಸುವ ಕೊಳವೆ ಬಾವಿಗಳು ಬತ್ತಿ ಹೋದಲ್ಲಿ ಈ ಘಟಕಗಳಿಗೆ ಬೇಕಾಗುವ ನೀರನ್ನು ಬೆಂಗಳೂರು ಜಲಮಂಡಳಿ ಮುಖಾಂತರವೇ ಪೂರೈಸಬೇಕಾಗುತ್ತದೆ. ಈ ಸಮಯದಲ್ಲಿ ಸಮನ್ವಯದ ಕೊರತೆ ಉಂಟಾಗಿ ನಾಗರಿಕರಿಗೆ ತೊಂದರೆಯಾಗುವುದನ್ನು ತಪ್ಪಿಸುವ ದೃಷ್ಟಿಯಿಂದ ಬೆಂಗಳೂರು ನಗರದ ನೀರು ಸರಬರಾಜು ನಿರ್ವಹಣೆ ಮಾಡುತ್ತಿರುವ ಬೆಂಗಳೂರು ಜಲಮಂಡಳಿಯವರಿಗೆ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಜವಾಬ್ದಾರಿ ವಹಿಸುವಂತೆಯೂ ಅವರು ಸೂಚಿಸಿದ್ದಾರೆ.

# ಸರ್ಕಾರಕ್ಕೆ ಪೂರ್ಣ ಬದ್ಧತೆ ಇದೆ: ಸಿಎಂ



ಮಹತ್ವದ ಕ್ರಮಗಳನ್ನು ಕೈಗೊಳ್ಳಬೇಕೆಂದು ಇತ್ತೀಚೆಗೆ ಚಿತ್ರದುರ್ಗದಲ್ಲಿ ನಡೆದ 13ನೇ ಅಖಿಲಭಾರತ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಪರಮಪೂಜ್ಯರು, ಗಣ್ಯರು, ಚಿಂತಕರು, ಅಭಿಪ್ರಾಯಪಟ್ಟಿದ್ದಾರೆ. ನಂತರದಲ್ಲಿಯೂ ಈ ಕುರಿತು ಹಲವು ಸಭೆಗಳನ್ನು ನಡೆಸಿ ಹಿಂತಚಿಂತಕರೆಲ್ಲರ ಅಭಿಪ್ರಾಯಗಳನ್ನು ಕ್ರೋಢಿಕರಿಸಲಾಗಿದೆ. ಅದರಂತೆ, ಕಾರ್ಯಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಪ್ರಸಕ್ತ ಸಾಲಿನ ಬಜೆಟ್ ನಿಂದಲೇ ಅಗತ್ಯ ಅನುದಾನ ಒದಗಿಸಬೇಕು.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ಬಸವಣ್ಣನ ಬೃಹತ್ ಪ್ರತಿಮೆ ಪ್ರತಿಷ್ಠಾಪಿಸಬೇಕು. ಜೊತೆಗೆ, ಬೆಂಗಳೂರಿನಲ್ಲಿ 25 ಎಕರೆ ಪ್ರದೇಶದಲ್ಲಿ ಅಕ್ಷರಧಾಮದ ಮಾದರಿಯಲ್ಲಿ ಬೃಹತ್ 'ಶರಣ ದರ್ಶನ' ಕೇಂದ್ರ ಸ್ಥಾಪಿಸಿ, ಅಲ್ಲಿ, ಉದ್ಯಾನ, ಗ್ರಂಥಾಲಯ, ಅತಿಥಿಕೇಂದ್ರ, ದಾಸೋಹ ಭವನ, ಸಭಾಂಗಣ ನಿರ್ಮಿಸಿ ಪ್ರವಾಸಿ ತಾಣವನ್ನಾಗಿಸಬೇಕು ಎಂಬುದನ್ನು ಬಾಲ್ಕಿ ಮಠದ ಬಸವಲಿಂಗ ಪಟ್ಟದೇವರು ಸ್ವಾಮೀಜಿ ಅವರು ಎಲ್ಲರ ಪರವಾಗಿ ಮುಖ್ಯಮಂತ್ರಿಯವರ ಗಮನಕ್ಕೆ ತಂದರು.

ಸರ್ಕಾರ ಅನುಭವ ಮಂಟಪ ಪುನರುಜ್ಜೀವನಕ್ಕೆ ಮುಂದಾಗಿತ್ತು. ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದು ಕಾಂಗ್ರೆಸ್ ಸರ್ಕಾರ ಎಂದರು.

**ಸ್ವಾಮೀಜಿಗಳ ನಿಯೋಗದ ಬೇಡಿಕೆಗಳು..**

ನಾಡಿನ ಸಾಂಸ್ಕೃತಿಕ ನಾಯಕ ಎಂದು ಘೋಷಿತರಾಗಿರುವ ವಿಶ್ವಗುರು ಬಸವೇಶ್ವರರ ವಿಚಾರಧಾರೆಯನ್ನು ಪರಿಣಾಮಕಾರಿಯಾಗಿ ಜನಮಾನಸಕ್ಕೆ ತಲುಪಿಸುವ ನಿಟ್ಟಿನಲ್ಲಿ ಈ ವರ್ಷದ ಬಜೆಟ್ ನಲ್ಲಿ ರೂ 100 ಕೋಟಿ ನೀಡುವ ಜೊತೆಗೆ, ಮುಂದಿನ ನಾಲ್ಕು ವರ್ಷಗಳ ಬಜೆಟ್ ನಲ್ಲಿ ತಲಾ 100 ಕೋಟಿಯಂತೆ ಒಟ್ಟು ರೂ 500 ಕೋಟಿ ಅನುದಾನ ನೀಡಬೇಕು. ಮುಖ್ಯಮಂತ್ರಿ ಭೇಟಿಗೂ ಮುನ್ನ ಈ ಸಂಬಂಧ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರ ರೇಸ್ ಕೋರ್ಸ್ ರಸ್ತೆಯ ಅಧಿಕೃತ ನಿವಾಸದಲ್ಲಿ ಬೆಳಿಗ್ಗೆ ಮಠಾಧೀಶರು, ಸಮುದಾಯದ ಸಚಿವರು, ಶಾಸಕರು ಸಭೆ ನಡೆಸಿದರು. ರಾಜ್ಯದೆಲ್ಲೆಡೆಯಿಂದ ಆಗಮಿಸಿದ್ದ ಸಮುದಾಯದ ಸ್ವಾಮೀಜಿಗಳು, ಶಾಸಕರು, ಮಾಜಿ ಶಾಸಕರು ಹಾಗೂ ಸಂಘ ಸಂಸ್ಥೆಗಳ ಪ್ರಮುಖರು ಸಭೆಯಲ್ಲಿ ಪಾಲ್ಗೊಂಡು ಚರ್ಚಿಸಿದರು. ನಂತರ, ಮುಖ್ಯಮಂತ್ರಿಯವರ ಅಧಿಕೃತ ನಿವಾಸ 'ಕಾವೇರಿ'ಗೆ ತೆರಳಿ ಮನವಿ ಸಲ್ಲಿಸಿದರು.

ಯುವ ಪೀಳಿಗೆಗೆ ಬಸವಣ್ಣ ಅವರನ್ನು ಪರಿಚಯಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕೆಲವು

ಎಲ್ಲ ಶರಣರ ಜನ್ಮ ಸ್ಥಳ, ಐಕ್ಯಸ್ಥಳ ಹಾಗೂ ಇತರೆ ಸ್ಮಾರಕಗಳ ರಕ್ಷಣೆಗಾಗಿ 'ಪ್ರತ್ಯೇಕ ಶರಣ ಸ್ಮಾರಕ ರಕ್ಷಣೆ ಪ್ರಾಧಿಕಾರ' ರಚಿಸಬೇಕು.

ಬಸವಕಲ್ಯಾಣದಲ್ಲಿ ನಿರ್ಮಿಸುತ್ತಿರುವ ಅನುಭವ ಮಂಟಪದ ಸದ್ಬಳಕೆಯಾಗಲು ಅಲ್ಲಿಯೇ 'ವಚನ ವಿಶ್ವವಿದ್ಯಾಲಯ' ಮತ್ತು ಸಂಶೋಧನ ಕೇಂದ್ರ ಆರಂಭಿಸಬೇಕು.

ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ 'ಬಸವಭವನ' ನಿರ್ಮಿಸಿ, ಅಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಿರಂತರವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಬೇಕು.

ವಚನ ಸಾಹಿತ್ಯ ಸಂಗ್ರಹ, ಪ್ರಕಟಣೆ, ಮರು ಪ್ರಕಟಣೆ, ಹಸ್ತಪ್ರತಿಗಳ ದಾಖಲೀಕರಣ, ಶರಣ ಕ್ಷೇತ್ರಗಳ ಅಧ್ಯಯನ ಮತ್ತು ದಾಖಲೀಕರಣ, ವಿಚಾರಸಂಕಿರಣ, ಸಮ್ಮೇಳನಗಳು, ವಚನಾಧಾರಿತ ಸಾಂಸ್ಕೃತಿಕ ಕಾರ್ಯಕ್ರಮಗಳು ಇತ್ಯಾದಿ ಚಟುವಟಿಕೆಗಳನ್ನು ನಡೆಸಲು ಶರಣ ಸಾಹಿತ್ಯ ಮತ್ತು ಸಂಸ್ಕೃತಿ ಪ್ರಸಾರಕ್ಕಾಗಿಯೇ ಇರುವ ಸಂಸ್ಥೆಗಳಿಗೆ ಅನುದಾನ ಒದಗಿಸಬೇಕು ಎಂದರು. ಮುಂದಿನ ಐದು ವರ್ಷಗಳಲ್ಲಿ 500 ಕೋಟಿ ಅನುದಾನ ಒದಗಿಸುವ ಮೂಲಕ ಸಾಂಸ್ಕೃತಿಕ ನಾಯಕ ಬಸವಣ್ಣನವರನ್ನು ಮುಂಬರುವ ಪೀಳಿಗೆಗಳಿಗೆ ಪರಿಚಯಿಸುವುದಕ್ಕೆ ಸಂಬಂಧಿಸಿದ ಈ ಕಾರ್ಯಯೋಜನೆಗಳಿಗೆ ಚಾಲನೆ ನೀಡಿ, ಇತಿಹಾಸ ಸದಾ ನೆನಪಿಸಿಕೊಳ್ಳುವಂತಹ ಕಾರ್ಯಕ್ಕೆ ಮುಂದಾಗಬೇಕು ಎಂದರು.



ಮೈಸೂರಿನಲ್ಲಿ ಪ್ರಮುಖರ ಜೊತೆ ಸಭೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿವೈ ವಿಜಯೇಂದ್ರ




ಹಾವೇರಿ ಜಿಲ್ಲೆಯ ಶಿಗ್ಗಾಂವ ಪಟ್ಟಣದಲ್ಲಿ ಕ್ಷತ್ರೀಯ ಮರಾಠಾ ಸಮಾಜ ತಾಲೂಕ ಹಾಗೂ ಶಹರ ಘಟಕದ ವತಿಯಿಂದ ಏರ್ಪಡಿಸಿದ ಛತ್ರಪತಿ ಶಿವಾಜಿ ಮಹಾರಾಜರ 398 ನೇಯ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿರವರು ಭಾಗವಹಿಸಿ ಮಾತನಾಡಿದರು. ಈ ಸಂಧರ್ಭದಲ್ಲಿ ಶ್ಚಂದ್ರಪ್ಪಜ್ಞ ಕಾಳೆ, ಸುಭಾಸ ಚವ್ಹಾಣ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು

## ಮೊದಲ ಪುಟದಿಂದ

# ವಿಕಸಿತ ಭಾರತಕ್ಕೆ ಸಂಕಲ್ಪ

ವಿಶ್ವ ಬ್ಯಾಂಕ್ ಮುಂಬರುವ ವರ್ಷಗಳಲ್ಲಿ ಭಾರತ ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ಉಳಿಯುತ್ತದೆ . ಆರ್ಥಿಕ ಸಹಕಾರ ಮತ್ತು ಅಭಿವೃದ್ಧಿ ಸಂಸ್ಥೆಯ ಪ್ರತಿನಿಧಿಯೊಬ್ಬರು, ವಿಶ್ವದ ಭವಿಷ್ಯ ಭಾರತದಲ್ಲಿದೆ ಎಂದು ಹೇಳಿದ್ದಾರೆ ಎನ್ನುವುದನ್ನು ನೆನಪು ಮಾಡಿದ್ದಾರೆ.

ಕೆಲವು ದಿನಗಳ ಹಿಂದೆ, ಹವಾಮಾನ ಬದಲಾವಣೆಯ ಕುರಿತಾದ ವಿಶ್ವಸಂಸ್ಥೆಯ ಸಂಘಟನೆಯೊಂದು ಭಾರತ ಸೌರಶಕ್ತಿಯ ಸೂಪರ್ ಪವರ್ ಎಂದು ಕರೆದಿದೆ. ಅನೇಕ ದೇಶಗಳು ಕೇವಲ ಮಾತನಾಡುತ್ತಿದ್ದರೂ, ಭಾರತ ಫಲಿತಾಂಶಗಳನ್ನು ತೋರಿಸುತ್ತದೆ ಎಂದು ಈ ಸಂಸ್ಥೆ ಹೇಳಿದೆ, "ಎಂದು ಅವರು ಹೇಳಿದ್ದಾರೆ. ಜಾಗತಿಕ ಹೂಡಿಕೆದಾರರ ಸಮ್ಮೇಳನದಲ್ಲಿ ಕೈಗಾರಿಕೋದ್ಯಮಿಗಳಲ್ಲಿ ಆದಿತ್ಯ ಬಿರ್ಲಾ ಗ್ರೂಪ್ ಅಧ್ಯಕ್ಷ ಕುಮಾರ್ ಮಂಗಲಂ ಬಿರ್ಲಾ, ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ, ಗೋದ್ರೇಜ್ ಇಂಡಸ್ಟ್ರೀಸ್ ಲಿಮಿಟೆಡ್ ಅಧ್ಯಕ್ಷ ಮತ್ತು ಎಂಡಿ ನಾದಿರ್ ಗೋದ್ರೇಜ್, ರಸ್ನಾ ಪ್ರೈವೇಟ್ ಲಿಮಿಟೆಡ್ ಗ್ರೂಪ್ ಅಧ್ಯಕ್ಷ ಪಿರುಜ್ ಖಂಬಟ್ಟಾ, ಭಾರತ್ ಫೋರ್ಜ್ ಲಿಮಿಟೆಡ್ ಅಧ್ಯಕ್ಷ ಮತ್ತು ಎಂಡಿ ಬಾಬಾ ಎನ್ ಕಲ್ಯಾಣಿ, ಸನ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ ಜಾಗತಿಕ ಕಾರ್ಯಾಚರಣೆ ಮುಖ್ಯಸ್ಥ ರಾಹುಲ್ ಅವಸ್ಥಿ ಮತ್ತು ಎಸಿಸಿ ಲಿಮಿಟೆಡ್ ಸಿಇಒ ನೀರಜ್ ಅಖೌರಿ ಭಾಗವಹಿಸಿದ್ದಾರೆ.

"ಇನ್ವೆಸ್ಟ್ ಎಂಪಿ ಗ್ಲೋಬಲ್ ಇನ್ವೆಸ್ಟರ್ ಶೃಂಗಸಭೆ" 2025 ಅನ್ನು ಉದ್ಘಾಟಿಸಲು ಆಗಮಿಸಿದ್ದ ಪ್ರಧಾನಿ ಮೋದಿ ಅವರನ್ನು ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಸನ್ಮಾನಿಸಿದರು.

# ತುಷ್ಟೀಕರಣ ರಾಜಕಾರಣ

ಹಿಂದೂಪರ ಸಂಘಟನೆಯವರು ಭಾಗವಹಿಸ್ತಿದ್ದಾರೆ ಎಂದು ತಿಳಿಸಿದರು. ಅಟ್ಟಹಾಸದ ಆಡಳಿತ ರಾಜ್ಯದಲ್ಲಿ ಮರುಕಳಿಸುತ್ತಿದೆ ಅನಿಸ್ತಿದೆ. ಪೊಲೀಸ್ ಠಾಣೆಗೇ ಕಲ್ಲೆಸೆಯುವ, ಪೊಲೀಸರನ್ನೇ ಎದುರಿಸುವ ಮಟ್ಟಕ್ಕೆ ಹೋಗಿದ್ದಾರೆ ಅಂದ್ರೆ ಪೊಲೀಸ್ ಇಲಾಖೆ, ಸರ್ಕಾರ ಅಸಹಾಯಕವಾಗಿದೆ. ಅನಿವಾರ್ಯವಾಗಿ ಹಿಂದೂಗಳ ರಕ್ಷಣೆಗೆ ನಾವು ನಿಲ್ಲಬೇಕಿದೆ ಎಂದು ಹೇಳಿದರು.

ಎಸ್ಕಾಂಗಳಿಗೆ ಜನರಿಂದಲೇ ಗೃಹ ಜ್ಯೋತಿ ಬಿಲ್ ವಸೂಲಿಗೆ ಅವಕಾಶ ಕೊಡುವಂತೆ ಕೋರಿ ಪ್ರಸ್ತಾವ ವಿಚಾರಕ್ಕೆ ಪ್ರತಿಕ್ರಿಯಿಸಿದ ವಿಜಯೇಂದ್ರ ಅವರು, ಇದಕ್ಕೆ ಸಿಎಂ ಸಿದ್ದರಾಮಯ್ಯ ಅವರು ಉತ್ತರ ಕೊಡಬೇಕಿದೆ. ರಾಜ್ಯ ಸುಭಿಕ್ಷವಾಗಿದೆ, ಜನ ನೆಮ್ಮದಿಯಿಂದ ಇದ್ದಾರೆ ಅಂತ ಸಿಎಂ ಭ್ರಮೆಯಲ್ಲಿದ್ದಾರೆ. ಸಿದ್ದರಾಮಯ್ಯ ಅವರು ಆಲ್ ಈಸ್ ವೆಲ್ ಭಾವನೆಯಿಂದ ಹೊರಗೆ ಬರಬೇಕು ಎಂದರು.

ಸಾರಿಗೆ ಸಂಸ್ಥೆಗಳಿಗೆ 7 ಸಾವಿರ ಕೋಟಿ ರೂ. ಬಾಕಿ ಕೊಡಬೇಕಿದೆ. ವೇತನ ಕೊಡ್ತಿಲ್ಲ. ಸರ್ಕಾರಿ ಇಲಾಖೆ, ಕಚೇರಿಗಳು 6 ಸಾವಿರ ಕೋಟಿ ರೂ. ಬಾಕಿ ವಿದ್ಯುತ್ ಬಿಲ್ ಕಟ್ಟಬೇಕಿದೆ. ಇವರ ಯೋಜನೆಗಳನ್ನು ನೋಡುತ್ತಿದ್ದರೆ ಗ್ಯಾರಂಟಿಗಳನ್ನು ನಿಲ್ಲಿಸುವ ಲಕ್ಷಣ ಕಾಣಿಸುತ್ತಿದೆ. ಇದನ್ನೆಲ್ಲ ನಾವು ಅಧಿವೇಶನದಲ್ಲಿ ಚರ್ಚೆ ಮಾಡುತ್ತೇವೆ ಎಂದು ಹೇಳಿದರು.

# ರೀಲ್ಸ್: ಪ್ರಪಾತಕ್ಕೆ ಬಿದ್ದ ಯುವಕ

ಗವಿ ಬೆಟ್ಟಕ್ಕೆ ಬಂದಿದ್ದ ರಾಕಿದ್, ಬೆಟ್ಟದ ತುದಿ ಯಲ್ಲಿ ನಿಂತು ರೀಲ್ಸ್ ಮಾಡುತ್ತಿದ್ದ ವೇಳೆ ಜಾರಿ ಬಿದ್ದ ಪರಿಣಾಮ ಆತನ ತಲೆ ಹಾಗೂ ಕಾಲಿಗೆ ಗಾಯಗಳಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳೀಯರು ಮತ್ತು ಯಸಳೂರು ಠಾಣೆ ಪೊಲೀಸರ ಸಹಾಯದಿಂದ ರಾಕಿದ್ ನನ್ನು ಮೇಲೆತ್ತಿ ತಕ್ಷಣವೇ ಶನಿವಾರಸಂತೆ ಅಸ್ಪತ್ರೆಗೆ ಕರೆದೊಯ್ಯಲಾಯಿತು. ನಂತರ ವೈದ್ಯರ ಸಲಹೆ ಮೇರೆಗೆ ಹಾಸನದ ಹಿಮ್ಸ್‌ಗೆ ಕರೆತಂದು ಚಿಕಿತ್ಸೆ ಕೊಡಿಸಲಾಗುತ್ತಿದೆ. ಯಸಳೂರು ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

# ಮರ ಬಿದ್ದು ಮಗು ಸಾವು

ಬಂದಿದ್ದರು. ಈ ವೇಳೆ ಈ ಅವಘಡ ಸಂಭವಿಸಿದೆ. ಮನೆಯ ಮುಂದೆ ಇದ್ದ ತೆಂಗಿನ ಮರ ಏಕಾ ಏಕಿ ಮುರಿದು ಬಿದ್ದಿದೆ ಮನೆಯವರು ಆತಂಕಗೊಂಡಿದ್ದಾರೆ.

ಮಗು ಅಲ್ಲೇ ಆಟವಾಡುವಾಗ ಗರಿಗಳು ತಲೆಯ ಮೇಲೆ ಬಿದ್ದು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದೆ. ತಾಯಿ ಮೋನಿಕಾ ಕಾಲು ಮುರಿದಿದ್ದು ಅವರನ್ನು ಬೆಂಗಳೂರಿನ ಆಸ್ಪತ್ರೆಯೊಂದಕ್ಕೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗೌರಿಬಿದನೂರು ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಕಂಡಕ್ಟರ್ ಆರೋಗ್ಯ ವಿಚಾರಿಸಿದ ಸಚಿವ

ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಂಡಕ್ಟರ್ ಮೇಲೆ ಉದ್ದೇಶಪೂರ್ವಕವಾಗಿ ಹಲ್ಲೆ ಮಾಡಲಾಗಿದೆ. ನಾವೆಲ್ಲ ಕಂಡಕ್ಟರ್ ಮಹದೇವಪ್ಪ ಪರ ಇದ್ದೇವೆ. ಹಲ್ಲೆ ಮಾಡಿದವರ ವಿರುದ್ಧ ಗೂಂಡಾಕಾಯ್ದೆ ಹಾಕಬೇಕು ಎಂದರು.

'ಹಲ್ಲೆಗೆ ಒಳಗಾಗಿರುವ ಮಹಾದೇವ ಅವರ ಆರೋಗ್ಯ ಸ್ಥಿರವಾಗಿದೆ. ಎರಡು ದಿನಗಳ ನಂತರ ಆಸ್ಪತ್ರೆಯಿಂದ ಬಿಡುಗಡೆ ಆಗಲಿದ್ದಾರೆ. ಇನ್ನು ತಮ್ಮ ಮೇಲೆ ಪುಟ 2

ಪೋಕ್ಸೊ ಪ್ರಕರಣ ದಾಖಲಾದ ಕಾರಣ ಮಹಾದೇವ ಆತಂಕಗೊಂಡಿದ್ದಾರೆ. ಈ ಪ್ರಕರಣ ದಾಖಲಿಸಿಕೊಳ್ಳುವಾಗ ಪೊಲೀಸರು ಸಾಮಾನ್ಯ ಜ್ಞಾನವನ್ನೂ ಬಳಸಿಲ್ಲ. ಈ ಪ್ರಕರಣ ಹಿಂದಕ್ಕೆ ಪಡೆಯುವ ಹಾಗೂ ಆರೋಪಿಗಳ ವಿರುದ್ಧ ಗೂಂಡಾ ಕಾಯ್ದೆಯಡಿ ಪ್ರಕರಣ ಜರುಗಿಸುವ ಸಂಬಂಧ ಗೃಹ ಸಚಿವ ಜಿ.ಪರಮೇಶ್ವರ ಅವರೊಂದಿಗೆ ಮಾತನಾಡುತ್ತೇನೆ' ಎಂದು ತಿಳಿಸಿದರು.

'ಕರ್ನಾಟಕ–ಮಹಾರಾಷ್ಟ್ರ ಮಧ್ಯೆ ಬಸ್ ಸಂಚಾರ ಸ್ಥಗಿತಗೊಂಡ ಕಾರಣ, ಜನರು ತೊಂದರೆ ಅನುಭವಿಸುತ್ತಿದ್ದಾರೆ. ಇದರಿಂದ ಸಾರಿಗೆ ನಿಗಮಗಳಿಗೂ ನಷ್ಟವಾಗುತ್ತದೆ. ಮಹಾರಾಷ್ಟ್ರದಲ್ಲಿ ನಮ್ಮ ಬಸ್ ಗೆ ಹಾನಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಲ್ಲಿನ ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದು ರಾಮಲಿಂಗರೆಡ್ಡಿ ತಿಳಿಸಿದರು.

ನಂತರ ಶಿವಸೇನೆಯ ಕಾರ್ಯಕರ್ತರು ಪುಣೆ ಮತ್ತು ಮತ್ತು ನೆರೆರಾಜ್ಯದ ಕೆಲಭಾಗಗಳಲ್ಲಿ ಕೆಎಸ್ಆರ್ಟಿಸಿ ಬಸ್‌ಗಳಿಗ ಮಸಿ ಬಳಿಯುವ ಕೆಲಸ ಮಾಡಿದ್ದಾರೆ. ಇದು ಸರಿಯಲ್ಲ, ಮಹಾರಾಷ್ಟ್ರದ ಸಾರಿಗೆ ಇಲಾಖೆ ಕಾರ್ಯದರ್ಶಿಯವರೊಂದಿಗೆ ಮಾತಾಡುವಂತೆ ತಮ್ಮ ಸಾರಿಗೆ ಇಲಾಖೆ ಕಾರ್ಯದರ್ಶಿಯವರಿಗೆ ಹೇಳಿರುವುದಾಗಿ ರೆಡ್ಡಿ ಹೇಳಿದರು.

ಬೇಕು ಅಂತಾನೆ ಪೋಕ್ಸೋ ಕೇಸ್ ಕೊಟ್ಟಿದ್ದಾರೆ

"ನಮ್ಮ ಕಂಡಕ್ಟರ್ ಮಹಾದೇವ ಹುಕ್ಕೇರಿ ಮೇಲೆ ಬೇಕು ಅಂತಾನೇ ಪೋಕ್ಸೋ ಕೇಸ್ ಕೊಟ್ಟಿದ್ದಾರೆ. ಅವತ್ತು ಬಸ್‌ನಲ್ಲಿ ಒಬ್ಬರು – ಇಬ್ಬರು ಇರಲಿಲ್ಲ. 90 ಜನ ಪ್ರಯಾಣಿಸುತ್ತಿದ್ದರು. ನೋಡೋಣ ಆ ಬಗ್ಗೆ ಪೊಲೀಸರು ತನಿಖೆ ನಡೆಸಲಿದ್ದಾರೆ" ಎಂದು ಹೇಳಿದ್ದಾರೆ.

, "ಮಹಾದೇವ ಎನ್ನುವ ಕಂಡಕ್ಟರ್ ಕಳೆದ ಐದು ವರ್ಷಗಳಿಂದ ಅದೇ ರೂಟಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಅವತ್ತು ಇಬ್ಬರು ಹುಡುಗ – ಹುಡುಗಿ ಬಸ್‌ನಲ್ಲಿ ಹತ್ತಿದ್ದರು. ಇಬ್ಬರೂ ಅಪ್ರಾಪ್ತರು. ಹುಡುಗ ಕೂಡ ಜಿರೋ ಟಿಕೆಟ್ ತೆಗೆದುಕೊಂಡು ಪ್ರಯಾಣಿಸಿದ್ದಾರೆ. ಆಗ ಕಂಡಕ್ಟರ್ ಕನ್ನಡದಲ್ಲಿ ಕೇಳಿದ್ದಾರೆ. ಅವರು ಮರಾಠಿಯಲ್ಲಿ ಮಾತನಾಡಿದ್ದಾರೆ. ಕಂಡಕ್ಟರ್‌ಗೆ ಮರಾಠಿ ಬರುವುದಿಲ್ಲ. ಅವರಿಗೆ ಕನ್ನಡ ಬರುವುದಿಲ್ಲವಂತೆ. ಹೀಗೆ ಮಾತಿಗೆ ಮಾತು ಬೆಳೆದಿದೆ. ಫೋನ್ ಮಾಡಿ ಮುಂದಿನ ನಿಲ್ದಾಣದಲ್ಲಿ ಅವರ ಕಡೆಯವರನ್ನು ಕರೆಸಿ ಕಂಡಕ್ಟರ್ ಮೇಲೆ ಹಲ್ಲೆ ಮಾಡಿದ್ದಾರೆ" ಎಂದು ವಿವರಿಸಿದರು.

ಮಹಾರಾಷ್ಟ್ರಕ್ಕೆ ಬಸ್ ಬಿಡುವ ಬಗ್ಗೆ ಮಾತನಾಡುತ್ತೇನೆ: "ಗಡಿ ವಿಚಾರದಲ್ಲಿ ಯಾವುದೇ ನಿರ್ಲಕ್ಷ್ಯ ಇಲ್ಲ. ನಮ್ಮ ಗಡಿ ನಮ್ಮದು, ಅವರ ಗಡಿ ಅವರದಷ್ಟೇ. ನಾನು ಘಟನೆ ಬಗ್ಗೆ ಮಾತನಾಡಿದ್ದೇನೆ. ಇಲ್ಲಿಯ ರಾಜಕಾರಣಿಗಳನ್ನು ನೀವು ಕೇಳಿಲ್ಲ. ಹಾಗಾಗಿ, ಅವರು ಮಾತನಾಡಿಲ್ಲ" ಎಂದು ರಾಮಲಿಂಗಾರೆಡ್ಡಿ ಸಮರ್ಥಿಸಿಕೊಂಡರು. "ಸಾರಿಗೆ ಇಲಾಖೆ ಕಾರ್ಯದರ್ಶಿ ಪ್ರಸಾದ ಅವರಿಗೆ ಮಹಾರಾಷ್ಟ್ರ ಅಧಿಕಾರಿಗಳ ಜೊತೆಗೆ ಮಾತನಾಡುವಂತೆ ತಿಳಿಸಿದ್ದೇನೆ. ಅದೇ ರೀತಿ ಮೊನ್ನೆ ಮಹಾರಾಷ್ಟ್ರ ಸಚಿವರು ಬೆಂಗಳೂರಿಗೆ ಬಂದಿದ್ದರು. ನೋಡೋಣ ಇವತ್ತು ಮಹಾರಾಷ್ಟ್ರಕ್ಕೆ ಬಸ್ ಬಿಡುವ ಬಗ್ಗೆ ಮಾತನಾಡುತ್ತೇನೆ" ಎಂದು ರಾಮಲಿಂಗಾರೆಡ್ಡಿ ಹೇಳಿದರು.

ಕೊಲೆಗಡುಕರು ಮತ್ತೊಬ್ಬರು ಎಲ್ಲಾ ಬಿಜೆಪಿ ಪಕ್ಷದಲ್ಲಿ: ಕಾಂಗ್ರೆಸ್‌ನಲ್ಲಿ ಭ್ರಷ್ಟರು, ಕೊಲೆಗಡುಕರಿಗೆ ರಕ್ಷಣೆ ಇದೆ ಎಂಬ ಸಿ.ಟಿ.ರವಿ ಆರೋಪಕ್ಕೆ "ಅಂತವರೆಲ್ಲಾ ಅವರ ಪಕ್ಷದಲ್ಲೆ ಇದ್ದಾರಲ್ಲ. ಭ್ರಷ್ಟರು, ಕೊಲೆಗಡುಕರು ಮತ್ತೊಬ್ಬರು ಎಲ್ಲಾ ಬಿಜೆಪಿ ಪಕ್ಷದಲ್ಲೆ ಇದ್ದಾರೆ. ಅವರಿಗೆ ಬೆಂಬಲಿಸುವುದು ಬಿಜೆಪಿಯವರು. ನಮ್ಮ ಪಕ್ಷದಲ್ಲಿ ಯಾರೂ ಅಂತವರಿಲ್ಲ. ನಮ್ಮಲ್ಲಿ ಸಚ್ಚಾರಿತ್ರ್ಯವುಳ್ಳವರಿದ್ದಾರೆ" ಎಂದು ರಾಮಲಿಂಗಾರೆಡ್ಡಿ ತಿರುಗೇಟು ಕೊಟ್ಟರು.

7 ಜನ ಹಿರಿಯ ಸಚಿವರನ್ನು ಕೈ ಬಿಡುವ ವಿಚಾರಕ್ಕೆ, "ಗೊತ್ತಿಲ್ಲ, ಅದು ನಿಮಗೆ ಗೊತ್ತಿರಬಹುದು" ಎಂದು ಮಾಧ್ಯಮಗಳಿಗೆ ಮರು ಪ್ರಶ್ನಿಸಿದ ರಾಮಲಿಂಗಾರೆಡ್ಡಿ, ಗೃಹ ಸಚಿವ ಪರಮೇಶ್ವರ ರಾಜೀನಾಮೆ ಹೇಳಿಕೆ ಬಗ್ಗೆಯೂ "ಗೊತ್ತಿಲ್ಲ. ಗೃಹ ಜ್ಯೋತಿ ಹಣವನ್ನು ಮೊನ್ನೆ ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದ್ದಾರೆ" ಎಂದರು.

# ಹೊಡೆದವರನ್ನ ರಕ್ಷಣೆ ಮಾಡಬೇಕಾ?

ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ದೌರ್ಜನ್ಯ ಪ್ರಕರಣ ಕುರಿತು ಪ್ರತಿಕ್ರಿಯಿಸಿದ ಹೆಚ್.ಡಿಕೆ, ಈ ಸರ್ಕಾರ ಯಾರಿಗೆ ರಕ್ಷಣೆ ಕೊಡುತ್ತದೆ. ಮಂತ್ರಿಗಳೊಬ್ಬರು ಮರಾಠಿಯಲ್ಲೇ ಭಾಷಣ ಮಾಡಿದ್ದಾರೆ. 2006–07 ರಲ್ಲಿ ನಾನು ಸಿಎಂ ಆಗಿದ್ದೆ. ಮನಮೋಹನ್ ಸಿಂಗ್ ಬಳಿ ನಿಯೋಗ ಹೋಗಿದ್ದರು. ಬೆಳಗಾವಿಯನ್ನ ಮಹಾರಾಷ್ಟ್ರಕ್ಕೆ ಸೇರಿಸುವ ಪ್ರಯತ್ನ ಮಾಡಿದ್ದರು ಎಂದು ವಾಗ್ದಾಳಿ ನಡೆಸಿದರು.

**ಗೃಹಸಚಿವರಿಗೆ ಪೊಲಿಟಿಕಲ್ ವೈರಾಗ್ಯ:** ಗೃಹ ಸಚಿವರು ರಾಜೀನಾಮೆ ನೀಡುವ ಮಾತು ವಿಚಾರ, ಗೃಹಸಚಿವರಿಗೆ ಪೊಲಿಟಿಕಲ್ ವೈರಾಗ್ಯ ಬಂದ ಆಗಿದೆ. ಮರ್ಯಾದಸ್ಥರು ಇರುವುದು ಒಳ್ಳೆಯದಲ್ಲ ಎಂದು ಅನಿಸಿರಬೇಕು ಎಂದು ಹೆಚ್.ಡಿಕೆ ವ್ಯಂಗ್ಯವಾಡಿದರು. ಮಹದೇವಪ್ಪ ಹೇಳುತ್ತಾರೆ ಸಿಎಂ ರೆಕಾರ್ಡ್ ಮಾಡಬೇಕು ಅಂತಾರೆ. ಮಹದೇವಪ್ಪ ಅವರೇ, ಎಷ್ಟು ವರ್ಷ ಆಡಳಿತ ನಡೆಸಿದ್ದೀರಿ ಅನ್ನೋದಲ್ಲ. ಈ ನಾಡಿನ ಜನರ ಎಷ್ಟು ಸಮಸ್ಯೆ ಬಗೆಹರಿಸಿದ್ದೀರಿ ಅನ್ನೋದು ಮುಖ್ಯ. ನಮಗೆ 20 ತಿಂಗಳ, 14 ತಿಂಗಳ ಆಡಳಿತ ತೃಪ್ತಿ ಇದೆ. ಗ್ಯಾರೆಂಟಿ ಯೋಜನೆ ಯಾರಪ್ಪನ ದುಡ್ಡು. ಮೆಟ್ರೋ ದರಏರಿಸಿ ಹಣ ಕೊಡೋಕೆ ನೀವೇ ಆಗಬೇಕಾ?. ಈ ರೀತಿ ದರ ಏರಿಸಿದರೆ ನಾನು 10 ಸಾವಿರ ರೂ ಕೊಡುತ್ತೇನೆ ಎಂದು ಹೆಚ್.ಡಿಕೆ ಟಾಂಗ್ ಕೊಟ್ಟರು.

ಕಳೆದ ಕೆಲವು ದಿನಗಳಿಂದ ಅನಾರೋಗ್ಯ ಕಾಡುತ್ತಿದೆ. ಹಲವು ದಿನಗಳ ಬಳಿಕ ಈವತ್ತೇ ಮನೆಯಿಂದ ಹೊರ ಬಂದಿರುವುದು. 19 ನೇ ಕಂತಿನ



ಕಿಸಾನ್ ಹಣ ಬಿಡುಗಡೆ ಕಾರ್ಯಕ್ರಮದಲ್ಲಿ ಪ್ರಧಾನಿಮೋದಿ ಅವರ ವಿಡಿಯೋ ಕಾನ್ಫರೆನ್ಸ್ ಕಾರ್ಯಕ್ರಮದಲ್ಲಿ ಇಂದು ಭಾಗಿಯಾಗಲಿದ್ದೇನೆ ಎಂದರು.

ರೈತರು, ಮಹಿಳೆಯರು, ಯುವಕರು, ಮಧ್ಯಮ ವರ್ಗದ ಜನರಿಗೆ ಅನುಕೂಲ ಮಾಡುವುದು ಈ ಬಾರಿಯ ಬಜೆಟ್ ಆಶಯವಾಗಿದೆ. ಈ ಬಾರಿ 50 ಲಕ್ಷ ಕೋಟಿ ರೂ ಆಯವ್ಯಯ ಮಂಡನೆ ಮಾಡಲಾಗಿದೆ. 11.20 ಲಕ್ಷ ಕೋಟಿ ರೂ ಕ್ಯಾಪಿಟಲ್ ಎಕ್ಸ್‌ಪೆಂಡಿಚರ್ ಗೆ ತೀರ್ಮಾನ ಮಾಡಲಾಗಿದೆ. ರೈತರ ಕೃಷಿವಲಯಕ್ಕೆ 1.72 ಲಕ್ಷ ರೂ ಅನುದಾನ ನೀಡಲಾಗುತ್ತಿದೆ. ಹಿಂದುಳಿದ ನೂರು ಜಿಲ್ಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಸ್ಟಾರ್ಟಪ್ ಗಳ ಮೂಲಕ ಆ ಜಿಲ್ಲೆಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ. ಮೀನುಗಾರಿಕೆ, ಹೈನುಗಾರಿಕೆ, ಚರ್ಮೋದ್ಯಮಕ್ಕೆ ಒತ್ತು, ಯುವಕರಿಗೆ ಲೆದರ್ ಇಂಡಸ್ಟ್ರಿ ಮೂಲಕ ಉದ್ಯೋಗ ಸೃಷ್ಟಿಸುವ ಗುರಿ ಹೊಂದಿದ್ದೇವೆ ಎಂದಿದ್ದಾರೆ.

# ಅಪಘಾತ: 6 ಸಾವು

ಮೃತರು ದುರ್ದೈವಿಗಳು.

ಗಾಯಗೊಂಡ ಮುಸ್ತಾಕ್ ಶಿಂಧಿಕುರಬೇಟ, ಸದಾಶಿವನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ. ಎರಡು ದಿನಗಳ ಹಿಂದೆ ಗೋಕಾಕ್‌ನಿಂದ ಕ್ರೂಸರ್ ವಾಹನದಲ್ಲಿ ಭಕ್ತರು ಪ್ರಯಾಗ್‌ರಾಜ್‌ನ ಕುಂಭಮೇಳಕ್ಕೆ ತೆರಳುತ್ತಿದ್ದು, ಮುಂಜಾನೆ ಕ್ರೂಸರ್ ವಾಹನ ಚಾಲಕನ ನಿಯಂತ್ರಣ ತಪ್ಪಿ ಬಸ್‌ಗೆ ಡಿಕ್ಕಿ ಹೊಡೆದು ಈ ದುರ್ಘಟನೆ ಸಂಭವಿಸಿದೆ.

ವೇಗವಾಗಿ ಬರುತ್ತಿದ್ದ ಕಾರು, ಜಬಲ್ಪುರ ಜಿಲ್ಲೆಯ ಹೆದ್ದಾರಿಯಲ್ಲಿ ಎದುರುಗಡೆಯಿಂದ ಬರುತ್ತಿದ್ದ ಖಾಸಗಿ ಬಸ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ 6 ಮಂದಿ ಸ್ಥಳದಲ್ಲಿಯೇ ಸಾವು ಕಂಡಿದ್ದರೆ, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕದ ಜೀಪ್ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಿಂದ ಹಿಂತಿರುಗುತ್ತಿದ್ದಾಗ ಖಿತೌಲಾ ಪೊಲೀಸ್ ಠಾಣೆ ವ್ಯಾಪ್ತಿಯ ಪಹ್ರೇವಾ ಗ್ರಾಮದ ಬಳಿ ಈ ಘಟನೆ ನಡೆದಿದೆ ಎಂದು ಜಬಲ್ಪುರ ಕಲೆಕ್ಟರ್ ದೀಪಕ್ ಸಕ್ಸೇನಾ ತಿಳಿಸಿದ್ದಾರೆ.

ಜೀಪ್ ಚಾಲಕ ಕಾರ್‌ನ ನಿಯಂತ್ರಣ ಕಳೆದುಕೊಂಡಿದ್ದರ ಪರಿಣಾಮವಾಗಿ ಮೊದಲು ವಾಹನವು ರಸ್ತೆ ಡಿವೈಡರ್‌ಗೆ ಡಿಕ್ಕಿ ಹೊಡೆದು, ಬಳಿಕ ಮರಕ್ಕೆ ಬಡಿದಿದೆ.

ಆ ನಂತರ ಹೆದ್ದಾರಿಯ ಇನ್ನೊಂದು ಬದಿಗೆ ಹಾರಿ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಬಸ್‌ಗೆ ಡಿಕ್ಕಿ ಹೊಡೆದಿದೆ ಎಂದು ಮಾಹಿತಿ ನೀಡಿದ್ದಾರೆ.

ಆರು ಜನರು ಸ್ಥಳದಲ್ಲೇ ಸಾವನ್ನಪ್ಪಿದರು. ಇನ್ನಿಬ್ಬರು ಗಾಯಗೊಂಡಿದ್ದು, ಸಿಹೋರಾ ಪಟ್ಟಣದ ವೈದ್ಯಕೀಯ ಸೌಲಭ್ಯದಲ್ಲಿ ಪ್ರಾಥಮಿಕ ಚಿಕಿತ್ಸೆಯ ನಂತರ ಅವರನ್ನು ಜಬಲ್ಪುರ ವೈದ್ಯಕೀಯ ಕಾಲೇಜಿಗೆ ಕರೆದೊಯ್ಯಲಾಯಿತು ಎಂದು ಅಧಿಕಾರಿ ತಿಳಿಸಿದ್ದಾರೆ.

ಪ್ರಯಾಗ್‌ರಾಜ್‌ನಿಂದ ಹಿಂತಿರುಗಿ ಜಬಲ್‌ಪುರ ಮೂಲಕ ಕರ್ನಾಟಕಕ್ಕೆ ಹೋಗುತ್ತಿದ್ದರು ಎಂದು ಮಾಹಿತಿ ನೀಡಿದ್ದಾರೆ.

ಸ್ವಲ್ಪ ಹೊತ್ತು ನಿಂತ ನಂತರ, ಬಸ್ ಚಾಲಕ ತನ್ನ ವಾಹನದೊಂದಿಗೆ ಸ್ಥಳದಿಂದ ಹೊರಟುಹೋಗಿದ್ದಾನೆ, ಬಸ್ ಅನ್ನು ಪತ್ತೆಹಚ್ಚಲು ಪ್ರಯತ್ನಗಳು ನಡೆಯುತ್ತಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಪಘಾತದ ಬಗ್ಗೆ ಮಾಹಿತಿ ಪಡೆದ ಕೂಡಲೇ ಜಿಲ್ಲಾಧಿಕಾರಿ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಸ್ಥಳಕ್ಕೆ ತಲುಪಿ ಪರಿಶೀಲನೆ ಮಾಡಿದ್ದಾರೆ.

ಬೀದರ್ ಗೆ ಆಗಮನ:

ಉತ್ತರ ಪ್ರದೇಶದಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದ ಬೀದರ್‌ನ 6 ಮಂದಿಯ ಪಾರ್ಥಿವ ಶರೀರ ಇಂದು ತವರಿಗೆ ಮರಳಲಿದೆ. 6 ಮಂದಿಯ ಮೃತದೇಹಗಳು 3 ಅಂಬುಲೆನ್ಸ್‌ಗಳ ಮೂಲಕ ಕೆಲವೇ ಗಂಟೆಗಳಲ್ಲಿ ಬೀದರ್ ತಲುಪಲಿದೆ.

ಮೃತದೇಹಗಳು ಮಹಾರಾಷ್ಟ್ರದ ನಾಂದೇಡ್‌ಗೆ ತಲುಪಿದ್ದು, ನಂತರ ಮಧ್ಯಾಹ್ನದ ವೇಳೆಗೆ ಮೃತದೇಹಗಳು ಬೀದರ್‌ಗೆ ತಲುಪಲಿದೆ. ಕುಟುಂಬಸ್ಥರು ಇಂದೇ ಬೀದರ್‌ನ ಗುಂಪಾ ರಸ್ತೆಯಲ್ಲಿರುವ ಚಿತಾಗಾರದಲ್ಲಿ ಅಂತ್ಯಕ್ರಿಯೆ ನೆರವೇರಿಸಲ್ಲಿದ್ದಾರೆ.

ಬೀದರ್‌ನ ಲಾಡಗೇರಿ ನಗರದ ನಿವಾಸಿಗಳು ಮಹಾ ಕುಂಭಮೇಳದಲ್ಲಿ ಪುಣ್ಯಸ್ನಾನಕ್ಕೆಂದು ತೆರಳಿದ್ದರು. ಈ ವೇಳೆ ಮಿರಾಜಾಪೂರ್ ಜಿಲ್ಲೆಯ ರೂಪಾಪೂರ ಬಳಿ ಅಪಘಾತ ಸಂಭವಿಸಿ 6 ಮಂದಿ ಸಾವನ್ನಪ್ಪಿದ್ದರು.

# ಉದಯಗಿರಿ ಗಲಾಟೆ: ಬಿಜೆಪಿಗೆ ರಾಜಕೀಯ ಅಸ್ತ್ರ

ಇಲ್ಲಸಲ್ಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದರು.

ಬಿಜೆಪಿಯವರು ಮೈಸೂರಿನಲ್ಲಿ ಇಂದು ಪ್ರತಿಭಟನೆ ಮಾಡಲು ಅನುಮತಿ ಕೋರಿ ಪೊಲೀಸರಿಗೆ ಮನವಿ ಮಾಡಿದ್ದರು. ಪ್ರತಿಭಟನೆ ನಡೆಸುವುದಕ್ಕೆ ಅನುಮತಿ ನೀಡಲು ಪೊಲೀಸರು ನಿರಾಕರಿಸಿದ್ದಾರೆ. ಈ ವಿಚಾರವಾಗಿ ಅನುಮತಿ ಕೋರಿ ಹೈಕೋರ್ಟ್‌ಗೆ ಹೋಗಿದ್ದಾರೆ. ಕೋರ್ಟ್‌ನಲ್ಲಿ ಏನು ತೀರ್ಮಾನ ಬರುತ್ತದೆಯೇ ನೋಡಬೇಕು ಎಂದು ಹೇಳಿದರು.

ಮೈಸೂರು ಗಲಾಟೆ ವಿಚಾರದಲ್ಲಿ ಹೆಚ್ಚು ರಾಜಕೀಯ ಮಾಡುವ ಬದಲು, ಯಾರು ತಪ್ಪು ಮಾಡಿದ್ದಾರೆ ಅವರ ವಿರುದ್ಧ ಕ್ರಮ ತೆಗೆದುಕೊಳ್ಳಲು ನಮಗೆ ಅವಕಾಶ ಮಾಡಿದರೆ ಒಳ್ಳೆಯದು. ಅದನ್ನು ಬಿಟ್ಟು ರಾಜಕೀಯ ಮಾಡಿದರೆ ಸರಿ ಹೋಗುವುದಿಲ್ಲ ಎಂದು ಎಚ್ಚರಿಸಿದರು.

ಮತ್ತೊಂದೆಡೆ ಮಂಗಳೂರು ಜೈಲಿನಲ್ಲಿ ಮಾದಕ ವಸ್ತು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಿಶೀಲನೆ ನಡೆಸುವಂತೆ ಸೂಚಿಸಲಾಗಿದೆ. ಡ್ರಗ್ಸ್ ಪೂರೈಕೆ ಮಾಡಿದವರು ಯಾರು? ಹೇಗೆ ಪೂರೈಕೆಯಾಗಿದೆ ಎಂಬುದನ್ನು ತನಿಖೆ ನಡೆಸಲಿದ್ದಾರೆ. ಅಕ್ರಮ ಚಟುವಟಿಕೆಗಳು ಕಂಡುಬಂದಾಗಲೆಲ್ಲ ಕಾನೂನು ಕ್ರಮ ತೆಗೆದುಕೊಳ್ಳಲಾಗಿದೆ. ಮಂಗಳೂರು ಹೊಸ ಜೈಲು ಕಟ್ಟಡ ನಿರ್ಮಾಣ ನಡೆಯುತ್ತಿದೆ. ಪೂರ್ಣಗೊಂಡ ಬಳಿಕ ಸ್ಥಳಾಂತರಿಸಲಾಗುವುದು ಎಂದು ಹೇಳಿದರು.

ಪ್ರತಿ ಸಲ ಗಡಿಭಾಗದಲ್ಲಿ ಭಾಷಾ ಆಧಾರದ ಮೇಲೆ ಆಗುವ ಗಲಾಟೆ ವೇಳೆ ಬಹಳ ಎಚ್ಚರಿಕೆಯಿಂದ ಮಹಾರಾಷ್ಟ್ರದವರು ನಡೆದುಕೊಳ್ಳಬೇಕು. ಅದನ್ನು ಹೆಚ್ಚು ಬೆಳೆಯಲು ಬಿಡಬಾರದು. ನಮ್ಮಲ್ಲಿ ಅಂತಹ ಪ್ರಕರಣಗಳು ಆದಾಗ ಕ್ರಮ ತೆಗೆದುಕೊಳ್ಳಲಾಗುತ್ತದೆ. ಮಹಾರಾಷ್ಟ್ರದವರು ಕಾನೂನಿಗೆ ವಿರುದ್ಧವಾಗಿ ನಡೆದುಕೊಳ್ಳುವುದು ಸರಿಯಲ್ಲ ಎಂದು ಗೃಹ ಸಚಿವರು ಎಚ್ಚರಿಸಿದರು.

ಕಾಂಗ್ರೆಸ್ ನಾಯಕರು ದೆಹಲಿ ಪ್ರವಾಸ ಕೈಗೊಳ್ಳುತ್ತಿರುವ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅನೇಕ ಬಾರಿ ಕೆಲಸ ಕಾರ್ಯಗಳ ನಿಮಿತ್ತ ದೆಹಲಿಗೆ ಹೋಗುತ್ತಾರೆ. ನಾನು ಒಂದು ವರ್ಷದ ನಂತರ ದೇಹಲಿಗೆ ಹೋಗಿದ್ದೆ. ಖಾಸಗಿ ಕೆಲಸದ ನಿಮಿತ್ತ ದೆಹಲಿಗೆ ಹೋಗಿರುವುದಾಗಿ ತಿಳಿಸಿದ್ದೆ. ದೆಹಲಿಗೆ ಹೋದಾಗ ಪಕ್ಷದ ಕಚೇರಿಗೆ ಭೇಟಿ ನೀಡುವುದು ಸಹಜವಾದ ಪ್ರಕ್ರಿಯೆ. ಇದನ್ನು ಬೇರೆ ರೀತಿಯಾಗಿ ಅರ್ಥೈಸಿಕೊಳ್ಳುವುದರಿಂದ ಪ್ರಯೋಜನವಿಲ್ಲ ಎಂದು ಹೇಳಿದರು.

ಸಚಿವ ಸ್ಥಾನಕ್ಕೆ ರಾಜೀನಾಮೆ ಹೇಳಿಕೆಯ ಕುರಿತು ಪ್ರತಿಕ್ರಿಯಿಸಿದ ಅವರು, ಕೊರಟಗೆರೆಯಲ್ಲಿ ಕಾರ್ಯಕರ್ತರೊಂದಿಗೆ ಮಾತನಾಡುವಾಗ ಅವರ ಅನಿಸಿಕೆ ಆಧಾರದ ಮೇಲೆ ಮಾತನಾಡಿದ್ದೇನೆ. ಅದಕ್ಕೆ ಅಷ್ಟೊಂದು ಮಹತ್ವ ಕೊಡುವ ಅಗತ್ಯತೆ ಇಲ್ಲ. ಇದರಿಂದ ಯಾವ ಸಂಚಲನ ಮಾಡಬೇಕಾದ ಅಗತ್ಯವಿಲ್ಲ. ನನ್ನ ರಾಜಕೀಯದ ವಿಚಾರ ಕೊರಟಗೆರೆ ಜನತೆಗೆ ಬಿಟ್ಟಿರುವುದು. ಕೊರಟಗೆರೆ ಜನ ನನ್ನನ್ನು ಆರಿಸಿದ್ದಾರೆ. ಅವರ ಏನು ಆಪೇಕ್ಷೆ ಪಡುತ್ತಾರೋ, ಅದನ್ನು ಮಾತಾಡಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದರು. ಸಿಎಂ ಆಗಲಿ ಎಂದು ಅಪೇಕ್ಷೆಪಡುತ್ತಾರೆಯೇ ಎಂದ ಮಾಧ್ಯಮದವರ ಪ್ರಶ್ನೆಗೆ, ನಾನು ಅದ್ಯಾವುದರ ಬಗ್ಗೆಯೂ ಮಾತನಾಡುವುದಿಲ್ಲ. ಮುಖ್ಯಮಂತ್ರಿಗಳ ವಿಚಾರ, ಕೆಪಿಸಿಸಿ ಅಧ್ಯಕ್ಷರ ವಿಚಾರದಲ್ಲಿ ಯಾವುದನ್ನು ಬಹಿರಂಗವಾಗಿ ಮಾತನಾಡುವುದಿಲ್ಲ. ನಮ್ಮ ಅನಿಸಿಕೆಗಳನ್ನು ಹೈಕಮಾಂಡ್ ಮುಂದೆ ಹೇಳುವಂತಹದು ನಮ್ಮ ಪಕ್ಷದಲ್ಲಿನ ಪ್ರಕ್ರಿಯೆ. ಇದನ್ನು ಪಕ್ಷದ ಅಧ್ಯಕ್ಷರು, ಮುಖ್ಯಮಂತ್ರಿಗಳು ಮಾಡುತ್ತಾರೆ. ನಾನು ಸೇರಿದಂತೆ ಎಲ್ಲರೂ ಮಾಡುತ್ತೇವೆ ಎಂದು ಹೇಳಿದರು.

# ಎಸ್‌ಸಿ-ಎಸ್‌ಟಿ ಸಭೆಯಲ್ಲಿ ದೂರುಗಳ ಸುರಿಮಳೆ!

**ಚಾಮರಾಜನಗರ:** ಠಾಣೆಗಳಲ್ಲಿ ದೂರುದಾರರೊಂದಿಗೆ ಅಸಭ್ಯ ವರ್ತನೆ, ಅವ್ಯಾಚ್ಯ ಪದ ಬಳಸುತ್ತಿರುವ ಇನ್ಸ್ ಪೆಕ್ಟರ್ ಮೇಲೆ ಕ್ರಮ ವಹಿಸುವಂತೆ ದೂರುದಾರೊಬ್ಬರು ಎಸ್‌ಸಿ-ಎಸ್‌ಟಿ ಸಭೆಯಲ್ಲಿ ಎಸ್ಪಿ ಬಿ.ಟಿ.ಕವಿತ ಅವರನ್ನು ಆಗ್ರಹಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಎಸ್‌ಸಿ-ಎಸ್‌ಟಿ ಮುಖಂಡರ ಸಭೆಯಲ್ಲಿ ದೂರುಗಳ ಸುರಿಮಳೆ ಕೇಳಿಬಂದವು. ಅಂಬಳೆ ಗ್ರಾಮದ ಶ್ರೀನಿವಾಸ್ ಮಾತನಾಡಿ, ದೂರು ನೀಡಲು ಹೋಗಿದ್ದವರ ಮೇಲೆ ಅಸಭ್ಯವಾಗಿ ಮಾತನಾಡಿರುವ ಯಳಂದೂರು ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಹನುಮಂತ ಉಪ್ಪಾರ್ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಒತ್ತಾಯಿಸಿದರು.

ಈ ಸಂಬಂಧ ಎಸ್‌ಪಿ ಅವರು ಉತ್ತರಿಸಿ ಸಂಯಮದಿಂದ ವರ್ತಿಸುವಂತೆ ಸೂಚಿಸಿ ಕ್ರಮವಹಿಸುವುದಾಗಿ ಭರವಸೆ ನೀಡಿದರು.

ಕದಂಬ ಸೇನೆಯ ಅಂಬರೀಶ್ ಮಾತನಾಡಿ, ಠಾಣೆಗಳಲ್ಲಿ ಸಂದರ್ಶಕರ ಪುಸ್ತಕ ಇದ್ದರೂ ಉಪಯೋಗವಿಲ್ಲ.. ಅದನ್ನ ಬರೆದುಕೊಳ್ಳುವುದಿಲ್ಲ. ಠಾಣೆಗಳು ಕುರಿದಂದೆಗಳಾಗಿದೆ. ಅಲ್ಲದೆ ಕೆಲವರು ಪೊಲೀಸರ ಸೋಗಿನಲ್ಲಿ ಕರೆ ಮಾಡಿ ಬ್ಲಾಕ್ ಮೆಲ್ ಮಾಡುತ್ತಾರೆ.. ಹಣ ವಸೂಲಿ ಮಾಡುತ್ತಾರೆ ಎಂದು ದೂರಿದರು. ಪ್ರತಿಕ್ರಿಯಿಸಿದ ಎಸ್‌ಪಿ ಅವರು ಬ್ಲಾಕ್ ಮೆಲ್ ಸಂಬಂಧ ದೂರು ಸಲ್ಲಿಸಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಬಸವಾಪುರ ಗ್ರಾಮದ ನಾಗರಾಜು ಮಾತನಾಡಿ, 1995ರಲ್ಲಿ ಸುಬ್ಬರಾವ್ ಎಂಬುವವರು ತಮ್ಮ ಒಂದು ಎಕರೆ ಜಮೀನನನ್ನು ತಮಿಳುನಾಡಿನ ವೇಲುಮಣಿ ಎಂಬುವವರಿಗೆ ಮಾರಾಟ ಮಾಡಿದ್ದಾರೆ. ಪ್ರಸ್ತುತ ವೇಲುಮಣಿ ಎಂಬುವವರು ತಮ್ಮ ಸುತ್ತ ಇರುವ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದು 3 ಎಕರೆ ಇದೆ ಅಂತ ಅಕ್ಕಪಕ್ಕದವರಿಗೆ ತೊಂದರೆ ಕೊಡುತ್ತಿದ್ದಾರೆ. ಆದ್ದರಿಂದ ಸರ್ವೆ ಮಾಡಿಸಿ ಸರ್ಕಾರಿ ಆಸ್ತಿಯನ್ನು ರಕ್ಷಣೆ ಮಾಡುವ ಜೊತೆಗೆ ಜನರಿಗೆ ತೊಂದರೆ ಕೊಡುತ್ತಿರುವ ವೇಲುಮಣಿ ವಿರುದ್ಧ ಸೂಕ್ತ ಕಾನುನು ಕ್ರಮ ಜರುಗಿಸಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಎಸ್ಪಿ, ಈ ಸಂಬಂಧ ಸೂಕ್ತ ಕ್ರಮವಹಿಸುವುದಾಗಿ ಭರವಸೆ ನೀಡಿದರು.



ದಸಂಸ ಮುಖಂಡ ದೊಡ್ಡಿಂದುವಾಡಿ ಸಿದ್ದರಾಜು ಮಾತನಾಡಿ, ಜಿಲ್ಲೆಯಲ್ಲಿ ದಲಿತರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣ, ಪರಿಹಾರ, ಮುಕ್ತಾಯಗೊಂಡಿರುವ ಪ್ರಕರಣಗಳ ಬಗ್ಗೆ ಮಾಹಿತಿ ಕೊಡಬೇಕು. ಅಲ್ಲದೇ ಹನೂರು ಭಾಗದಲ್ಲಿ ಗಾಂಜಾ ಪ್ರಕರಣಗಳು ಜಾಸ್ತಿಯಾಗುತ್ತಿದ್ದು ಇದಕ್ಕೆ ಕಡಿವಾಣ ಹಾಕಬೇಕು ಎಂದು ಮನವಿ ಮಾಡಿದರು.

> ಜಿಲ್ಲೆಗಳಲ್ಲಿ ಅಪರಾಧ ಪ್ರಕರಣಗಳನ್ನ ಪತ್ತೆ ಹಚ್ಚಿ ಕ್ರಮ ಕೈಗೊಳ್ಳಲಾಗುತ್ತಿದೆ. ಸಂಚಾರಿ ಅಪರಾಧ ಸಂಬಂಧವೂ ಕ್ರಮಕೈಗೊಳ್ಳ ಲಾಗಿದೆ. ಡ್ರಗ್ ಸಂಬಂಧಿತ ಜಾಗೃತಿ ಅರಿವು ಕಾರ್ಯಕ್ರಮ ಮಾಡಲಾಗುತ್ತಿದೆ. ಈ ಸಂಬಂಧ ನಿಕೋಟಿಮ್ ಶ್ವಾನ ಸಹಾಯದಿಂದ ಪ್ರಕರಣವೊಂದು ದಾಖಲಿಸಿ ಕೈಗೊಂಡಿದ್ದೇವೆ.

ಸಾಗಡೆ ಗ್ರಾಮದ ನಂಜುಂಡನಾಯಕ ಮಾತನಾಡಿ, ಸಾಗಡೆ ಗ್ರಾಮದಲ್ಲಿ 3 ವರ್ಷಗಳ ಹಿಂದೆ ಸ್ವಂತ ಜಾಗದಲ್ಲಿ ದೇವಸ್ಥಾನ ನಿರ್ಮಾಣ ಮಾಡಿಕೊಂಡಿದ್ದೇವೆ. ಆದರೆ, ಉಪ್ಪಾರ ಜನಾಂಗದವರು ದೇವಸ್ಥಾನ ಸಂಬಂಧ ತಕರಾರು ಅರ್ಜಿ ಕೊಟ್ಟಿದ್ದಾರೆ ಎಂದರು.

ಡಿವೈಎಸ್‌ಪಿ ಲಕ್ಷ್ಮಯ್ಯ ಮಾತನಾಡಿ, ಈ ಸಂಬಂಧ ಸ್ಥಳ ಪರಿಶೀಲನೆ ಮಾಡಲಾಗಿದೆ. ಅಲ್ಲದೇ ನಾಯಕ ಜನಾಂಗದ ಮುಖಂಡರೊಂದಿಗೆ ಸಭೆ ನಡೆಸಲಾಗಿದೆ. ಪಿಡಿಒ ಬಳಿ ದಾಖಲಾತಿಗಳನ್ನು ಕೇಳಿದ್ದು ಆ ನಂತರ ವರದಿ ಸಲ್ಲಿಸಲಾಗುವುದು ಎಂದರು.

ಸಿದ್ದಯ್ಯನಪುರ ಗ್ರಾಮದ ಸಿದ್ದರಾಜು ಮಾತನಾಡಿ, ಚಾಮರಾಜನಗರದ ಸೋಮವಾರಪೇಟೆ ಬಳಿಯ ಬೈಪಾಸ್ ಸಂಪರ್ಕ ಕಲ್ಪಿಸುವ ವೃತ್ತ, ಮೂಡ್ಲುಪುರ, ದೊಡ್ಡರಾಯಪೇಟೆ ಕ್ರಾಸ್ ಬಳಿ ಅವೈಜ್ಞಾನಿಕ ರಸ್ತೆ ನಿರ್ಮಾಣದಿಂದಾಗಿ ಅಪಘಾತಗಳು ಹೆಚ್ಚಾಗುತ್ತಿವೆ. ಈ ಸ್ಥಳದಲ್ಲಿ ಸಿಗ್ನಲ್ ವ್ಯವಸ್ಥೆ ಮಾಡುವ ಮೂಲಕ ಅಪಘಾತಗಳನ್ನು ತಡೆಯಲು ಮುಂದಾಗಬೇಕು ಎಂದು ಮನವಿ ಮಾಡಿದರು.

ಅಪಘಾತಗಳಾಗುತ್ತವೆ. ವೀಲಿಂಗ್ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ಅಲ್ಲದೇ ದಲಿತರ ಬಡಾವಣೆಗಳಲ್ಲಿ ಅಕ್ರಮವಾಗಿ ಅಂಗಡಿಗಳಲ್ಲಿ ಮದ್ಯ ಮಾರಾಟ ಮಾಡಲಾಗುತ್ತಿದ್ದು ಇದರ ಕಡಿವಾಣಕ್ಕೂ ಮುಂದಾಗಬೇಕು ಎಂದರು.

ಯರಿಯೂರು ಗ್ರಾಮದ ರವಿಕುಮಾರ್ ಮಾತನಾಡಿ, ಯರಿಯೂರು ಗ್ರಾಮದಲ್ಲಿ ಬಹಿಷ್ಕಾರ ಪದ್ಧತಿ ಹೆಚ್ಚಾಗಿದೆ. ನಮ್ಮ ಕುಟುಂಬಕ್ಕೆ ಸ್ವಜಾತಿಯವರೇ ಬಹಿಷ್ಕಾರ ಹಾಕಿದ್ದು ಇದರ ಕಡಿವಾಣಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು. ಇದಕ್ಕೆ ಎಸ್ಪಿ ಪ್ರತಿಕ್ರಿಯಿಸಿ, ಈ ಸಂಬಂಧ ಸ್ಥಳಕ್ಕೆ ಹೋಗಿ ಪರಿಶೀಲಿಸಿ ಕ್ರಮ ಜರುಗಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಧರಣೇಂದ್ರ ಮಾತನಾಡಿ, ನನ್ನ ಮೇಲೆ ಯಾವುದೇ ಪ್ರಕರಣ ಇಲ್ಲ. ಆದರೂ ಕೂಡ ರೌಡಿಶೀಟರ್ ತೆರೆಯಲಾಗಿದೆ. ಆದ್ದರಿಂದ ರೌಡಿಶೀಟರ್ ಅನ್ನು ರದ್ದುಗೊಳಿಸಬೇಕು ಎಂದು ಮನವಿ ಮಾಡಿದರು. ಎಸ್ಪಿ ಪ್ರತಿಕ್ರಿಯಿಸಿ, ಯಾವುದೇ ಸಮಸ್ಯೆ ಇಲ್ಲದಿದ್ದರೆ ಪರಿಶೀಲಿಸಿ ರೌಡಿಶೀಟರ್ ರದ್ದುಪಡಿಸಲು ಕ್ರಮವಹಿಸಲಾಗುವುದು ಎಂದರು.

ದಲಿತರ ಮೇಲಿನ ದೌರ್ಜನ್ಯ, ಬಹಿಷ್ಕಾರ ಪದ್ಧತಿ, ದಲಿತರ ಬಡಾವಣೆಗಳಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕ್ರಮವಹಿಸಬೇಕು ಎಂದು ಮುಖಂಡರು ಆಗ್ರಹಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ಯಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ನಂಜುಂಡೇಗೌಡ, ಡಿವೈಎಸ್ಪಿ ಲಕ್ಷ್ಮಯ್ಯ ಸೇರಿದಂತೆ ಪೊಲೀಸ್ ಅಧಿಕಾರಿಗಳು, ಎಸ್ಸಿ, ಎಸ್ಟಿ ಜನಾಂಗದ ಮುಖಂಡರು ಹಾಜರಿದ್ದರು.

## ಸೈಲೆಂಟ್ ಪ್ಲೀಸ್.. ಬಿಂದ್ಯಾ ಸುಮ್‌ನಿರಮ್ಮ ಎಂದ ಎಸ್ಪಿ.!



**ಚಾಮರಾಜನಗರ:** ಎಸ್‌ಸಿ-ಎಸ್‌ಟಿ ಸಭೆಯಲ್ಲಿ ಪ.ವರ್ಗದ ಅಧಿಕಾರಿ ಬಿಂದ್ಯಾ ಹಾಗೂ ದೂರುದಾರರೊಬ್ಬರ ನಡುವೆ ಮಾತಿನ ಚಕಮಕಿ ಆರಂಭವಾಗಿ ಪೊಲೀಸ್ ಸಿಬ್ಬಂದಿಗಳೇ ಸಮಾಧಾನಪಡಿಸಿದ ಘಟನೆ ನಡೆಯಿತು.

ದೂರುದಾರರೊಬ್ಬರು ಪ.ವರ್ಗದ ಅಧಿಕಾರಿ ಮೇಲೆ ಮಾತಿನ ಗದಾಪ್ರಹಾರ ಮಾಡಲು ಆರಂಭಿಸಿದಾಗ ಅಧಿಕಾರಿ ಬಿಂದ್ಯಾ ಅವರನ್ನ ಡಿವೈಎಸ್‌ಪಿ ಸೇರಿದಂತೆ ಇನ್ನಿತರರು ಸಮದಾನ ಪಡಿಸಲು ಮುಂದಾದರೂ ಎಸ್ಪಿ ಕವಿತಾರವರು ಬಿಂದ್ಯಾ ಸುಮ್‌ನಿರಮ್ಮ ಸೈಲೆಂಟ್ ಪ್ಲೀಸ್ ಎಂದು ಹೇಳುತ್ತಿದ್ದರು. ಇತ್ತ ಅಧಿಕಾರಿ ನಿಮ್ಮ ಆಡಿಯೋ ನಮ್ಮಲ್ಲೂ ಇದೆ ಎಂದರೆ, ಅತ್ತ ದೂರುದಾರ ನಮ್ಮತ್ರನೂ ನಿಮ್ ವಿಡಿಯೋ ಇದೆ ಎಂದು ಗಲಾಟೆ ಮಾಡುತ್ತಿದ್ದು ಇವರನ್ನ ಸಮಾಧಾನಪಡಿಸುವುದೇ ದೊಡ್ಡ ಕಾಯಕವಾಯಿತು.

---

# ಗ್ರಾಮ ಆಡಳಿತಾಧಿಕಾರಿಗಳ ಮುಷ್ಕರ ವಿದ್ಯಾರ್ಥಿಗಳ-ಗ್ರಾಮಸ್ಥರ ಪರದಾಟ




**ಮುಳಬಾಗಿಲು:** ಕಳೆದ 15 ದಿನಗಳಿಂದ ಗ್ರಾಮ ಆಡಳಿತಾಧಿಕಾರಿಗಳು ಮುಷ್ಕರ ಆರಂಭಿಸಿರುವ ಕಾರಣ ಗ್ರಾಮೀಣ ಪ್ರದೇಶದ ಜನತೆಗೆ ಮತ್ತು ವಿದ್ಯಾರ್ಥಿಗಳಿಗೆ ಕಚೇರಿ ಕೆಲಸಗಳ ಆಗದೇ ತಾಲ್ಲೂಕು ಕಚೇರಿಗೆ ಬಂದು ವಾಪಸ್ ಹೋಗುವ ಪರಿಸ್ಥಿತಿ ಎದುರಾಗಿದೆ.

ರೈತಾಪಿ ಜನರು ಸೇರಿದಂತೆ ಶಾಲಾ - ಕಾಲೇಜು ವಿದ್ಯಾರ್ಥಿಗಳಿಗೆ ತಾಲೂಕು ಕರ್ಚೇರಿಯಲ್ಲಿ ಸಿಗಬೇಕಾಗುವ ಜಾತಿ-ಆದಾಯ, ವಾಸಸ್ಥಳ, ವಂಶವೃಕ್ಷ ದೃಢೀಕರಣ, ಸಣ್ಣರೈತರ ಪ್ರಮಾಣಪತ್ರ, ಭೂರಹಿತ-ಪ್ರಮಾಣಪತ್ರ ಮತ್ತಿತ್ತರ ಪ್ರಮಾಣ ಪತ್ರಗಳಿಗೆ ಗ್ರಾಮ ಆಡಳಿತಾಧಿಕಾರಿಗಳೇ ಸಹಿ ಹಾಕಬೇಕಾಗಿದೆ. ಆದರೆ ಗ್ರಾಮ ಆಡಳಿತಾಧಿಕಾರಿಗಳು ಪ್ರತಿಭಟನೆ ನಡೆಯುತ್ತಿದ್ದು, ಇದರಿಂದ ಜನರು, ವಿದ್ಯಾರ್ಥಿಗಳು ಪರದಾಡುವಂತಾಗಿದೆ. ಮುಳಬಾಗಿಲು ತಾಲೂಕಿನಲ್ಲಿ 30 ಕಂದಾಯ ವೃತ್ತಗಳಿದ್ದು, ರೈತಾಪಿ ಜನತೆಗೆ ತೊಂದರೆಯಾಗುತ್ತಿದೆ ಈ ಬಗ್ಗೆ ರೈತಾಪಿ ಜನತೆ 'ಮುಳಬಾಗಿಲು ತಾಲೂಕು ಕಚೇರಿ ಮುಂದೆ ಗ್ರಾಮ ಆಡಳಿತಾಧಿಕಾರಿಗಳು ಮುಷ್ಕರ ಹಮ್ಮಿಕೊಂಡಿ ದ್ದರಿಂದ ಕಚೇರಿಗಳು ಖಾಲಿಯಾಗಿ ಕಂಡು. ಬಂದವು. ತಾಲ್ಲೂಕು ಕಚೇರಿಯಲ್ಲಿ ತಮ್ಮ ಆಕ್ರೋಶವನ್ನ ವ್ಯಕ್ತ ಪಡಿಸಿದ್ದಾರೆ. ಅಧಿಕಾರಿಗಳು ಇಲ್ಲದ ಕಾರಣ ಕಚೇರಿಗಳು ಖಾಲಿ ಖಾಲಿ ಕಾಣುತ್ತಿವೆ. ಸರ್ಕಾರದಿಂದ ಶೀಘ್ರದಲ್ಲಿ ಅಧಿಕಾರಿಗಳ ಬೇಡಿಕೆಗೆ ಉತ್ತರಿಸಿ ಕಾರ್ಯಕ್ಕೆ ಮರಳುವಂತೆ ಮಾಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಬಿಜೆಪಿ ಬೆಂಬಲಿತ ಅಭ್ಯರ್ಥಿಗಳ ಆಯ್ಕೆ

**ಆನೇಕಲ್:** ಸರ್ಜಾಪುರದ ರೇಷ್ಮೆ ಬೆಳೆಗಾರರ ಹಾಗೂ ರೈತರ ಸೇವಾ ಸಹಕಾರ ಸಂಘದ ಐದು ವಷಗಳ ಅವದಿಯ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ನಡೆದಿದ್ದು ಅದರಲ್ಲಿ ಈಗಾಗಲೇ 10 ಸ್ಥಾನಕ್ಕೆ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಗೊಂಡಿದ್ದು, ಇನ್ನು ಉಳಿದ 2 ಸ್ಥಾನಕ್ಕೆ ನಡೆದ ಚುನಾವಣೆಯ ಫಲಿತಾಂಶ ಹೊರ ಬಂದಿದೆ.


ಪರಿಶಿಷ್ಟ ಜಾತಿ ಮೀಸಲು ಸ್ಥಾನಕ್ಕೆ ಸ್ಪರ್ಧೆ ಮಾಡಿದ್ದ ಗುರುಸ್ವಾಮಿ. ಸಿ 71 ಮತಗಳನ್ನು ಪಡೆದರೆ ಪ್ರತಿಸ್ಪರ್ಧಿ ಎಸ್.ವಿ ಶ್ವೇತ ರಾಘವೇಂದ್ರ 687 ಮತಗಳನ್ನು ಪಡೆದು ವಿಜೇತರಾದರು ಹಾಗೆಯೇ ಹಿಂದುಳಿದ ಪ್ರವರ್ಗ ಎ ಮೀಸಲು ಸ್ಥಾನಕ್ಕೆ ರಮೇಶ್ ಎಂ.ಜಿ 85 ಮತಗಳನ್ನು ಪಡೆದರೆ ಪ್ರತಿಸ್ಪರ್ಧಿ ವೆಂಕಟೇಶ್ 675 ಮತಗಳನ್ನು ಪಡೆದು ವಿಜೇತರಾದರು.

ನಂದಕುಮಾರ್ ಕೆ, ಟಿ.ಪಿಲ್ಲರೆಡ್ಡಿ, ಬ್ರಮರೇಶ್ ಬಿ.ಆರ್, ವಿಶ್ವನಾಥ್ ಕೆ, ಸುಬ್ಬಾರೆಡ್ಡಿ, ಹರೀಶ್ ಬಾಬು ವೈ, ಸಾಮಾನ್ಯ ಕ್ಷೇತ್ರದಿಂದ ಅವಿರೋಧವಾಗಿ ಆಯ್ಕೆಯಾದರೂ. ಪರಿಶಿಷ್ಟ ಪಂಗಡದಿಂದ ಪವನ್ ಕುಮಾರ್, ಹಿಂದುಳಿದ ಪ್ರವರ್ಗ ಬಿ ಸತೀಶ್ ಕುಮಾರ್ ಟಿ.ಸಿ, ಮಹಿಳಾ ಮೀಸಲು ಸ್ಥಾನದಿಂದ ಸುಧಾ ಜಿ ಮತ್ತು ಆಶಾ ಕಿರಣ್ ಅವಿರೋಧವಾಗಿ ವಿಜಯಶಾಲಿಗಳಾಗಿದ್ದಾರೆ. ಒಟ್ಟು 12ಮಂದಿ ನಿರ್ದೇಶಕರಾಗಿ ಚುನಾಯಿತರಾಗಿದ್ದಾರೆ.

ಬಿಜೆಪಿ ಪಕ್ಷದ ಮುಖಂಡ ಎಸ್.ವಿ ರಾಘವೇಂದ್ರ ಮಾತನಾಡಿ, ಮಾತನಾಡಿ, ಸಂಘವು ಉತ್ತಮ ಆಡಳಿತಾತ್ಮಕ ಕಾರ್ಯಗಳನ್ನು ಕೈಗೊಂಡು ರಾಜ್ಯದಲ್ಲಿಯೇ ಮಾದರಿ ಸಂಘವಾಗಿ ಬದಲಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ನಮ್ಮ ಅಭ್ಯರ್ಥಿಗಳ ಜಯಕ್ಕೆ ಬೆಂಬಲವನ್ನು ನೀಡಿದ ರೈತಾಪಿ ಕುಟುಂಬ ವರ್ಗಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಇನ್ನು ಇದೇ ಸಂದರ್ಭದಲ್ಲಿ ಅತ್ಯಧಿಕ ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ ಎಸ್.ವಿ.ಶ್ವೇತ ರಾಘವೇಂದ್ರ ಮತ್ತು ವೆಂಕಟೇಶ್ ರವರಿಗೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಬೃಹತ್ ಗಾತ್ರದ ಹೂವಿನ ಹಾರ ಹಾಕಿ ಸಿಹಿ ಹಂಚಿ ಶುಭ ಕೋರಿದರು.

ಬಿಜೆಪಿ ಮುಖಂಡರಾದ ಕೆ.ವಿ.ಶಿವಪ್ಪ, ಬುಲೆಟ್ ಬಾಬು, ಮುರಳಿಕೃಷ್ಣ, ಎಸ್.ಆರ್ ಗೋಪಾಲ್ ರೆಡ್ಡಿ, ಕೆ.ಸಿ ಜಯಪ್ರಕಾಶ್, ಪಂಡಿತನ ಅಗ್ರಹಾರ ಅಶೋಕ್, ಕೆ.ವಿ.ಕೇಶವರೆಡ್ಡಿ, ವಿ.ಶ್ರೀನಿವಾಸ್, ಶಿವಶಂಕರ್, ರಂಜೇಶ್, ಅನಿಲ್ ರೆಡ್ಡಿ ಹಾಗೂ ಮತ್ತಿತ್ತರರು ಹಾಜರಿದ್ದರು.




# ತಂದೆ-ತಾಯಿ ಮತ್ತು ಗುರುಗಳನ್ನು ಎಂದಿಗೂ ಮರೆಯಬಾರದು: ಸಿ.ಬಿ.ಜಯರಾಮರೆಡ್ಡಿ



**ಚೇಳೂರು:** ಐಎಎಸ್, ಐಪಿಎಸ್. ಸೇರಿದಂತೆ ಬಹುತೇಕ ಉನ್ನತ ಹುದ್ದೆಗಳಲ್ಲಿ ನಗರ ಪ್ರದೇಶದ ವಿದ್ಯಾರ್ಥಿಗಳಗಿಂತ ಗ್ರಾಮೀಣ ಪ್ರದೇಶಗಳ ಬಡವಿದ್ಯಾರ್ಥಿಗಳೇ ಹೆಚ್ಚಾಗಿದ್ದಾರೆ ಮೊಬೈಲ್ ನಿಂದ ಮಕ್ಕಳನ್ನು ದೂರ ಉಳಿಸುವಂತಹ ಕೆಲಸಕ್ಕೆ ಪೋಷಕರು ಮುಂದಾಗಬೇಕೆಂದು ಕಿಶೋರ್ ವಿಧ್ಯಾಸಂಸ್ಥೆಯ ಕಾರ್ಯದರ್ಶಿ ಸಿ.ಬಿ.ಜಯರಾಮರೆಡ್ಡಿ ಹೇಳಿದರು.

ಅವರು ಚೇಳೂರು ಪಟ್ಟಣದ ನ್ಯೂ-ಆಕ್ಸರ್ಡ್ ಆಂಗ್ಲ ಮಾಧ್ಯಮ ಶಾಲೆ. ಕಿಶೋರ್ ಹಿರಿಯ ಪ್ರಾಥಮಿಕ ಶಾಲೆ. ಕಿಶೋರ್ ಸಂಯುಕ್ತ ಪ್ರೌಢಶಾಲೆ.ಸಂಯುಕ್ತ ಆವರಣದಲ್ಲಿ ಏರ್ಪಾಡಿಸಿದ್ದ ಪ್ರೇರಣೆ ಮತ್ತು ಸಾಂಸ್ಕೃತಿಕ ಹಬ್ಬ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಹೆತ್ತ ತಾಯಿ ತಂದೆ, ಗುರು ಹಿರಿಯರನ್ನು ಗೌರವಿಸುವುದನ್ನು ಬಾಲ್ಯದಿಂದಲ್ಲೇ ಮೈಗೂಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಉತ್ತಮ ಸುಸಂಸ್ಕೃತರಾಗಲು ಸಾಧ್ಯ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಮನೆಯಲ್ಲಿ ಪೋಷಕರು ಒಳ್ಳೆಯ ವಾತಾವರಣ ರೂಪಿಸಿಕೊಂಡು ತಮ್ಮ ಮಕ್ಕಳಿಗೆ ತಾಯಿ-ತಂದೆ, ಗುರು-ಹಿರಿಯರನ್ನು ಗೌರವಿಸುವುದನ್ನು ಬಾಲ್ಯದಿಂದಲೇ ಕಲಿಸಬೇಕು. ಪೋಷಕರಿಗೆ ಕಿವಿಮಾತು ಹೇಳಿದ ಅವರು ಪಠ್ಯದ ಜೊತೆಗೆ ಕ್ರೀಡೆ, ನಾಟಕ, ಪ್ರಬಂಧ, ನೃತ್ಯ ಇತ್ಯಾದಿ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕು ಎಂದರು.

ಕಿಶೋರ್ ವಿದ್ಯಾ ಶಾಲೆಯಲ್ಲಿ ಪ್ರೇರಣೆ ಮತ್ತು ಸಾಂಸ್ಕೃತಿಕ ಹಬ್ಬದಲ್ಲಿ ಭರತ ನಾಟ್ಯ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಜನರಿಗೆ ಮನರಂಜನೆ ಸಿಕ್ಕಿತು.

ಸಮಾರಂಭದಲ್ಲಿ ವೃತ್ತ ನಿರೀಕ್ಷಕ ಜನಾರ್ಧನ, ಬೆಂಗಳೂರು ಡೀನ್ ತರಬೇತಿ ಸೃಜನಶೀಲ ಅಧ್ಯಾಪನ ಕೇಂದ್ರದ ಡಾ.ಜಿ.ವಿವೇಕಾನಂದ, ಶಿಕ್ಷಣಾ ಇಲಾಖೆಯ ನೋಡಲ್ ಅಧಿಕಾರಿ ನಾರಾಯಣಸ್ವಾಮಿ, ಸಿಇಓ ಟಿ.ಮಂಜುನಾಥ್, ವೈದ್ಯಾಧಿಕಾರಿ ಭಾಸ್ಕರ್, ಚೇಳೂರು ಗ್ರಾ ಪಂ.ಪಿಡಿಓ ವೆಂಕಟಾಚಲಪತಿ, ವಿಧ್ಯಾಸಂಸ್ಥೆಯ ಅಧ್ಯಕ್ಷ ಜಯಣ್ಣ, ಆಡಳಿತ ಮಂಡಳಿ, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳ ಪೋಷಕರು ಭಾಗವಹಿಸಿದ್ದರು.

---

# ಕೋಳಿಗಳಿಗೆ ಹಕ್ಕಿಜ್ವರದ ಭೀತಿಯಿಲ್ಲ



**ಬಳ್ಳಾರಿ:** ಆಂಧ್ರಪ್ರದೇಶ ಗಡಿ ಭಾಗದ ಹತ್ತಿರದಲ್ಲಿರುವ ಕರ್ನಾಟಕದ ಜಿಲ್ಲೆಗಳಾದ ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ಬಳ್ಳಾರಿ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮುಂತಾದ ಜಿಲ್ಲೆಗಳಲ್ಲಿನ ಕೋಳಿ ವ್ಯಾಪಾರಸ್ಥರು ಕಂಗಲಾಗಿದ್ದು ಆಂಧ್ರ ಪ್ರದೇಶದ ಆರೋಗ್ಯ ಸಚಿವರು ಚಿಕನ್ ತಿಂದರೆ ಯಾವುದೇ ತೊಂದರೆ ಇಲ್ಲ ಎಂದು ಹೇಳಿದ್ದಾರೆ.

ಇನ್ನು, ಬೆಂಗಳೂರಿನ ಮಟ್ಟಿಗೆ ಹೇಳುವುದಾರೆ, ರಂಗನತಿಟ್ಟು, ನೆಲಮಂಗಲ ಮುಂತಾದ ಕಡೆಗಳಲ್ಲಿ ಯಥೇಚ್ಛವಾಗಿ ಕೋಳಿ ಫಾರಂಗಳಿದ್ದು ಕರ್ನಾಟಕದ ತಳಿಗಳನ್ನು ಇಲ್ಲಿಯೇ ಬೆಳೆಸಲಾಗುತ್ತಿದೆ. ಇದಲ್ಲದೆ, ತಮಿಳುನಾಡು ಮೂಲದ ಸುಗುಣ ಮುಂತಾದ ಕಂಪನಿಗಳು ಕೋಳಿ ಮರಿಗಳನ್ನು ಕೋಳಿಮಾಂಸ ಮಾರಾಟಗಾರರಿಗೆ ಸರಬರಾಜು ಮಾಡುತ್ತಿದ್ದಾರೆ.

ಕೋಳಿ ಮಾಂಸ ಮಾರಾಟಗಾರರು ಆ ಮರಿಗಳನ್ನು ಸಾಕಿ ಅವುಗಳು ಬೆಳೆದಾದ ಮೇಲೆ ಅವುಗಳ ಮಾಂಸವನ್ನು ಮಾರಾಟ ಮಾಡುತ್ತವೆ. ಹಾಗಾಗಿ, ಬಳ್ಳಾರಿಯಲ್ಲಿ ಸದ್ಯದ ಮಟ್ಟಿಗೆ ಹಕ್ಕಿ ಜ್ವರದ ಭೀತಿಯಿಲ್ಲ. ದಯವಿಟ್ಟು ಸುಳ್ಳು ಸುದ್ದಿಗಳನ್ನು ಹಬ್ಬಿಸಬೇಡಿ ಎಂದು ಕೋಳಿ ಮಾಂಸ ಮಾರಾಟಗಾರಾರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ಡಿ.ರಿಯಾಜ್ ಅವರು ಹೇಳಿದರು.

ಚಳಿಗಾಲದಲ್ಲಿ ದೇಹದ ಉಷ್ಣಾಂಶವನ್ನು ಸಮತೋಲನದಲ್ಲಿಡಲು ಕೋಳಿ ಮಾಂಸದಿಂದ ಮಾಡಿದ ಸೂಪ್, ಖಾದ್ಯಗಳಿಗೆ ಹೆಚ್ಚಿನ ಬೇಡಿಕೆ ಇರುತ್ತದೆ. ಅದರಲ್ಲೂ ಬ್ರಾಯ್ಲರ್ ಚಿಕನ್ ಸೇವನೆ ಉತ್ತಮ. ಮಾಂಸದಲ್ಲಿಪ್ರೊಟೀನ್ ಹಾಗೂ ಕಡಿಮೆ ಕೊಬ್ಬಿನಾಂಶ ಇರುವುದರಿಂದ ಆರೋಗ್ಯಕ್ಕೂ ಉತ್ತಮ ಆಹಾರ ಎನ್ನುತ್ತಾರೆ.

ಬಿಸ್ಮಿಲ್ಲಾ ಬಿರಿಯಾನಿ ಹೋಟೆಲ್ನದ ಮಾಲೀಕರದ ಅಬ್ದುಲ್ ಆದ್ದರಿಂದ ಸುಳ್ಳು ಸುದ್ದಿಗೆ ದನಿಗೂಡದೆ ಕೋಳಿಮಾಂಸವನ್ನು ತೆಗೆದುಕೊಳ್ಳುವಂತೆ ಸಾರ್ವಜನಿಕರಿಗೆ ಮಾರಾಟಗಾರರ ಸಂಘದ ಸದಸ್ಯರು ಮನುವಿ ಮಾಡಿದರು.

# ಕೆಐಎಡಿಬಿ ಸ್ವಾಧೀನದಲ್ಲಿರುವ ಜಮೀನು ನೀಡಲು ಒಪ್ಪಿಗೆ

**ಶಿಡ್ಲಘಟ್ಟ:** ತಾಲ್ಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ವ್ಯಾಪ್ತಿಯಲ್ಲಿ 2823 ಎಕರೆ ಜಮೀನು ಕೆಐಎಡಿಬಿ ಸ್ವಾಧೀನಕ್ಕೆ ಒಳಗಾಗಿದ್ದು, ಈ ಕುರಿತು ಈಗಾಗಲೇ 1200 ಕ್ಕೂ ಹೆಚ್ಚು ರೈತರಿಗೆ ನೋಟಿಸ್ ಜಾರಿಯಾಗಿದೆ. ಇದರಲ್ಲಿ 860 ಕ್ಕೂ ಹೆಚ್ಚು ರೈತರು ಜಮೀನು ನೀಡಲು ಒಪ್ಪಿಕೊಂಡು ಒಪ್ಪಿಗೆ ಪತ್ರ ನೀಡಿದ್ದಾರೆ ಎಂದು ಕೆಐಎಡಿಬಿ ಜಮೀನುಗಳ ರೈತರ ಹೋರಾಟ ಸಮಿತಿಯ ರಾಮಾಂಜಿ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ (ಕೆಐಎಡಿಬಿ) ಗೆ ಜಮೀನು ನೀಡಲು ಸಿದ್ಧರಿರುವ ರೈತರೊಂದಿಗೆ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಜಂಗಮಕೋಟೆ ಹೋಬಳಿಯ 2823 ಎಕರೆ ಜಮೀನನ್ನು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದ್ದು, ನಮ್ಮ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ನಾವು ಜಮೀನು ಹಸ್ತಾಂತರಿಸಲು ಸಿದ್ಧವಿದ್ದೇವೆ ಎಂದರು.

ಆದರೆ ಕೆಲ ರೈತ ಸಂಘಟನೆಗಳ ಮುಖಂಡರು ಅದನ್ನು ವಿರೋಧಿಸುತ್ತಿದ್ದು, ಆಯುಕ್ತರು ಹಾಗೂ ವಿಶೇಷ ಭೂಸ್ವಾಧೀನ ಅಧಿಕಾರಿಯನ್ನು ಭೇಟಿಯಾದವರ ಪೈಕಿ ಬೆರಳೆಣಿಕೆಯಷ್ಟು ರೈತರಿದ್ದಾರೆ, ಉಳಿದವರು ಭೂದಲ್ಲಾಳಿಗಳಾಗಿದ್ದಾರೆ ಎಂದು ಅವರು ವಾಗ್ದಾಳಿ ನಡೆಸಿದರು.

ನಿಮಗೆ ಇಷ್ಟವಿಲ್ಲದಿದ್ದರೆ ನಿಮ್ಮ ಭೂಮಿ ನೀಡಬೇಡಿ, ಆದರೆ ನಮ್ಮ ಭೂಮಿಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದು ನಮ್ಮ ಹಕ್ಕು, ಇದರಲ್ಲಿ ಅನಗತ್ಯ ಹಸ್ತಕ್ಷೇಪ ಬೇಡ ತಿಳಿಸಿದರು.

ಜಂಗಮಕೋಟೆ ಹೋಬಳಿಯಲ್ಲಿ ಖಾಸಗಿ ರಿಯಲ್ ಎಸ್ಟೇಟ್ ಉದ್ಯಮಿಗಳು ಕೃಷಿ ಭೂಮಿ ಖರೀದಿಸಿ ಲೇಔಟ್ ಮಾಡುತ್ತಿರುವಾಗ ಇದನ್ನು ಪ್ರಶ್ನಿಸದವರು, ಈಗ ಸರ್ಕಾರ ಕೈಗಾರಿಕೆ ಸ್ಥಾಪನೆಗಾಗಿ ರೈತರಿಗೆ ಹೆಚ್ಚಿನ ಹಣ ನೀಡಿದಾಗ ಮಾತ್ರ ವಿರೋಧಿಸುತ್ತಿದ್ದಾರೆ ಎಂದು ದೂರಿದರು.




ಬಡ ರೈತರು ಕೇವಲ 1-2 ಲಕ್ಷಕ್ಕೆ ನೋಂದಣಿ ಮಾಡಿಕೊಂಡ 520 ಎಕರೆ ಜಮೀನು ಈಗ ಪಿಎಸ್‌ಎಲ್ ಕಂಪನಿಯ ಹೆಸರಿನಲ್ಲಿದೆ,ಇಂತಹ ರಿಯಲ್ ಎಸ್ಟೇಟ್ ಕಂಪನಿಗಳ ಜೊತೆ ಗುರುತಿಸಿಕೊಂಡಿರುವವರು ನಿಜವಾದ ರೈತರ ಬಗ್ಗೆ ಲಘುವಾಗಿ ಮಾತನಾಡುವುದು ನಿಲ್ಲಿಸಬೇಕು ಎಂದು ಖಾರವಾಗಿ ಹೇಳಿದರು.

ಕೆಐಎಡಿಬಿ ನಮ್ಮನ್ನು ರೈತರು ಎಂದು ಗುರುತಿಸಿ ನೋಟಿಸ್ ನೀಡಿರುವ ಕಾರಣ ನಾವು ಒಪ್ಪಿಗೆ ಪತ್ರ ಬರೆದು ಕೊಂಡಿದ್ದೇವೆ ,ಆದರೆ ಕೆಐಎಡಿಬಿ ಹೆಸರು ನಮೂದಿಸಿರುವ ಕಾರಣ ನಮ್ಮ ಜಮೀನಿಗೆ ಬ್ಯಾಂಕಿನಿಂದ ಯಾವುದೇ ಸಾಲ ದೊರೆಯುತ್ತಿಲ್ಲ ,ಈಗ ಹಣದ ಅಗತ್ಯವಿರುವ ಕಾರಣ ಡಿನೋಟೀಫಿಕೇಷನ್ ಮಾಡಿಸಲು ಅಥವಾ ನಮ್ಮ ಜಮೀನಿಗೆ ಎಕರೆಗೆ 20 ಲಕ್ಷ ರೂ.ಗಳ ಸಾಲ ಒದಗಿಸಲು ನೆರವಾಗಬೇಕು ಎಂದು ಅವರು ಆಗ್ರಹಿಸಿದರು.

"ಪರಿಶಿಷ್ಟ ಜಾತಿ, ಪಂಗಡ ಮತ್ತು ಸಾಮಾನ್ಯ ವರ್ಗದ ರೈತರ ಜಮೀನಿಗೆ ಸಮಾನ ಪರಿಹಾರ ನೀಡುವುದೇ ಕೆಐಎಡಿಬಿ ಭೂಸ್ವಾಧೀನ ವಿರೋಧಿಸುವ ನಿಮ್ಮ ಕಾಳಜಿಯ ನಿಜವಾದ ಕಾರಣ,ಈ ಹಿಂದೆ ತಾಲ್ಲೂಕಿನ ಸುಂಡ್ರಹಳ್ಳಿ ಬಳಿಯ ವಿಶ್ವವಿದ್ಯಾಲಯ ನಿರ್ಮಾಣ ಯೋಜನೆಯನ್ನು ಬೇರೆಡೆಗೆ ಸ್ಥಳಾಂತರಿಸಲು ಕಾರಣರಾದ ನಿಮ್ಮ " ರೈತಪರ ಕಾಳಜಿ " ಏನೆಂದು ಜನರಿಗೆ ಈಗಲೂ ನೆನಪಿದೆ ಎಂದು ಲೇವಡಿ ಮಾಡಿದರು.

ಈ ಸಂದರ್ಭದಲ್ಲಿ ನಲ್ಲೇನಹಳ್ಳಿ.ಸಿ.ಸುಬ್ರಮಣಿ, ನಡಿಪಿನಾಯಕನಹಳ್ಳಿ ವಾಸುದೇವ, ರವಿ, ಬಸವಾಪಟ್ಟಣ ರಾಮದಾಸ್, ಮುನೇಗೌಡ, ರವಿ, ಆಂಜಿನಪ್ಪ,ಪ್ರಭು ತಿಪ್ಪೇಗೌಡ, ನರಸಿಂಹ ಮುಂತಾದವರು ಹಾಜರಿದ್ದರು.

# ಪ್ರತಿ ವರ್ಷ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ




**ಚಿಕ್ಕಬಳ್ಳಾಪುರ:** ವಿವಿಧ ರೀತಿಯ ವೇದಿಕೆಗಳ ಮುಖಾಂತರ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಮಾಡಿಕೊಡಲಾಗಿದೆ. ಇನ್ನು ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಲು ಶಾಲೆಯ ಶಿಕ್ಷಕರ ವರ್ಗ ಶ್ರಮಿಸುತ್ತಿದ್ದು ಪ್ರತಿ ವರ್ಷ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬರುತ್ತಿದೆ. ಪ್ರಸ್ತುತ ಸಾಲಿನ ವಿದ್ಯಾರ್ಥಿಗಳು ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದು ಈ ವರ್ಷ ಶಾಲೆಗೆ ನೂರಕ್ಕೆ ನೂರು ಫಲಿತಾಂಶ ಬರುವ ನಿರೀಕ್ಷೆ ಇದೆ ಎಂದು ಬ್ರೈಟ್ ಶಾಲೆಯ ಪ್ರಾಂಶುಪಾಲರಾದ ರುಕ್ಸಾನ ಹೇಳಿದರು.

ನಗರದ ಪ್ರತಿಷ್ಠಿತ ಶಾಲೆಗಳಲ್ಲಿ ಒಂದಾದ ಸಾಕಿಬ್ ಎಜುಕೇಷನಲ್ ಟ್ರಸ್ಟ್‌ನ ಬ್ರೈಟ್ ಶಾಲೆಯ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಭಾನುವಾರ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಬ್ರೈಟ್ ಶಾಲೆಯ ಪ್ರಾಂಶುಪಾಲರಾದ ರುಕ್ಸಾನ ಮಾತನಾಡಿ ಶಾಲೆಯ ಮಕ್ಕಳಿಗೆ ಕೇವಲ ಶಿಕ್ಷಣ ಮಾತ್ರಕ್ಕೆ ಸೀಮಿತಗೊಳಿಸದೆ ಮಕ್ಕಳ ಉಜ್ವಲ ಭವಿಷ್ಯಕ್ಕೆ ಪ್ರತಿ ವರ್ಷ ಪಠ್ಯೇತರ ಚಟುವಟಿಕೆಗಳು ಆಯೋಜಿಸಲಾಗುತ್ತಿದೆ.

ಮಕ್ಕಳು ಕೂಡ ಸಮಯ ವ್ಯರ್ಥ ಮಾಡದೆ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಬೇಕು. ಉತ್ತಮ ಅಂಕ ಗಳಿಸಿ ಶಾಲೆಗೆ ಒಳ್ಳೆಯ ಹೆಸರು ತಂದು ಕೊಡುವ ಜೊತೆಗೆ ದೇಶಕ್ಕೆ ಕೀರ್ತಿ ತರುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಿ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಬೇಕು ಎಂದು ಸಲಹೆ ನೀಡಿದರು.

ಶಾಲೆಯ ಶಿಕ್ಷಕಿ ಶ್ರೀದೇವಿ ಮಾತನಾಡಿ, ಮಕ್ಕಳ ಜೀವನದಲ್ಲಿ ಹತ್ತನೇ ತರಗತಿ ಪ್ರಮುಖ ಘಟ್ಟ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಬೇಕು ಈ ಒಂದು ಘಟ್ಟವನ್ನು ದಾಟಿದರೆ ನಿಮ್ಮ ಭವಿಷ್ಯ ಉಜ್ವಲವಾಗಲಿದೆ, ಇನ್ನು ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಶಿಕ್ಷಕರ ಪಾತ್ರ ಮಹತ್ವದ್ದು ಶಿಕ್ಷಕರ ವಿದ್ಯಾರ್ಥಿಗಳ ಸಂಬಂಧ ಪ್ರೀತಿ ಮತ್ತು ಗೌರವದಿಂದ ಕೂಡಿರುತ್ತೆ ಪಾಠ ಪ್ರವಚನ ಸಮಯದಲ್ಲಿ ಕೆಲವೊಮ್ಮೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಕೋಪದಿಂದ ಮಾತನಾಡಬಹುದು. ಆದರೆ ಶಿಕ್ಷಕರು ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಕಾಳಜಿ ವಹಿಸುತ್ತಾರೆ ವಿಧ್ಯಾರ್ಥಿಗಳು ಇದನ್ನ ಅರಿಯಬೇಕು ಶಿಕ್ಷಕರು ಏನೇ ಮಾಡಿದರೂ ಅದು ನಿಮ್ಮ ಉಜ್ವಲ ಭವಿಷ್ಯಕ್ಕೆ ಎಂದ ಅವರು ನಿರ್ಭೀತಿಯಿಂದ ಪರೀಕ್ಷೆ ಬರೆಯಿರಿ ಉತ್ತಮ ಅಂಕಗಳಿಸಿ ಶಾಲೆಗೆ ಕೀರ್ತಿ ತರಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಇದೇ ವೇಳೆ ಪ್ರಸ್ತುತ ಸಾಲಿನಲ್ಲಿ ಹತ್ತನೇ ತರಗತಿ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳು ಶಾಲೆಯಲ್ಲಿ ನೀಡಲಾಗುತ್ತಿರುವ ಶಿಕ್ಷಣ, ವಾತಾವರಣ, ಶಿಕ್ಷಕರ ವರ್ಗದ ಬಗ್ಗೆ ತಮ್ಮ ತಮ್ಮ ಅನುಭವ ಹಂಚಿಕೊಂಡರು. ಇದೇ ಸಂದರ್ಭದಲ್ಲಿ ಶಾಲೆಯ ಪ್ರತಿ ತರಗತಿಗೆ ಒಬ್ಬ ಸ್ಟುಡೆಂಟ್ ಆಯ್ಕೆ ಮಾಡಿ ಬೆಸ್ಟ್ ಸ್ಟುಡೆಂಟ್ ಸರ್ಟಿಫಿಕೇಟ್ ನೀಡಿ ಪ್ರೋತ್ಸಾಹಿಸಲಾಯಿತು. ಇದಕ್ಕು ಮೊದಲು ಶಾಲೆಯ ವಿದ್ಯಾರ್ಥಿಗಳು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಶಾಲೆಯ ಅಧ್ಯಕ್ಷ ಸಾಕಿಬ್ ಪಾಷ, ಟ್ರಸ್ಟಿ ಸಾದೀಯ, ಚಾಂದ್ ಪಾಷ, ಮುಖ್ಯ ಶಿಕ್ಷಕಿ ಶರ್ಮಿಲಾ,ರಂಜಿತ್ ಕುಮಾರ್, ಗಂಗಾಧರ್, ಚಂದ್ರಶೇಖರ್, ಶಾರದಾ, ತಾಜ್, ತೇಜಸ್ವಿನಿ, ಪವಿತ್ರ, ವಿದ್ಯಾರ್ಥಿಗಳ ಪೋಷಕರು ಮತ್ತು ಇತರರು ಹಾಜರಿದ್ದರು.

# ಬೆಸ್ಟ್ ಪದವಿ ಕಾಲೇಜನಲ್ಲಿ ಆಹಾರ ಮೇಳ



**ಚಿಕ್ಕಬಳ್ಳಾಪುರ:** ಆಹಾರ ಮೇಳದಲ್ಲಿ ವಹಿವಾಟು ನಡೆಸುವ ಮೂಲಕ ವಿದ್ಯಾರ್ಥಿಗಳು ಉದ್ಯಮಶೀಲತೆ ಪರಿಜ್ಞಾನವನ್ನ ಪಡೆಯಲಿದ್ದು ವಿದ್ಯಾರ್ಥಿಗಳಿಗೆ ಭವಿಷ್ಯದಲ್ಲಿ ಬಹಳಷ್ಟು ಸಹಕಾರಿಯಾಗಲಿದೆ. ಬೆಸ್ಟ್ ಡಿಗ್ರಿ ಕಾಲೇಜಿನಲ್ಲಿ ವಿದ್ಯಾಭ್ಯಾಸದ ಜತೆಗೆ ಪಠ್ಯೇತರ ಚಟುವಟಿಕೆಗಳನ್ನು ಆಯೋಜಿಸಿಲಾಗುತ್ತಿದ್ದು ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಚಂದ್ರಯ್ಯ ತಿಳಿಸಿದರು.

ನಗರದ ಶಿಡ್ಲಘಟ್ಟ ರಸ್ತೆ ಯಲ್ಲಿರುವ ಬೆಸ್ಟ್ ಡಿಗ್ರಿ ಕಾಲೇಜನಲ್ಲಿ ಆಹಾರ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಓದುವ ಜೊತೆಗೆ ವಿದ್ಯಾರ್ಥಿಗಳಿಗೆ ಪಠ್ಯೇತರ ಚಟುವಟಿಕೆಗಳು ಮುಖ್ಯ ಬೆಸ್ಟ್ ಕಾಲೇಜಿನಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಜೊತೆಗೆ ಪಠ್ಯೇತರ ಚಟುವಟಿಕೆಗಳು ಆಯೋಜಿಸುತ್ತಿದ್ದು ಶ್ಲಾಘನೀಯ ಆಹಾರ ಮೇಳದಲ್ಲಿ ಮಕ್ಕಳು ತಮ್ಮಿಂದ ತಯಾರಿಸಿದ ವಿವಿಧ ಬಗೆಯ ಆಹಾರ ಪದಾರ್ಥಗಳು ವ್ಯಾಪರ ಮಾಡುತ್ತಿದ್ದು ಅವರಲ್ಲಿ ಉದ್ಯಮಶೀಲತೆ ಪರಿಜ್ಞಾನ ಹೆಚ್ಚುತ್ತೆ ಎಂದರು.

ಬೆಸ್ಟ್ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ.ರಘುನಾಥ್ ಮಾತನಾಡಿ, ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ವಿದ್ಯಾಭ್ಯಾಸದ ಜತೆಗೆ ಕ್ರೀಡೆಗಳು,ಸಾಂಸ್ಕೃತಿಕ ಕಾರ್ಯಕ್ರಮಗಳು ಪಠ್ಯೇತರ ಚಟುವಟಿಕೆ ಮುಖ್ಯ. ಇದನ್ನು ಗಮನದಲ್ಲಿಟ್ಟುಕೊಂಡು ನಮ್ಮ ಕಾಲೇಜಿನಲ್ಲಿ ನಿರಂತರವಾಗಿ ಕ್ರೀಡಾಕೂಟ,ಆಹಾರ ಮೇಳ,ಎತ್ನಿಕ್ ಡೆ,ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜಿಸಿಲಾಗುತ್ತಿದ್ದು, ಇದರ ಭಾಗವಾಗಿ ಇಂದು ಆಹಾರ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.ಇನ್ನು ಗಳಿಸಿದ ಅಂಕಗಳ,ಡಿಗ್ರಿಗಳು ಎಲ್ಲವೂ ಒಂದು ಕಡೆ,ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸಂವಹನ ಕೌಶಲ್ಯವನ್ನು ಅಭಿವೃದ್ಧಿ ಪಡಿಸಲು ಅವಕಾಶ ಕಲ್ಪಿಸಬೇಕಾಗಿದೆ. ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರತರಲು ಅವಕಾಶ ಕಲ್ಪಿಸಿ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಅವರಿಗೆ ಸೂಕ್ತ ರೀತಿಯ ಸಹಕಾರ ನೀಡಿದಲ್ಲಿ ಒಳ್ಳೆಯ ಪ್ರಜೆಗಳಾಗಿ ಹೊರಹುಮ್ಮುವರು ಎಂದ ಅವರು ಇಂದಿನ ಆಹಾರ ಮೇಳದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ಬಗೆಬಗೆಯ ಆಹಾರ ತಯಾರಿಸಿ ಖುದ್ದಾಗಿ ಮಾರಾಟ ಮಾಡುವ ಮೂಲಕ ವ್ಯವಹಾರದ ಜ್ಞಾನ ಪಡೆದುಕೊಳ್ಳುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪ್ರೊಫೆಸರ್ ಸಂತೋಷ್‌ಕುಮಾರ್, ಶಿವಾನಂದ್, ರಾಮಯ್ಯ, ಕಾಲೇಜಿನ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಆಹಾರ ಮೇಳದಲ್ಲಿ ಕಾಲೇಜಿನ ವಿಧ್ಯಾರ್ಥಿಗಳು ಬಗೆ ಬಗೆಯ ಆಹಾರ ಪದಾರ್ಥಗಳು ತಯಾರಿಸಿ ವ್ಯಾಪಾರ ವಹಿವಾಟು ಮಾಡಿ ವ್ಯವಹಾರದ ಜ್ಞಾನ ಪಡೆದರು.

# ರಾಜ್ಯದಲ್ಲಿ ಲೂಟಿ ಮಾಡುವುದರಲ್ಲಿ ಸಚಿವರು ತಲ್ಲೀನ: ವ್ಯಂಗ್ಯ



**ಶಿಡ್ಲಘಟ್ಟ:** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಸಚಿವರು ಬರೀ ಲೂಟಿ ಮಾಡುವ ಕೆಲಸದಲ್ಲಿ ತಲ್ಲೀನರಾಗಿದ್ದಾರೆ ದೇವನಹಳ್ಳಿ ಹಾಗೂ ಸುತ್ತ ಮುತ್ತ ಜಮೀನುಗಳನ್ನು ಲಪಟಾಯಿಸುವ ಕೆಲಸ ಬಿಟ್ಟು ಮತ್ತೇನು ಆಗುತ್ತಿದೆ, ಇನ್ನು ಅಭಿವೃದ್ಧಿ ಬಗ್ಗೆ ಹೇಳೋಕೆ ಏನು ಇಲ್ಲಾ ಎಂದು ರಾಜ್ಯ ಕಾಂಗ್ರೆಸ್ ಬಗ್ಗೆ ವಿಧಾನಪರಿಷತ್‌ನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ವ್ಯಂಗ್ಯವಾಡಿದರು.

ತಾಲ್ಲೂಕಿನ ಆನೂರು ಗ್ರಾಮ ಪಂಚಾಯಿತಿಯ ಜಪ್ತಿಹೊಸಹಳ್ಳಿಯಲ್ಲಿ ಮಂಡಿ ಮುನೇಶ್ವರಸ್ವಾಮಿ ಹಾಗೂ ಸಪ್ತಮಾತೆ ಅಕ್ಕನವರ ನೂತನ ಶಿಲಾವಿಗ್ರಹ ಸ್ಥಾಪನೆ ಹಾಗೂ ದೇವಾಲಯ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಪಂಚ ಗ್ಯಾರಂಟಿಗಳು ಅಂದ್ರು ಒಂದೂ ಗ್ಯಾರಂಟಿಯೂ ಗ್ಯಾರಂಟಿಯಾಗಿ ನಡೆಯುತ್ತಿಲ್ಲ, ಬೇಸಿಗೆ ಬರುತ್ತಿದ್ದು ದನಕರುಗಳಿಗೆ ಜನರಿಗೆ ಕುಡಿಯುವ ನೀರು ಕೂಡ ಸಿಗುವಂತ ಪರಿಸ್ಥಿತಿ ಕಾಣುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಬೆಂಗಳೂರು ಸುತ್ತ ಮುತ್ತ ಬೆಲೆ ಬಾಳುವ ಜಮೀನುಗಳ ಮೇಲೆ ದುಡ್ಡು ಹಾಕಿ ದುಡ್ಡು ಮಾಡುವ ಕೆಲಸ ಮಾತ್ರ ನಡೆಯುತ್ತಿದೆ. ಮೊದಲು ಬ್ರಾಂಡ್ ಬೆಂಗಳೂರು ಮಾಡ್ತೇವೆ ಎಂದವರು ಅದನ್ನು ಮಾಡಲಾಗದೆ ಇದೀಗ ಬ್ರಾಂಡ್ ಬೆಂಗಳೂರು ಮಾಡುವ ಬದಲು ಗ್ರೇಟರ್ ಬೆಂಗಳೂರು ಮಾಡುತ್ತೇವೆ ಎಂದು ದಿನಕ್ಕೊಂದು ಕ್ಷಣಕ್ಕೊಂದು ಮಾತನಾಡುವವರ ಬಗ್ಗೆ ಏನು ಹೇಳಿಯೂ ಉಪಯೋಗವಿಲ್ಲ ಎಂದು ಹೇಳಿದರು.

ನಿಮ್ಮನ್ನು ಆಯ್ಕೆ ಮಾಡಿದ ಮತದಾರರ ಋಣ ತೀರಿಸಬೇಕೆಂದರೆ ಜನರಪರ ಕೆಲಸ ಮಾಡಿ ಇಲ್ಲವಾದರೆ ಮುಖ್ಯ ಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡಿ ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಹೇಳಿದ್ದೇನೆ ಮತ್ತು ಆಗ್ರಹಿಸುತ್ತೇನೆ, ಇದು ಸಚಿವರಿಗಳಿಗೂ ಅನ್ವಯಿಸುತ್ತದೆ ಎಂದು ಸಿಎಂ ಮತ್ತು ಸಚಿವ ಸಂಪುಟದ ಕಾರ್ಯವೈಖರಿ ಬಗ್ಗೆ ತೀವ್ರ ಅಸಮಾಧಾನದ ಮಾತುಗಳನ್ನಾಡಿದರು.

ಈ ಸಂದರ್ಭದಲ್ಲಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದಗೌಡ, ನಗರಸಭೆ ಸದಸ್ಯ ನಾರಾಯಣಸ್ವಾಮಿ, ರಾಮಕೃಷ್ಣಪ್ಪ ಪುರುಷೋತ್ತಮ್, ತುಮ್ಮನಹಳ್ಳಿ ಮಧು, ಗಂಗಾಧರಪ್ಪ, ಗ್ರಾಮದ ಮುಖಂಡರಾದ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಪ್ರಕಾಶ್, ದಬರಗಾನಹಳ್ಳಿ ಮುನಿಯಪ್ಪ, ಬೋದಗೂರು ಮುನಿರಾಜು,ಚಂದ್ರಪ್ಪ,ಟಿ. ಟಿ.ನರಸಿಂಹಪ್ಪ,ಅಶ್ವತ್ ನಾರಾಯಣ, ರಾಜಗೋಪಾಲ್ ,ರಾಜೇಶ್, ನಾಗೇಶ್,ಸುರೇಶ್, ಅನಿಲ್, ಬಾಬು ಮುಂತಾದವರು ಪಾಲ್ಗೊಂಡಿದ್ದರು.

# ರೈತರ ಅಲೆದಾಟ ತಪ್ಪಿಲ್ಲ: ಜನರ ಆಕ್ರೋಶ

**ಚೇಳೂರು:** ಕಳೆದ 14 ದಿನಗಳಿಂದ ರಾಜ್ಯವೀಡಿ ಗ್ರಾಮ ಲೇಕ್ಕಾಧಿಕಾರಿಗಳ ಮುಷ್ಕರ ಆರಂಭಿಸಿರುವ ಕಾರಣ ಗ್ರಾಮೀಣಾ ಪ್ರದೇಶದ ಜನತೆಗೆ ಮತ್ತು ವಿಧ್ಯಾರ್ಥಿಗಳಿಗೆ ತಮ್ಮ ಕೆಲಸ ಕಾರ್ಯಗಳುಆಗದೇ ತಾಲೂಕು ಕಛೇರಿಯತ್ತ ಪರದಾಟಕ್ಕೆ ತುತ್ತಾಗಿದ್ದಾರೆ. ರೈತಾಪಿ ಜನರು ಸೇರಿದಂತೆ ಶಾಲಾ-ಕಾಲೇಜು ವಿಧ್ಯಾರ್ಥಿಗಳಿಗೆ ಸಾರ್ವಜನಿಕರಿಗೆ ತಾಲೂಕು ಕಚೇರಿಯಲ್ಲಿ ಸಿಗಬೇಕಾಗುವ ಜಾತಿ-ಆದಾಯ, ವಾಸಸ್ಥಳ, ವ್ಯವಸಾಯಗಾರ, ವಂಶವೃಕ್ಷ, ಬೆಳೆ ದೃಢೀಕರಣ, ಸಣ್ಣರೈತ ಪ್ರಮಾಣಪತ್ರ. ಭೂರಹಿತ-ಪ್ರಮಾಣಪತ್ರ ಮತ್ತಿತ್ತರ ಪ್ರಮಾಣ ಪತ್ರಗಳಿಗೆ ಆಡಳಿತಾಧಿಕಾರಿಗಳೇ ಸಹಿ ಹಾಕಬೇಕಾಗಿದೆ. ಸಕಾಲಕ್ಕೆ ಬಂದು ವಿಲೇ ಆಗುತ್ತಿವೆ ಸಂಬಂಧಪಟ್ಟಅಧಿಕಾರಿಗಳು ಗಮನ ನೀಡುತ್ತಿಲ್ಲ ಚೇಳೂರು ತಾಲ್ಲೂಕುನಲ್ಲಿ 17 ಕಂದಾಯ ವೃತ್ತಗಳಿದ್ದು ರೈತಾಪಿ ಜನತೆಗೆ ತೊಂದರೆಯಾಗುತ್ತಿದೆ ಈ ಬಗ್ಗೆ ರೈತಾಪಿ ಜನತೆ ತಾಲ್ಲೂಕು ಕಚೇರಿಯಲ್ಲಿ ಸಿಬ್ಬಂದಿಯೊಂದಿಗೆ ತಮ್ಮ ಆಕ್ರೋಶವನ್ನ ವ್ಯಕ್ತ ಪಡಿಸಿದ್ದಾರೆ.



# ಶ್ರೀಚೌಡೇಶ್ವರಿ ದೇವಿಯ ನೂತನ ವಿಗ್ರಹ ಪ್ರತಿಷ್ಠಾಪನೆ



**ಶಿಡ್ಲಘಟ್ಟ:** ತಾಲ್ಲೂಕಿನ ತುಮ್ಮನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲಿಶೆಟ್ಟಿಪುರ ಗ್ರಾಮದಲ್ಲಿ ಶ್ರೀಚೌಡೇಶ್ವರಿ ದೇವಿಯ ನೂತನ ವಿಗ್ರಹ ಪ್ರತಿ ಷ್ಠಾಪನಾ ಕಾರ್ಯಕ್ರಮವು ಸಾಂಪ್ರಾದಾಯಿಕವಾಗಿ ನೆರವೇರಿತು.

ಕಾಂಗ್ರೆಸ್ ಮುಖಂಡ ಆಂಜಿನಪ್ಪ (ಪುಟ್ಟು ) ಮಾತನಾಡಿ, ಗ್ರಾಮದಲ್ಲಿ ಚೌಡೇಶ್ವರಿ ದೇವಿಯ ದೇವಸ್ಥಾನವನ್ನು ನೂತನವಾಗಿ ನಿರ್ಮಾಣ ಮಾಡಿ ತಾಯಿಯನ್ನು ಪ್ರತಿಷ್ಠಾಪನೆ ಮಾಡಿದ್ದೀರಿ ಅಮ್ಮನವರು ಎಲ್ಲಾರಿಗೂ ಒಳ್ಳೆಯದು ಮಾಡಲಿ ಎಂದು ಅವರು ಶುಭ ಹಾರೈಸಿದರು.

ಮಾಜಿ ಸಚಿವರಾದ ವಿ.ಮುನಿಯಪ್ಪ ಹಾಗೂ ಸಮಾಜ ಕಾಂಗ್ರೆಸ್ ಮುಖಂಡರಾದ ಆಂಜಿನಪ್ಪ(ಪುಟ್ಟು) ರವರುಗಳು ನೂತನ ಶ್ರೀಚೌಡೇಶ್ವರಿದೇವಿಯ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ಅಮ್ಮನವರ ಕೃಪೆಗೆ ಪಾತ್ರರಾದರು.

ಇದೇ ವೇಳೆ ಮಾಜಿ ಶಾಸಕರಾದ ಎಂ.ರಾಜಣ್ಣ,ಗ್ರಾಮ ಪಂಚಾಯತಿ ಅಧ್ಯಕ್ಷರಾದ ಸುಶೀಲಮ್ಮನಾಗರಾಜ್, ಮಾಜಿ ಅಧ್ಯಕ್ಷೆ ಪ್ರೇಮಾರಮೇಶ್, ಉಪಾಧ್ಯಕ್ಷ ಚಿಂತಡಪಿ ಮಾರುತಿ, ಸದಸ್ಯರಾದ ದೊಡ್ಡದಾಸರಹಳ್ಳಿ ಲಕ್ಷ್ಮೀದೇವಮ್ಮ, ಕಾಂಗ್ರೆಸ್ ಮುಖಂಡರಾದ ತುಮ್ಮನಹಳ್ಳಿ ಪಿಳ್ಳಂಜಿನಪ್ಪ, ವೆಂಕಟೇಶ್,ಬಳುವನಹಳ್ಳಿ ಮೂರ್ತಿ,ಗ್ರಾಮದ ಮುಖಂಡರಾದ ದೇವರಾಜ್, ರಂಗಪ್ಪ,ಮುರಳಿ ಹಾಗು ಗ್ರಾಮಸ್ಥರು, ಸುತ್ತಮುತ್ತಲಿನ ಗ್ರಾಮಗಳವರು ಮತ್ತು ಭಕ್ತಾದಿಗಳು ಪಾಲ್ಗೊಂಡಿದ್ದರು.

# ದೇವರಮಳ್ಳೂರು ಗ್ರಾ.ಪಂ.ಅಧ್ಯಕ್ಷೆಯಾಗಿ ಪವಿತ್ರ ಆಯ್ಕೆ



**ಶಿಡ್ಲಘಟ್ಟ:** ದೇವರಮಳ್ಳೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ಜೆಡಿಎಸ್ ಬೆಂಬಲಿತ ಪವಿತ್ರ ಅವರು ಚುನಾಯಿತರಾಗಿದ್ದಾರೆ.

ತಾಲ್ಲೂಕಿನ ದೇವರಮಳ್ಳೂರು ಗ್ರಾಮ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಪವಿತ್ರ 9 ಮತಗಳನ್ನು ಪಡೆದು ಅಧ್ಯಕ್ಷೆಯಾಗಿ ಆಯ್ಕೆಗೊಂಡರು,

ಸಾಮಾನ್ಯ ಮಹಿಳಾ ಸ್ಥಾನಕ್ಕೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್ ಬೆಂಬಲಿತ ಪವಿತ್ರ ಹಾಗೂ ಕಾಂಗ್ರೆಸ್ ಬೆಂಬಲಿತ ಸುಗುಣಮ್ಮ ಸ್ಪರ್ಧಿಸಿದ್ದು ಪವಿತ್ರ 9 ಮತ ಹಾಗೂ ಸುಗುಣಮ್ಮ 7 ಮತ ಪಡೆದರು.

ಚುನಾವಣಾಧಿಕಾರಿಯಾಗಿ ಬಿಇಒ ನರೇಂದ್ರಕುಮಾರ್ ಅವರು ಪವಿತ್ರ ದೇವರಾಜ್ ಅವರನ್ನು ಅಧ್ಯಕ್ಷೆಯನ್ನಾಗಿ ಘೋಷಿಸಿದರು,ಸಹಾಯಕರಾಗಿ ಪಿಡಿಒ ಸುಧಾಮಣಿ ಕಾರ್ಯ ನಿರ್ವಹಿಸಿದರು.

ಅಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆ ಜೆಡಿಎಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಕೆಂಪೇಗೌಡ, ಎನ್ ವೆಂಕಟೇಶ್, ಮುನಿರಾಜಪ್ಪ, ವೆಂಕಟಪ್ಪ, ಡಿ.ವೆಂಕಟೇಶ್, ಜಗದೀಶ್, ವೆಂಕಟರೋಣಪ್ಪ, ಶಿವಣ್ಣ, ರತ್ನಮ್ಮ, ನಳಿನಮಂಜುನಾಥ್, ಲಕ್ಷ್ಮಿ, ನಳಿನಾ ಅನುಸೂಯಮ್ಮ, ಲಕ್ಷ್ಮಿ, ಎನ್, ಸುಶೀಲ, ಸೇರಿದಂತೆ ಸದಸ್ಯರು ಹಾಗು ಮುಖಂಡರು ಹಾಜರಿದ್ದರು.

# ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ



ಮುಳಬಾಗಿಲು: ನಗರದ ಅಂಬೇಡ್ಕರ್ ಭವನದಲ್ಲಿ ಬಹುಜನ ಸಂಘಟನೆಗಳ ಒಕ್ಕೂಟ ತ್ರಿಚಕ್ರವಾಹನ ಚಾಲಕರು ಮತ್ತು ಮಾಲೀಕರ ಸಂಘ ಹಾಗೂ ಜನಸಮೂಹ ಮಾಲೀಕರು ಮತ್ತು ಚಾಲಕರ ವಿವಿಧೋದ್ದೇಶ ಸಹಕಾರ ಸಂಘ ಸಂಯುಕ್ತ ಆಶ್ರಯದಲ್ಲಿ ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಆರಕ್ಷಕ ವೃತ್ತ ನಿರೀಕ್ಷಕ ಸತೀಶ್ ಅವರು ಮಾತನಾಡಿ, ಆಟೋ ಚಾಲಕರಿಗೆ ಖಾಕಿಯ ಬಟ್ಟೆ ಫುಲ್ ಪವರ್. ಆ ಬಟ್ಟೆಗೆ ಗೌರವ ಕೊಟ್ಟು ನಡೆದುಕೊಳ್ಳಬೇಕು. ಡಿಎಲ್‌ಗಳು ಮತ್ತು ಇನ್ಸೂರೆನ್ಸ್ ಗಳನ್ನ ಇಟ್ಟುಕೊಳ್ಳಬೇಕು ಹಾಗೂ ಕುಡಿದು ವಾಹನ ಚಲಾಯಿಸಬಾರದೆಂದು ತಿಳಿಸಿರುತ್ತಾರೆ ಬಹಳಷ್ಟು ಆಟೋ ಚಾಲಕರು ಶ್ರಮಜೀವಿಗಳಾಗಿರುತ್ತಾರೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಡಾ.ಸಂಘಸಂದ್ರ ವಿಜಯ್ ಕುಮಾರ್ ಸಂಸ್ಥಾಪಕರು ಬಹುಜನ ಸಂಘಟನೆಗಳು ಒಕ್ಕೂಟ ನಗರ ಸಭೆ ಮಾಜಿ ಅಧ್ಯಕ್ಷ ರಿಯಾಜ್ ಇರ್ಫಾನ್ ಪಾಷಾ, ರಾಜ್ಯಾಧ್ಯಕ್ಷ ಬಹುಜನ ಚಳುವಳಿ ಡಿಎಸ್‌ಎಸ್ ಅಲ್ಪಸಂಖ್ಯಾತರ ಘಟಕ ಜಾನ್ಸನ್, ಸಿ ವಿ ರಾಮನ್ ನಗರ ದಲಿತ ಮುಖಂಡ ಜಬಿವುಲ್ಲಾ, ನಗರಸಭೆ ಸದಸ್ಯ ಗಂಗಾಧರ, ಬಹುಜನ ರೈತ ಮತ್ತು ಹಸಿರು ಸೇನೆಯ ತಾಲ್ಲೂಕು ಅಧ್ಯಕ್ಷರು ಸುಹೇಲ್ ಪಾಷಾ, ತಾಲ್ಲೂಕು ಅಧ್ಯಕ್ಷರು ಇನ್ನು ಅನೇಕ ಮುಖಂಡರು ಭಾಗವಹಿಸಿದ್ದರು

# ಸಚಿವರಿಂದ ಜಾಂಬವ ಕಪ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ




**ದೇವನಹಳ್ಳಿ:** ಪಟ್ಟಣದ ಜೂನಿಯರ್ ಕಾಲೇಜು ಮೈದಾನದಲ್ಲಿ ಶ್ರೀ ಆದಿ ಜಾಂಬವ ಜಯಂತೋತ್ಸವ ಅಂಗವಾಗಿ ಶ್ರೀ ಆದಿ ಜಾಂಬವ ಸೇವಾ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ "ಜಾಂಬವ ಕಪ್ "ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗಳನ್ನು ಸಚಿವ ಕೆ .ಹೆಚ್ ಮುನಿಯಪ್ಪ ಉದ್ಘಾಟಿಸಿದರು.

ಸಚಿವ ಕೆ.ಎಚ್ ಮುನಿಯಪ್ಪ ಮಾತನಾಡಿ, ಶ್ರೀ ಆದಿ ಜಾಂಬವ ಜಯಂತೋತ್ಸವದ ಶುಭಾಶಯಗಳು ತಿಳಿಸಿ ಪಂದ್ಯಾವಳಿಗಳಲ್ಲಿ ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೆ ಶುಭ ಹಾರೈಸಿ ಕ್ರೀಡೆಯಲ್ಲಿ ಭಾಗವಹಿಸುವಿಕೆ ಬಹುಮುಖ್ಯ, ಸೋಲು ಗೆಲುವು ಸಾಮಾನ್ಯ, ಈಗ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಮುಂದಿನ ದಿನಗಳಲ್ಲಿ ಅವಿರತ ಪರಿಶ್ರಮದಿಂದ ರಾಷ್ಟ್ರ-ಅಂತರಾಷ್ಟೀಯ ಮಟ್ಟದಲ್ಲಿ ನಡೆಯುವ ಪಂದ್ಯಾವಳಿಗಳಲ್ಲಿ ಭಾಗವಹಿಸಿ ನಾಡಿಗೆ ಮತ್ತು ದೇಶಕ್ಕೆ ಕೀರ್ತಿ ತರುವಂತಾಗಬೇಕು ಎಂದು ಹೇಳಿದರು.

ಬೆಂಗಳೂರು ಅಂತರಾಷ್ಟೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ .ಶಾಂತಕುಮಾರ್ ಮಾತನಾಡಿ ಕ್ರೀಡಾಕೂಟವು ವ್ಯಕ್ತಿಯ ದೈಹಿಕ, ಮಾನಸಿಕ, ಸಾಮಾಜಿಕ ಮತ್ತು ವೃತ್ತಿ ಜೀವನವನ್ನು ಸಮರ್ಪಕವಾಗಿ ಅಭಿವೃದ್ಧಿಪಡಿಸುವ ಮಹತ್ವದ ಕಾರ್ಯವಾಗಿದೆ. ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಕ್ರೀಡೆಗೆ ಪ್ರಾಧಾನ್ಯ ನೀಡಬೇಕು, ಕ್ರೀಡೆ ಎಂಬುದು ಆರೋಗ್ಯ ಹಾಗೂ ಯಶಸ್ಸಿನ ಕೀಲಿ ಕೈ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷರಾದ ಸಿ.ಜಗನ್ನಾಥ್, ಪುರಸಭಾ ಅಧ್ಯಕ್ಷ ಮುನಿಕೃಷ್ಣ ,ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಚಂದ್ರಪ್ಪ ,ಪ್ರಧಾನ ಕಾರ್ಯದರ್ಶಿ ನಾಗೇಗೌಡ, ಜಾಲಿಗೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದ್ ಕುಮಾರ್, ಸದಸ್ಯರಾದ ಬೆಟ್ಟೇನಹಳ್ಳಿ ಮಹೇಶ್ ಕುಮಾರ್ ಮುಖಂಡರಾದ ಅಮರ್ ನಾಥ್, ಶ್ರೀ ಆದಿ ಜಾಂಬವ ಸೇವಾ ಟ್ರಸ್ಟ್ ಗೌರವ ಅಧ್ಯಕ್ಷರಾದ ಸಿ. ತಿರುಮಲೇಶ್ ,ಅಧ್ಯಕ್ಷರಾದ ಎಂ .ಶ್ರೀನಿವಾಸ್ ಉಪಾಧ್ಯಕ್ಷರಾದ ಎಲ್ .ಮುನಿರಾಜ್, ಖಜಾಂಚಿ ಸಿ. ರಾಘವ ,ಪ್ರಧಾನ ಕಾರ್ಯದರ್ಶಿ ಬಿ .ಮೂರ್ತಿ, ಕಾರ್ಯಕಾರಿ ಮಂಡಳಿಯ ನಿರ್ದೇಶಕರುಗಳಾದ ಶಿವಾನಂದ ,ಯಲ್ಲಪ್ಪ ,ನರಸಿಂಹಮೂರ್ತಿ, ಚಂದ್ರಶೇಖರ್, ಮುನಿರಾಜ್, ನರಸಿಂಹ ,ನಾಗರಾಜ್, ನಾಗೇಶ್ ,ಹರೀಶ್ ಮುನಿಯಮ್ಮ, ಡಿಸಿ ಹೇಮಂತ್ ಸೇರಿದಂತೆ ಟ್ರಸ್ಟ್ ನ ಮುಖಂಡರು ಸದಸ್ಯರು ಮತ್ತು ಹಲವಾರು ಕ್ರೀಡಾ ತಂಡಗಳ ಸ್ಪರ್ಧಿಗಳು ಭಾಗವಹಿಸಿದ್ದರು.

# ನಕಲಿ ಕ್ಲಿನಿಕ್‌ಗೆ ಬೀಗ

**ಶಿಡ್ಲಘಟ್ಟ:** ತಾಲ್ಲೂಕಿನ ಸಾದಲಿ ಗ್ರಾಮದಲ್ಲಿ ಯಾವುದೇ ಸರ್ಕಾರಿ ಅನುಮೋದನೆ ಇಲ್ಲದೆ ಗೋವರ್ಧನ್ ಎಂಬುವ ವ್ಯಕ್ತಿ ನಡೆಸುತ್ತಿದ್ದ ಕ್ಲಿನಿಕ್ ಮೇಲೆ ಆರೋಗ್ಯ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಅನಧಿಕೃತವಾಗಿ ವೈದ್ಯಕೀಯ ಸೇವೆ ಒದಗಿಸುತ್ತಿದ್ದ ಈ ಕ್ಲಿನಿಕ್ ನ ಬಗ್ಗೆ ದೂರುಗಳು ಬಂದಿದ್ದ ಹಿನ್ನೆಲೆಯಲ್ಲಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ತಜ್ಞರ ಪರಿಶೀಲನೆಯಾದ ಬಳಿಕ, ಕ್ಲಿನಿಕ್ ಯಾವುದೇ ಮಾನ್ಯತೆ ಪಡೆಯದೆ ಸೇವೆ ನೀಡುತ್ತಿರುವುದು, ರೋಗಿಗಳಿಗೆ ಸರಿಯಾದ ದಾಖಲೆಗಳಿಲ್ಲದೆ ಔಷಧಿ ನೀಡುತ್ತಿರುವುದು ಹಾಗೂ ಅಕ್ರಮವಾಗಿ ಚಿಕಿತ್ಸೆಯನ್ನು ಮುಂದುವರಿಸುತ್ತಿರುವುದು ಬೆಳಕಿಗೆ ಬಂದಿದೆ.

ಇದನ್ನು ತಕ್ಷಣವೇ ತಡೆಗಟ್ಟಲು ಅಧಿಕಾರಿಗಳು ಕ್ಲಿನಿಕ್ ಅನ್ನು ಸೀಜ್ ಮಾಡಿದ್ದಾರೆ. ತಾಲ್ಲೂಕಿನ ಸಾದಲಿ ಗ್ರಾಮದಲ್ಲಿ ಅನಧಿಕೃತವಾಗಿ ಗೋವರ್ಧನ್ ಎನ್ನುವ ವ್ಯಕ್ತಿ ನಡೆಸುತ್ತಿದ್ದ ಕ್ಲಿನಿಕ್‌ಗೆ ಬೀಗ ಜಡಿದು ಅರೋಗ್ಯ ಅಧಿಕಾರಿಗಳು ನೋಟೀಸ್ ನೀಡಿದರು.

ಕಾರ್ಯಾಚರಣೆಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶ್‌ಮೂರ್ತಿ,ತಾಲ್ಲೂಕು ಆರೋಗ್ಯ ನಿರೀಕ್ಷಣಾಧಿಕಾರಿ ದೇವರಾಜ್, ಡಾ.ಯಶವಂತ್ ಭಾಗವಹಿಸಿದ್ದರು.



# ಮುಂದಿನ ಚುನಾವಣೆಗಳಲ್ಲಿ ರಾಜೀವ್ ಕೈ ಬಲಪಡಿಸಿ:ಮುನಿಯಪ್ಪ

**ಶಿಡ್ಲಘಟ್ಟ:** ಕ್ಷೇತ್ರದಲ್ಲಿ ಮುಖಂಡ ರಾಜೀವ್ ಗೌಡ ಅವರು ತನು,ಮನ,ಧನ ಎಲ್ಲವನ್ನು ತಮಗಾಗಿ ಅರ್ಪಿಸಿ ಕೆಲಸ ಮಾಡುತ್ತಿದ್ದಾರೆ ಕುಡಿಯುವ ನೀರು, ಆಸ್ಪತ್ರೆ, ಆ್ಯಂಬುಲೆನ್ಸ್ ಸೇವೆ, ಶಿಕ್ಷಣ ಹಾಗೂ ಉನ್ನತ ವ್ಯಾಸಂಗಕ್ಕೆ ತರಬೇತಿ ಮುಂತಾದುವುಗಳನ್ನು ಈ ಭಾಗದ ಜನರಿಗೆ ಮಾಡುತ್ತಿದ್ದಾರೆ ಅವರಿಗೆ ತಮ್ಮೆಲ್ಲರ ಆಶೀರ್ವಾದ ಸದಾ ಇರಬೇಕು ಮುಂದಿನ ಚುನಾವಣೆಗಳಲ್ಲಿ ಅವರ ಕೈ ಬಲಪಡಿಸಬೇಕು ಎಂದು ರಾಜ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವರಾದ ಕೆ.ಎಚ್.ಮುನಿಯಪ್ಪ ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ಸಂಯೋಜಕರಾದ ರಾಜೀವ್ ಗೌಡ ಅವರ ಜನ್ಮ ದಿನಾಚರಣೆ ಪ್ರಯುಕ್ತ ನಗರದ ಕಾಂಗ್ರೆಸ್ ಭವನದಲ್ಲಿ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಕೇಂದ್ರದ ಉದ್ಘಾಟನೆ ಹಾಗು ಎಬಿಡಿ ಟ್ರಸ್ಟ್, ಅಭಿಮಾನಿಗಳ ಬಳಗ, ಎಂಸಿಸಿ ಕ್ರಿಕೆಟ್ ತಂಡದಿಂದ ಹಮ್ಮಿಕೊಂಡಿದ್ದ ಹೊನಲು ಬೆಳಕಿನ ಕ್ರಿಕೆಟ್ ಪಂದ್ಯಾವಳಿಗಳಿಗೆ ಚಾಲನೆ ನೀಡಿ ಮಾತನಾಡಿದರು.

ವಿದಾನಸಭಾ ಕ್ಷೇತ್ರದಲ್ಲಿ ನಮ್ಮ ಸರ್ಕಾರದ ಸಹಕಾರದೊಂದಿಗೆ ಹಾಗೂ ಪಕ್ಷದ ವತಿಯಿಂದ ಮುಂಬರುವ ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯತಿ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಪಕ್ಷವನ್ನು ಮುಖಂಡರಾದ ರಾಜೀವ್ ಗೌಡ ಅವರ ನೇತೃತ್ವದಲ್ಲಿ ಬಲಪಡಿಸಿ ಗೆಲ್ಲುವ ಕಡೆ ಗಮನವಹಿಸಬೇಕುಎಂದು ತಿಳಿಸಿದರು.

ವಿಧಾನಸಭಾ ಕ್ಷೇತ್ರವನ್ನು ಅಭಿವೃದ್ಧಿಪಡಿಸಲು ಶಾಸಕರ ನಿಧಿ ಏನು ಬರಲಿದೆಯೋ ಅದನ್ನು ಶಾಸಕರಿಗೆ ನೀಡಿ, ಉಳಿದಂತೆ ನಮ್ಮ ಪಕ್ಷದ ಮುಖಂಡ ರಾಜೀವ್ ಗೌಡ ಅವರ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸುತ್ತೇವೆ ಎಂದರು.

ಕ್ಷೇತ್ರದ ಜನತೆ ನನಗು ಕೂಡ ಆಶೀರ್ವಾದ ಮಾಡಿರುವ ಕಾರಣ ಸುಮಾರು ಮೂವತ್ತು ವರ್ಷಗಳ ಕಾಲ ಸಂಸತ್ ಸದಸ್ಯರಾಗಿ ಹಾಗು ಕೇಂದ್ರ ಸಚಿವರಾಗಿ ಕೆಲಸ ಮಾಡಲು ಅವಕಾಶ ಕಲ್ಪಿಸಿದ್ದು ನಾನು ನಿಮ್ಮ ಸೇವೆ ಹಾಗೂ ಈ ಭಾಗದ ಸರ್ವತೋಮುಖ ಅಭಿವೃದ್ಧಿ ಮಾಡಲು ರಾಜೀವ್ ಗೌಡ ಅವರೊಂದಿಗಿದ್ದೀನಿ ಎಂದರು.

ಕೆಪಿಸಿಸಿ ಸಂಯೋಜಕ ಹಾಗು ಎಬಿಡಿ ಟ್ರಸ್ಟ್ ನ ಅದ್ಯಕ್ಷರಾದ ಬಿ.ವಿ.ರಾಜೀವ್ ಗೌಡ ಮಾತನಾಡಿ ಕ್ಷೇತ್ರವು ತುಂಬಾ ಬಹಳ ಹಿಂದುಳಿದಿದೆ ಇಲ್ಲಿನ ಬಡ ವಿದ್ಯಾರ್ಥಿಗಳ ಕನಸು ಈಡೇರಿಕೆಗಾಗಿ ಕ್ಷೇತ್ರದಲ್ಲಿರುವ ಪ್ರತಿಯೊಬ್ಬರು ಅಭಿವೃದ್ಧಿ ಹೊಂದಬೇಕು ವಿಶೇಷವಾಗಿ ಯುವಕ ಯುವತಿಯರಿಗೆ ಉದ್ಯೋಗ ದೊರೆಯಬೇಕು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನಮ್ಮ ಕ್ಷೇತ್ರದ ವಿದ್ಯಾರ್ಥಿಗಳು



ತೇರ್ಗಡೆಯಾಗಿ ಐಎಎಸ್ , ಐಪಿಎಸ್,ಐಎಫ್ಎಸ್ ಮತ್ತು ಕೆಎಎಸ್ ಅಧಿಕಾರಿಗಳಾಗಿ ನಾಡಿನ ಮತ್ತು ದೇಶದ ಸೇವೆ ಮಾಡುವಂತವರಾಗಬೇಕು ಎಂಬ ಕಾರಣಕ್ಕಾಗಿ ಕಾಂಗ್ರೆಸ್ ಭವನದಲ್ಲಿ ಉಚಿತವಾಗಿ ತರಬೇತಿ ಕೇಂದ್ರವನ್ನು ತೆರೆಯಲಾಗಿದೆ ಇದನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ನುಡಿದರು.

ನಾನು ಮಾಡುವ ಜನಪರ ಕೆಲಸಗಳಿಂದ ಈ ಕ್ಷೇತ್ರದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ, ನನ್ನ ಉಸಿರು ಇರುವವರೆಗೂ ನಾನು ನಿಮ್ಮೊಂದಿಗೆ ಇರುತ್ತೇನೆ ಎಂದರು.

ಚುನಾವಣೆಯ ನಂತರ ನಾನು ಈ ಕ್ಷೇತ್ರ ಬಿಟ್ಟು ಹೋಗ್ತೇನೆ ಮತ್ತೆ ಚುನಾವಣೆವರೆಗೂ ಈ ಕಡೆ ತಲೆ ಹಾಕೊಲ್ಲ ಎಂದೆಲ್ಲಾ ಮಾತುಗಳನ್ನು ಆಡಿಕೊಂಡರು ಆದರೆ ನಾನು ಪ್ರತಿ ದಿನವೂ ನಿಮ್ಮೊಂದಿಗೆ ಇದ್ದೇನೆ, ಮುಂದೆಯೂ ಇರುತ್ತೇನೆ,ಈ ಕ್ಷೇತ್ರವನ್ನು ಈ ಕ್ಷೇತ್ರದ ಜನರನ್ನು ಬಿಡುವ ಪ್ರಶ್ನೆಯೇ ಇಲ್ಲ ಎಂದರು.

ಪದವೀಧರ ವಿದ್ಯಾರ್ಥಿಗಳಿಗೆ ಐಎಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸನ್ನದ್ದಗೊಳಿಸಲು ಉಚಿತ ತರಬೇತಿ ಕೇಂದ್ರಕ್ಕೆ ಇಂದಿನಿಂದ ಚಾಲನೆ ನೀಡಿದ್ದು ಆಭ್ಯರ್ಥಿಗಳಿಗೆ ತಗಲುವ ಸಂಪೂರ್ಣ ವೆಚ್ಚವನ್ನು ನಾನೇ ಭರಿಸುತ್ತೇನೆ, ನಮ್ಮ ಶಿಡ್ಲಘಟ್ಟದ ಯುವಕ, ಯುವತಿಯರು ಒಂದಿಬ್ಬರಾದರೂ ಐಎಎಸ್, ಐಪಿಎಸ್, ಕೆಎಎಸ್ ಪಾಸಾದರೆ ಅಷ್ಟೆ ಸಾಕು ಅದು ಈ ತಾಲ್ಲೂಕಿಗೆ ಹೆಮ್ಮೆ ತರುವಂತಾಗಲಿದೆ ಎಂದು ಹೇಳಿದರು.

ಸಭೆಗೂ ಮುನ್ನ ಸಾರಿಗೆ ಬಸ್ ನಿಲ್ದಾಣದಿಂದ ಕಾಂಗ್ರೆಸ್ ಭವನದವರೆಗೂ ಮೆರವಣಿಗೆ ನಡೆಸಿ ಕಾಂಗ್ರೆಸ್ ಭವನದಲ್ಲಿ ಕೇಕ್ ಕತ್ತರಿಸಲಾಯಿತು. ಸಾರ್ವಜನಿಕ ಆಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಅಂಧ ಮಕ್ಕಳ ಶಾಲೆಯಲ್ಲಿ ಅನ್ನ ಸಂತರ್ಪಣೆ ಮುಂತಾದ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಕೋಚಿಮುಲ್ ಮಾಜಿ ಅಧ್ಯಕ್ಷ ಕೆ. ಗುಡಿಯಪ್ಪ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸಹನಾರಾಜೀವ್ ಗೌಡ,ತರಬೇತಿ ಸಂಸ್ಥೆಯ ಡಾ.ಜ್ಯೋತಿ , ಹಾಪಕಾಮ್ಸ್ ಮಾಜಿ ಅದ್ಯಕ್ಷ ಭಕ್ತರಹಳ್ಳಿ ಮುನೇಗೌಡ,ಕೃಷ್ಣಾರೆಡ್ಡಿ, ವರದಣ್ಣ, ಕೆಪಿಸಿಸಿ ಸದಸ್ಯ ಗುಡಿಹಳ್ಳಿ ನಾರಾಯಣಸ್ವಾಮಿ, ನಗರಸಭೆಯ ಮಾಜಿ ಅಧ್ಯಕ್ಷ ಅಪ್ಸರ್ ಪಾಷ,ಗುತ್ತಿಗೆದಾರ ನಟರಾಜ್, ಕೆ.ಮಂಜುನಾಥ್,ಐ.ಎನ್.ಯು.ಟಿ.ಸಿ.ನ ರಾಜ್ಯ ಸಂಘಟನಾ ಕಾರ್ಯದರ್ಶಿ ಕುಂದಲಗುರ್ಕಿ ಮುನೀಂದ್ರ,ಡಿ.ಪಿ.ನಾಗರಾಜ್,ತಿಮ್ಮನಾಯಕನಹಳ್ಳಿ ಆನಂದ್,ರಿಯಾಜ್ ಪಾಷ, ತಸ್ವೀರ್ ಪಾಷಾ ,ನಾಗನರಸಿಂಹ,ನಡಿಪಿನಾಯಕನಹಳ್ಳಿ ವೆಂಕಟೇಶ್, ನರಸಿಂಹಮೂರ್ತಿ,ಕಾಂಗ್ರೆಸ್ ಕಾರ್ಯಕರ್ತರು ಹಾಗು ಅಭಿಮಾನಿಗಳು ಇನ್ನಿತರರು ಹಾಜರಿದ್ದರು.

# ಜಿಲ್ಲೆಯ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯ

**ಮುಳಬಾಗಿಲು:** ರಾಜ್ಯ ಸರ್ಕಾರ ಬಜೆಟ್ ಮಂಡನೆ ವೇಳೆಯಲ್ಲಿ ಕೋಲಾರ ಜಿಲ್ಲೆಯ ಬೇಡಿಕೆಗಳನ್ನು ಈಡೇರಿಸುವಂತೆ ಮುಳಬಾಗಿಲು ಜೆಡಿಎಸ್ ಶಾಸಕ ಸಮೃದ್ಧಿ ಮಂಜುನಾಥ್ ಸಿಎಂ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದ್ದಾರೆ

ಮುಳಬಾಗಿಲು ತಾಲೂಕಿನ ಆವಣಿ ಗ್ರಾಮದಲ್ಲಿ ಮಾತನಾಡಿದ ಶಾಸಕ ಸಮೃದ್ದಿ ಮಂಜುನಾಥ್, ಕೋಲಾರಕ್ಕೆ ಮೆಡಿಕಲ್ ಕಾಲೇಜು, ಹೈಟೆಕ್ ಮಾರುಕಟ್ಟೆ, ಕ್ರೀಡಾಂಗಣ, ಕಾರ್ಖಾನೆ ಬೇಡಿಕೆಯಿದೆ ಈ ಬಾರಿಯೂ ನಿರೀಕ್ಷೆ ಹುಸಿಯಾದರೆ ಕೋಲಾರ ಜಿಲ್ಲೆ ಅನಾಥವಾಗಲಿದೆ, ಆದರೆ ಸಿಎಂ ಸಿದ್ದರಾಮಯ್ಯ ಅವ್ರು, ಬೇಡಿಕೆ ಈಡೇರಿಸುವ ಭರವಸೆಯಿದೆ, ಕಳೆದ ಬಜೆಟ್ ನಲ್ಲಿ ಘೋಷಿಸಿರೊ ಕೆಲ ಯೋಜನೆ ಇನ್ನೂ ಜಾರಿಯಾಗಿಲ್ಲ, ನಮ್ಮ ಕ್ಷೇತ್ರದ ಅನುದಾನ ಸಿಗುತ್ತಿಲ್ಲ, ಹೀಗೆ ಮುಂದುವರೆದರೆ ಹೊಸ ಶಾಸಕರು ಬದುಕೊದು ಕಷ್ಟವಾಗಲಿದೆ, ಅನುದಾನ ಇಲ್ಲದೆ ಹಳ್ಳಿ ಕಡೆ ಹೋಗೋಕೆ ಆಗುತ್ತಿಲ್ಲ, ಇನ್ನು ಗ್ಯಾರೆಂಟಿ ಯೋಜನೆ ಕಂತಿನ ಹಣ ತಡವಾಗಿರುವ ಬಗ್ಗೆ ಸಮೃದ್ದಿ ಮಂಜುನಾಥ್ ವ್ಯಂಗ್ಯವಾಡಿದ್ದಾರೆ, ಸಮಯಕ್ಕೆ ಸರಿಯಾಗಿ ಹಣ ಬರೋಕೆ,



ಈಗ ಯಾವುದೆ ಬೈ ಎಲೆಕ್ಷನ್ ಇಲ್ವಲ್ಲಾ ಎಂದು ಹಾಸ್ಯ ಚಟಾಕಿ ಹಾರಿಸಿದರು, ಇನ್ನು ಮಾಜಿ ಸಿಎಂ ಕುಮಾರಸ್ವಾಮಿ ಎಚ್.ಡಿ ಕುಮಾರಸ್ವಾಮಿ ಆರೋಗ್ಯ ಸ್ತಿರವಾಗಿದೆ ಎಂದು ಸಮೃದ್ದಿ ಮಂಜುನಾಥ್ ಮಾಹಿತಿ ನೀಡಿದ್ದಾರೆ, ಕಫಾ ಸಮಸ್ಯೆಯಿಂದ ಎಚ್.ಡಿ.ಕೆ ಬಳಲುತ್ತಿದ್ದಾರೆ, ದೆಹಲಿ ವಾತಾವರಣಕ್ಕೆ ಇನ್ನು ಅವರು ಒಗ್ಗಿಕೊಂಡಿಲ್ಲ, ವೈದ್ಯರು ವಿಶ್ರಾಂತಿ ಪಡೆಯಲು ಹೇಳಿದ್ದಾರೆ, ಯಾರೂ ಆತಂಕ ಪಡಬೇಕಿಲ್ಲ, ಫೆಬ್ರವರಿ 24 ರಂದು ಜಿ.ಪಂ, ತಾಲೂಕು.ಪಂ ಚುನಾವಣೆ ಸಿದ್ದತೆ ಸಭೆಯಲ್ಲಿ ಎಚ್.ಡಿ ಕುಮಾರಸ್ವಾಮಿ ಭಾಗಿಯಾಗಲಿದ್ದಾರೆ ಎಂದು ಸಮೃದ್ಧಿ ಮಂಜುನಾಥ್ ಹೇಳಿದ್ದಾರೆ.

# ಧಾರ್ಮಿಕ ಚಿಂತನ ಮತ್ತು ಶಿವರಾತ್ರಿ ಕಾರ್ಯಕ್ರಮ

**ಮಾಗಡಿ:** ತಾಲೂಕಿನ ಗುಮ್ಮಸಂದ್ರ ಶ್ರೀರುದ್ರಮುನೀಶ್ವರ ಮಠದಲ್ಲಿ ಫೆ.26ರ ಮಹಾ ಶಿವರಾತ್ರಿ ಪ್ರಯುಕ್ತ ಸಂಜೆ 6 ಗಂಟೆಗೆ ಧಾರ್ಮಿಕ ಚಿಂತನ ಮತ್ತು ಶಿವರಾತ್ರಿ ಕಾರ್ಯಕ್ರಮ ಹಾಗೂ ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಶ್ರೀರುದ್ರಮುನೇಶ್ವರ ಪ್ರಶಸ್ತಿ ಪ್ರಧಾನ ನಡೆಯಲಿದೆ ಎಂದು ಶ್ರೀಮಠದ ಡಾ.ಚಂದ್ರಶೇಖರ ಸ್ವಾಮೀಜಿ ತಿಳಿಸಿದ್ದಾರೆ.

ಫೆ.26 ರ ಬೆಳಗ್ಗೆ 6 ಗಂಟೆಗೆ ಶ್ರೀರುದ್ರ ಮುನೇಶ್ವರ ಗದ್ದುಗೆ ಹಾಗೂ ಗಂಗಾಧರ ಶಿವಯೋಗಿಗಳ ಗದ್ದುಗೆಗೆ ಮಹಾರು ದ್ರಾಭಿಷೇಕ ಹಾಗೂ ಸಹಸ್ರ ಬಿಲ್ವಾರ್ಚನೆ. ಕೈಲಾಸ ಶಿವನಿಗೆ ಹತ್ತಿ ಅಲಂಕಾರ, ಅಭಿಷೇಕ, ಗಣಪತಿ ಹೋಮ, ಹವನಗಳು ಸೇರಿದಂತೆ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆಯಲಿದೆ, ಸಂಜೆ 7 ಗಂಟೆಗೆ ಪಂತಂಜಲಿ ಯೋಗ ಶಿಕ್ಷಣ ಸಮಿತಿ ಮಾಗಡಿ ವತಿಯಿಂದ ಶಿವ ನಮಸ್ಕಾರ ನಡೆಯಲಿದೆ ಕಾರ್ಯಕ್ರಮಕ್ಕೆ ಭಾಗವಹಿಸುವ ಭಕ್ತರಿಗೆ ನಿರಂತರ ಅನ್ನದಾಸೋಹ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಬೆಟ್ಟದಹಳ್ಳಿ ಗವಿಮಠದ ಚಂದ್ರಶೇಖರ ಸ್ವಾಮೀಜಿ, ಮಡಾಳು ನಿರಂಜನ ಪೀಠ ವಿರಕ್ತ ಮಠದ ರುದ್ರಮುನಿ ಸ್ವಾಮೀಜಿ, ಕಾಲುವೆ ಮಠದ ಶಿವರುದ್ರ ಸ್ವಾಮೀಜಿ ವಹಿಸಲಿದ್ದಾರೆ. ಶ್ರೀಮಠದ ಡಾ.ಚಂದ್ರಶೇಖರ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಲಿದ್ದು ಶಾಸಕ ಎಚ್.ಸಿ.ಬಾಲಕೃಷ್ಣ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಆ ಸಂಘಟಿತ ಕಾರ್ಮಿಕರ ಒಕ್ಕೂಟದ ರಾಜ್ಯಾಧ್ಯಕ್ಷ ಡಾ.ಪ್ರಸನ್ನ ಗೌಡ ಅವರಿಗೆ ಶ್ರೀರುದ್ರಮುನೇಶ್ವರ ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.



ಮಾಜಿ ಎಂಎಲ್ಸಿ ಅ.ದೇವೇಗೌಡ, ಮಾಜಿ ಶಾಸಕ ಎ.ಮಂಜುನಾಥ್, ಮಾಜಿ ಉಪಮಹಾಪೌರ ಬಿ.ಎಸ್.ಪುಟ್ಟರಾಜು, ಕೆಆರ್ಐಡಿಎಲ್ ನಿಗಮ ಮಾಜಿ ಅಧ್ಯಕ್ಷ ಎಂ.ರುದ್ರೇಶ್, ಕೆಂಪೇಗೌಡ ಆಸ್ಪತ್ರೆ ಅಧ್ಯಕ್ಷ ಎಚ್.ಎನ್.ಅಶೋಕ್, ಬಿಜೆಪಿ ಮುಖಂಡ ಎ.ಎಚ್.ಬಸವರಾಜು, ಬೆಸ್ಕಾಂ ಮಾಜಿ ನಿರ್ದೇಶಕ ಬಿ.ವಿ.ಜಯರಾಮು, ಬಿಎಂಆರ್‌ಡಿಎ ಅಧ್ಯಕ್ಷ ಕೆಂಚೇಗೌಡ, ಮಾಜಿ ಅಧ್ಯಕ್ಷ ಕೆ.ಕೃಷ್ಣಮೂರ್ತಿ, ಡಾ.ಎಂಜಿ.ರಂಗಧಾಮಯ್ಯ, ಟಿಎಪಿಸಿಎಂಎಸ್ ಅಧ್ಯಕ್ಷ ಶಿವಪ್ರಸಾದ್, ಬಿಡದಿ ಪುರಸಭೆ ಸ್ಥಾಯಿಸಮಿತಿ ಅಧ್ಯಕ್ಷ ಲೋಹಿತ್, ಕೆಂಪೇಗೌಡ ಅಭಿವೃದ್ಧಿ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ.ಕೃಷ್ಣಮೂರ್ತಿ, ಸಮಾಜ ಸೇವಕ ಭಾಗೇಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ, ಮುಖಂಡರಾದ ಶೈಲಜಾ, ಪುರಸಭಾ ಸದಸ್ಯ ಅನಿಲ್ ಕುಮಾರು ಸೇರಿದಂತೆ ಹರಗುರು ,ಚರಮೂರ್ತಿಗಳು, ಸಾಹಿತಿಗಳು, ಚಿಂತಕರು ಸುತ್ತಮುತ್ತಲ ಹತ್ತಾರು ಗ್ರಾಮಗಳ ಭಕ್ತರು ಭಾಗವಹಿಸಲಿದ್ದಾರೆ.

# ಚುನಾವಣೆಯಲ್ಲಿ ಯುವ ಕಾಂಗ್ರೆಸ್ ಮಹತ್ತರ ಪಾತ್ರ ನಿರ್ವಹಿಸಬೇಕಿದೆ

**ವಿಜಯಪುರ;** ಚುನಾವಣೆ ಗೆದ್ದಿದ್ದೇವೆ ಈಗ ಚುನಾವಣೆ ವಿಚಾರ ಮರೆತು ಯಾವುದೇ ಗುಂಪುಗಾರಿಕೆ ಮಾಡದೆ, ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಕಾಂಗ್ರೆಸ್ ಪಕ್ಷದ ಸಿದ್ಧಾಂತ ನಂಬಿ ಪಕ್ಷದ ಸದಸ್ಯತ್ವ ಪಡೆದಿರುವ ಎಲ್ಲರನ್ನು ಸೇರಿಸಿಕೊಂಡು ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಹೋರಾಟ ಮಾಡಲು ಯುವ ಪಡೆ ಸನ್ನದ್ದರಾಗಬೇಕು ಎಂದು ರಾಜ್ಯ ಘಟಕದ ಯುವ ಕಾಂಗ್ರೆಸ್ ಅಧ್ಯಕ್ಷ ಹೆಚ್.ಎಸ್. ಮಂಜುನಾಥ್ ಗೌಡ ತಿಳಿಸಿದರು.

ರಾಜ್ಯ ಘಟಕದ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಅಭೂತಪೂರ್ವ ಮತಗಳಿಂದ ಆಯ್ಕೆಯಾದ ಮಂಜುನಾಥ್ ಗೌಡರಿಗೆ ಎನ್.ಎಸ್.ಯು.ಐ ರಾಜ್ಯ ಪ್ರಧಾನ ಕಾರ್ಯದರ್ಶಿ ಮುಕೇಶ್ ಬಾಬು ಮತ್ತು ಸಂಗಡಿಗರು ಅಭಿನಂದನೆ ಸಲ್ಲಿಸಿದ ವೇಳೆ ಮಾತನಾಡಿ, ಮುಂದಿನ ಎರಡು ಮೂರು ತಿಂಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಬರುತ್ತಿದೆ. ಜತೆಗೆ



ಬಿಬಿಎಂಪಿ ಚುನಾವಣೆ ಸಮೀಪಿಸುತ್ತಿದೆ. ನಾವು ಸಕಲ ಸಿದ್ಧತೆ ಮಾಡಿಕೊಳ್ಳಬೇಕು, ನಾವೆಲ್ಲರೂ ಈಗಿನಿಂದಲೇ ಬೂತ್ ಮಟ್ಟದಲ್ಲಿ ಸಜ್ಜಾಗಿ ಪಕ್ಷ ಸಂಘಟನೆ ಮತ್ತು ಅಧಿಕಾರ ಹಿಡಿಯುವಲ್ಲಿ ನಮ್ಮ ಯುವ ಕಾಂಗ್ರೆಸ್ ಪಾತ್ರ ಬಹುಮುಖ್ಯವಾಗಿದೆ, ಗ್ಯಾರಂಟಿ ಯೋಜನೆಗಳ ಪ್ರಚಾರ, ಯುವ ಸಮುದಾಯಕ್ಕೆ ಹೆಚ್ಚಿನ ಆದ್ಯತೆ ವಿಚಾರಗಳನ್ನ ಪ್ರಚಾರ ನಡೆಸಬೇಕಿದೆ.


ಈ ಸಂದರ್ಭದಲ್ಲಿ ಯಲಹಂಕ ವಿಧಾನ ಸಭಾ ಕ್ಷೇತ್ರದ ಅಧ್ಯಕ್ಷ ದಿಲೀಪ್ ಗೌಡ, ಯಲಹಂಕ ಬ್ಲಾಕ್ ಅಧ್ಯಕ್ಷ ಅರ್ಜುನ್, ಯುವ ಕಾಂಗ್ರೆಸ್ ಮುಖಂಡರಾದ ವಿಜಯ್ ಕುಮಾರ್, ಎನ್. ಕೆ.ಪ್ರದೀಪ್ ಗೌಡ, ಎನ್.ಶಿವಕುಮಾರ್, ಗಗನ್ ಮತ್ತಿತರರು ಇದ್ದರು.

# ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರ ಸಹಕಾರಿ

ಮಾಗಡಿ: ಗ್ರಾಮೀಣ ಜನರ ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಲಿದೆ ಎಂದು ಕಲ್ಯ ಗ್ರಾಮಪಂಚಾಯ್ತಿ ಅಧ್ಯಕ್ಷ ಬಿ.ಕೆ.ಕುಮಾರು ಹೇಳಿದರು.

ತಾಲೂಕಿನ ಕಲ್ಯ ಶ್ರೀಉರಿಗದ್ದೀಶ್ವರ ಸೋಮನಾಥ ಪ್ರೌಢಶಾಲೆ ಆವರಣದಲ್ಲಿ ವಿಜ್ಞಾತಂ ಸೌತ್ ಕ್ಯಾಂಪಸ್ ನಗಲೂರು ದಾಸನಪುರ ಬಿಜಿಎಸ್ ವೈದ್ಯಕೀಯ ಕಾಲೇಜು ಆಸ್ಪತ್ರೆಯಿಂದ ಏರ್ಪಡಿಸಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡದ ಅವರು, ಗ್ರಾಮೀಣ ಭಾಗದಲ್ಲಿ ಆಯೋಜಿಸುವ ಇಂಥಹ ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಜನರಿಗೆ ಅನುಕೂಲವಾಗಿದ್ದು, ಆರ್ಥಿಕ ಉಳಿತಾಯವಾಗಲಿದೆ. ಜೀವನದಲ್ಲಿ ಸಾಧನೆ ಮಾಡಲು ಸದೃಢ ಆರೋಗ್ಯ ಬಹಳ ಮುಖ್ಯ ದೇಹವು ರೋಗಗಳ ನೆಲೆಯಾಗದಂತೆ ಎಚ್ಚರ ವಹಿಸಬೇಕು. ಧುಶ್ಚಟಗಳಿಂದ ದೂರವಿರಬೇಕು ಎಂದರು.

ಆಯೋಜಕ ಗ್ರಾ.ಪಂ. ಸದಸ್ಯ ಎಂ.ವಿ.ರಂಗನಾಥ್ ಮಾತನಾಡಿ, ಗ್ರಾಮೀಣ ಭಾಗಡ ರೈತರು, ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೆ ತಜ್ಞ ವೈದ್ಯರು ಲಭ್ಯವಿದ್ದಾಗ ಶಿಬಿರದಲ್ಲಿ ಭಾಗವಹಿಸಿ ಉಚಿತ ಆರೋಗ್ಯ ಶಿಬಿರಗಳನ್ನು ಸದುಪಯೋಗಪಡಿಸಿಕೊಳ್ಳಿ. ಈ ಹಿಂದಿನ ದಿನಗಳಲ್ಲಿ ನಮ್ಮಲ್ಲಿ ವಾಂತಿ-ಬೇದಿ, ಟೈಪಾಯಿಡ್,ಕ್ಷಯ, ಕಾಲಾರದಂಥಹ ರೋಗಗಳು ಸಾಮಾನ್ಯವಾಗಿದ್ದವು. ಆದರೆ ಇತ್ತಿಚನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಬಿಪಿ,ಶುಗರ್, ದೃದ್ರೋಗ ಕಾಯಿಲೆ,ಕಿಡ್ನಿ ಕಾಯಿಲೆಗಳು ಸಾಮಾನ್ಯವಾಗಿವೆ ಇವು ಶ್ರೀಮಂತರ ಕಾಯಿಲೆಗಳಾಗಿದ್ದು ಬಡ ಜನರು ಆರ್ಥಿಕವಾಗಿ ಭರಿಸಲು ಅಸಾಧ್ಯ. ಗ್ರಾಮೀಣ ಭಾಗದ ಜನರು ನಗರ ಪ್ರದೇಶದ ಬಡ ಜನರಿಗೆ ಇಂಥಹ ಶಿಬಿರಗಳ ಮೂಲಕವೇ ಚಿಕಿತ್ಸೆಗೊಳಪಡಿಸಿದಾಗ ಮಾತ್ರ ಅವರನ್ನು ಸಂಕಷ್ಟದಿಂದ ಪಾರು ಮಾಡಲು ಸಾಧ್ಯ ಎಂದರು.




ಗ್ರಾಮೀಣ ಜನರಿಗೆ ಆರೋಗ್ಯ ವೃದ್ದಿಸುವ ನಿಟ್ಟಿನಲ್ಲಿ ದಾಸನಪುರ ಬಿಜಿಎಸ್ ವೈದ್ಯಕೀಯ ಕಾಲೇಜು ಆಸ್ಪತ್ರೆಯಿಂದ ನುರಿತ ಹತ್ತಾರು ಮಂದಿ ವೈದ್ಯರ ತಂಡ ಬೃಹತ್ ಆರೋಗ್ಯ ಶಿಬಿರ ನಡೆಸಿಕೊಟ್ಟಿದ್ದಾರೆ ಇದರಿಂದ 500 ಕ್ಕೂ ಹೆಚ್ಚು ಮಂದಿ ವಿವಿಧ ಕಾಯಿಲೆಗಳಿಗೆ ಚಿಕಿತ್ಸೆ ಪಡೆದಿದ್ದಾರೆ ಇಂಥಹ ಶಿಬಿರಗಳನ್ನು ಪ್ರತಿ ವರ್ಷ ಆಯೋಜಿಸಲಾಗುವುದು ಎಂದರು.

ಶಿಬಿರದಲ್ಲಿ ಭಾಗವಹಿಸಿದವರಿಗೆ ತಿಂಡಿ, ಊಟ. ವಾಹನದ ವ್ಯವಸ್ಥೆ ಕಲ್ಪಿಸಲಾಯಿತು.

ಗ್ರಾ.ಪಂ. ಸದಸ್ಯ ಮಾತೃ ಕೃಷ್ಣಪ್ಪ, ವಿಎಸ್ಎಸ್ಎನ್ ಉಪಾಧ್ಯಕ್ಷ ಕಮಲಮ್ಮ ಚಂದ್ರಪ್ಪ, ನರಸಿಂಹಮೂರ್ತಿ, ಶಿವರಾಮಯ್ಯ, ಶ್ರೀಪತಿಹಳ್ಳಿ ಬುಲೆಟ್ ರಾಮು, ಬಾಬ್ ರಾವ್, ನಂಜುಂಡಸ್ವಾಮಿ ಇತರರು ಇದ್ದರು.

# ಬಲ್ಡೋಟಾ ಕಂಪನಿ ವಿಸ್ತರಣೆಗೆ ವಿರೋಧಿಸಿ ಕೊಪ್ಪಳ ಬಂದ್

**ಕೊಪ್ಪಳ:** ನಗರದಿಂದ ಕೆಲವೇ ಕೆಲವು ಕೀ ಮೀ ದೂರದಲ್ಲಿರುವ ಬಿ ಎಸ್ ಸಿ ಪಿ ಎಲ್ ( ಬಲ್ಡೋಟಾ ) ಕಂಪನಿ ವಿರುದ್ಧ ಇಂದು ನಡೆದ ಕೊಪ್ಪಳ ನಗರದ ಬಂದ್ ಬಹುತೇಕ ಯಶಸ್ವೀಯಾಗಿದೆ.

ಕೊಪ್ಪಳ ನಗರದ ಹೊರವಲಯದಲ್ಲಿ ಈಗಾಗಲೇ ಬಲ್ಡೋಟ ಕಂಪನಿ ಸುಮಾರು 100 ಎಕರೆ ಪ್ರದೇಶದಲ್ಲಿ ಉಕ್ಕು ಉತ್ಪದನೆ ಘಟಕ ಸ್ಥಾಪಿಸಿ ಕಾರ್ಯರಂಭವಾಗಿ ಸುಮಾರು ವರ್ಷಗಳು ಕಳೆದಿವೆ. ಈಗಿರುವ 100 ಎಕರೆ ಪ್ರದೇಶದ ಕಾರ್ಖಾನೆಯ ನೈರ್ಮಲ್ಯ ದಿಂದ ಕೊಪ್ಪಳ ನಗರದ ಅಸುಪಾಸು ಗ್ರಾಮ,ಪ್ರದೇಶದಲ್ಲಿ ವಾತಾವರಣ ಕಲುಷಿತಗೊಂಡಿದೆ. ಅನಾರೋಗ್ಯದ ಭೀತಿ ಕಾಡುತ್ತಿದೆ. ಇಂತಹ ಹೊತ್ತಲ್ಲಿ ಬಲ್ಡೋಟಾ ಕಂಪನಿ ಮತ್ತೆ 900 ಎಕರೆ ಪ್ರದೇಶದಲ್ಲಿ ಕೈಗಾರಿಕೆ ವಿಸ್ತರಣೆಗೆ ಮುಂದಾಗಿದ್ದು ಜಿಲ್ಲೆಯ ಜನತೆಯ ನೆಮ್ಮದಿ ಹಾಳು ಮಾಡಿದೆ. ಯಾವುದೇ ಕಾರಣಕ್ಕೂ



ಕಂಪನಿ ವಿಸ್ತರಣೆಗೆ ಅವಕಾಶ ನೀಡಬಾರದು ಎಂದು ಜಿಲ್ಲೆಯಲ್ಲಿ ಇಂದು ಬಂದ್ ಮಾಡಿ ಪಕ್ಷತೀತವಾಗಿ ಹೋರಾಟ ಮಾಡಲಾಯಿತು.

ಹೋರಾಟದಲ್ಲಿ ಜಿಲ್ಲೆಯ ಮಠಾಧೀಷರು ಸೇರಿದಂತೆ ಎಲ್ಲಾ ಪಕ್ಷಗಳ ಮುಖಂಡರು, ಪ್ರಗತಿಪರ ಸಂಘಟನೆಗಳು ಭಾಗವಹಿಸಿ ಉದ್ದೇಶಿತ ಯೋಜನೆ ಕೈಬಿಡುವಂತೆ ಒತ್ತಾಯಿಸಿ ಹೋರಾಟ ಮಾಡಲಾಯಿತು. ಬೆಳಗ್ಗೆಯಿಂದಲೇ ಅಂಗಡಿ ಮುಂಗಂಟುಗಳು, ಸ್ವಯಂ ಪ್ರೇರಿತವಾಗಿ ಮುಚ್ಚಿ ವ್ಯಾಪಾರಸ್ಥರು ಬಂದ್‌ಗೆ ಬೆಂಬಲಿಸಿದರು. ಮುಂಜಾಗೃತ ಕ್ರಮವಾಗಿ ಕೊಪ್ಪಳ ತಾಲೂಕಿನ ಶಾಲೆ ಕಾಲೇಜುಗಳಿಗೆ ರಜೆ ನೀಡಲಾಗಿತ್ತು.

# ನೊಂದ ಮಹಿಳೆಗೆ ಸ್ಪಂದಿಸದ ಪೊಲೀಸರ ವಿರುದ್ಧ ಗರಂ!

**ಚಾಮರಾಜನಗರ:** ನೊಂದ ಶಿಕ್ಷಕಿಗೆ ನ್ಯಾಯ ದೊರಕಿಸಿಕೊಡಬೇಕಾದ ಆರಕ್ಷಕರು ಸಾಮಾನ್ಯ ಅರ್ಜಿ ಎಂಬಂತೆ ದೂರು ದಾಖಲಿಸಿ ಕೈತೊಳೆದುಕೊಂಡಿದ್ದ ಪ್ರಕರಣವೊಂದಕ್ಕೆ ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರ ಇದೀಗ ಪೊಲೀಸ್ ಇಲಾಖೆಗೆ ಚುರುಕು ಮುಟ್ಟಿಸಲು ಮುಂದಾಗಿದೆ.

ತಾಲ್ಲೋಕಿನ ಮರಿಯಾಲ ಸ.ಹಿ.ಪ್ರಾ.ಶಾಲೆಯ ಪ್ರಬಾರ ಶಿಕ್ಷಕಿ ಸುಶೀಲ ಎಂಬುವವರ ಮೇಲೆ ಜನವರಿ 28 ರಂದು ಪ್ರಕರಣವೊಂದಕ್ಕೆ ಸಂಬಂದಿಸಿದಂತೆ ಗ್ರಾಮದಲ್ಲಿ ಅವ್ಯಾಚ್ಯವಾಗಿ ಬೈಯ್ದು ಮಾರಣಾಂತಿಕ ಹಲ್ಲೆ ನಡೆಸಿದ್ದರ ಸಂಬಂದ ಗ್ರಾಮಾಂತರ ಠಾಣೆಗೆ ದೂರು ನೀಡಿದಾಗ ಸಾಮಾನ್ಯ ದೂರಂತೆ ಪರಿಗಣಿಸಿ ಆರೋಪಿತರ ಮೇಲೆ ಕ್ರಮ ಕೈಗೊಳ್ಳದಿರುವುದಿಲ್ಲ ಅಷ್ಟೆ ಅಲ್ಲ ಗ್ರಾಮದ ಕೆಲವರು ಯುವಕರು ಜೀವ ಬೆದರಿಕೆ ಕೂಡ ಹಾಕುತ್ತಿದ್ದು ಕರ್ತವ್ಯ ನಿರ್ವಹಿಸಲು ತೊಂದರೆಯಾಗುತ್ತಿದೆ..ಸದರಿ ಕಾನೂನು ಕ್ರಮ ಕೈಗೊಳ್ಳುವಂತೆ, ರಕ್ಷಣೆ ನೀಡುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರಕ್ಕೆ 2025 ಪೆ.22 ರಂದು ದೂರು ದಾಖಲು ಮಾಡಿದ್ದಾರೆ .

ದೂರಿನನ್ವಯ ಕಾನೂನು ಸೇವೆಗಳ ಪ್ರಾದಿಕಾರ ಡಿಜಿಪಿ ಹಾಗೂ ಸ್ಥಳಿಯ ಪೊಲೀಸ್ ವರೀಷ್ಠಾದಿಕಾರಿಗಳಿಗೆ ಪತ್ರ



ಬರೆದಿದ್ದು,..

ಅರ್ಜಿದಾರರು ದೂರು ಹಾಗೂ ಸಿ.ಡಿ.ಯನ್ನು ಸಲ್ಲಿಸಿದ್ದರೂ ಸಹ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ನಿರ್ಲಕ್ಷ್ಯ ಮಾಡಿ ಅರ್ಜಿದಾರರಿಗೆ ನ್ಯಾಯ ಕೊಡಿಸುವಲ್ಲಿ ಸಂಪೂರ್ಣವಾಗಿ ವಿಫಲರಾಗಿರುತ್ತಾರೆ.ಅಲ್ಲದೇ ಸದರಿ ಪೊಲೀಸ್ ಠಾಣೆಯ ಆರಕ್ಷಕ, ನಿರೀಕ್ಷಕರು ಹಾಗೂ ಆರಕ್ಷಕ ಉಪನಿರೀಕ್ಷಕರು ಇದೇ ರೀತಿ ಹಲವಾರು ಪ್ರಕರಣಗಳಲ್ಲಿ ಸಾರ್ವಜನಿಕ ದೂರನ್ನು ಸ್ವೀಕರಿಸದೇ ನಿರಾಕರಿಸಿ ಕರ್ತವ್ಯಕ್ಕೆ ಚ್ಯುತಿ ಮಾಡುತ್ತಿರುತ್ತಾರೆ ಎಂದು ನಮ್ಮ ಪ್ರಾಧಿಕಾರದ ಗಮನಕ್ಕೆ ಬಂದಿರುವುದರಿಂದ ಅರ್ಜಿದಾರರಿಗೆ ರಕ್ಷಣೆ ನೀಡಿ ನ್ಯಾಯ ಕೊಡಿಸದೆ ಕರ್ತವ್ಯವದಲ್ಲಿ ನಿರ್ಲಕ್ಷ್ಯ ಮಾಡಿರುವ ಠಾಣೆಯ ಆರಕ್ಷಕ ನಿರೀಕ್ಷಕರು ಹಾಗೂ ಆರಕ್ಷಕ ಉಪನಿರೀಕ್ಷಕರುಗಳ ಮೇಲೆ ಸೂಕ್ತ ಶಿಸ್ತಿನ ಕ್ರಮ ಜರುಗಿಸುವಂತೆ ಸೂಚಿಸಿದ್ದಾರೆ.

ದೂರು ಪತ್ರದೊಂದಿಗೆ ಸಂಬಂಧಪಟ್ಟ ಪೊಲೀಸರು ನೋಂದಣಿ ಮಾಡಿರುವ ಜಿ.ಎಸ್.ಸಿ. ಕೇಸಿನ ಪ್ರತಿ ಮತ್ತು ವೈದ್ಯಕೀಯ ದಾಖಲೆಗಳ ಪ್ರತಿಗಳನ್ನು ಈ ಪತ್ರದ ಜೊತೆ ಲಗತ್ತಿಸಿ ಅದರ ಜೊತೆಗೆ ಶ್ರೀಮತಿ ಶಶಿಕಲಾ ರವರು ನೀಡಿದ ಪತ್ರದ ಪ್ರತಿ, ಸಿ.ಡಿ. ಮತ್ತು ಇತರೆ ದಾಖಲೆಗಳನ್ನು ಲಗತ್ತಿಸಿ ದೂರುದಾರರಿಗೆ ನ್ಯಾಯ ಕೊಡಿಸುವ ಜೊತೆಗೆ ರಕ್ಷಣೆ ನೀಡುವಂತೆ ಸೂಚಿಸಿದ್ದಾರೆ.

# ಮಾರ್ಚ್ 8 ರಂದು ಲೋಕ್ ಅದಾಲತ್

**ಚಾಮರಾಜನಗರ:** ದೆಹಲಿ ಕಾನೂನು ಸೇವೆಗಳ ಪ್ರಾಧಿಕಾರ, ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರ ನಿರ್ದೇಶನದಂತೆ ಚಾಮರಾಜನಗರ ಜಿಲ್ಲಾಧ್ಯಂತ ರಾಷ್ಟ್ರೀಯ ಲೋಕ್ ಅದಾಲತ್ ಪ್ರಕ್ರಿಯೆಯನ್ನು ಮಾರ್ಚ್ 08 ರಂದು ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಕಾನೂನು ಸೇವೆಗಳ ಪ್ರಾದಿಕಾರದ ಅಧ್ಯಕ್ಷರಾದ ಬಿ.ಎಸ್.ಭಾರತಿ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಜಿಲ್ಲಾದಾದ್ಯಂತ 23098 ಪ್ರಕರಣ ಪೈಕಿ 1040 ಪ್ರಕರಣ ಗುರ್ತಿಸಲಾಗಿದ್ದು117 ಪ್ರಕರಣ ವ್ಯಾಜ್ಯಪೂರ್ವ ಪ್ರಕರಣ ಹಾಗೂ 660 ಸಿದ್ದಪಡಿಸಿದ ಪ್ರಕರಣಗಳನ್ನ ಇತ್ಯರ್ಥಪಡಿ ಸಲಾಗುವುದು ಎಂದರು.

ಲೋಕ್ ಅದಾಲತ್ ನಲ್ಲಿ ಸಾರ್ವಜನಿಕರು ಮಾನ್ಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಚಿಸಿದಲ್ಲಿ, ಮುಂಚಿತವಾಗಿ ಚಾಮರಾಜನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಯಳಂದೂರು, ಕೊಳ್ಳೇಗಾಲ ಹಾಗೂ ಗುಂಡ್ಲುಪೇಟೆ ಗಳಲ್ಲಿ ಆನ್‌ಲೈನ್, ವಿಡಿಯೋ ಕಾನ್ಸರೆನ್ಸ್, ಇ-ಮೇಲ್, ಎಸ್.ಎಂ.ಎಸ್, ವಾಟ್ಸ್ ಆಪ್ ಮೂಲಕ ಅಥವಾ ಖುದ್ದಾಗಿ ಹಾಜರಾಗುವ ಮೂಲಕ ಸಂಬಂಧಪಟ್ಟ ಪ್ರಾಧಿಕಾರ ಮತ್ತು ಸಮಿತಿಗಳನ್ನು ಸಂಪರ್ಕಿಸಿ, ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಕೋರಿದೆ.

ಲೋಕ್ ಅದಾಲತ್ ನಿಮಿತ್ತ ಮಾನ್ಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜಿಯೋಗ್ಯ ಪ್ರಕರಣಗಳನ್ನು ಶೀಘ್ರ ಹಾಗೂ ಪರಿಣಾಮಕಾರಿ ತೀರ್ಮಾನಕ್ಕಾಗಿ ಎ.ಡಿ.ಆರ್. ಕಟ್ಟಡ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಾಮರಾಜನಗರ ದಲ್ಲಿ ಪೂರ್ವಭಾವಿ ಸಮಾಲೋಚನಾ ಕೇಂದ್ರವನ್ನು ತೆರೆಯಲಾಗಿದೆ. ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಪ್ರಕರಣ ಹಾಗೂ ಮಾನ್ಯ ನ್ಯಾಯಾಲಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.ಲೋಕ್ ಅದಾಲತ್ ನಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕ ವೇತನಕ್ಕೆ ಸಂಬಂಧಿಸಿದ ಪ್ರಕರಣಗಳು, ಗ್ರಾಹಕರ ವೇದಿಕೆ ಪ್ರಕರಣಗಳು, ರಿಯಲ್ ಎಸ್ಟೇಟ್ ಪ್ರಕರಣಗಳು, ಸಾಲ ವಸೂಲಾತಿ, ಚೆಕ್ ಅಮಾನ್ಯ ಪ್ರಕರಣಗಳು, ಮೋಟಾರ್ ಅ ಫಿ? ಪರಿಹಾರ ಪ್ರಕರಣಗಳು, ವಿದ್ಯುತ್ ಮತ್ತು ನೀರಿನ ಶುಲ್ಕಕ್ಕೆ ಸಂಬಂಧಿಸಿದ ಪ್ರಕರಣಗಳು, ಸ್ವಾಧೀನ ಪ್ರಕರಣಗಳು, ವೇತನ ಭತ್ಯೆ ಹಾಗೂ ಪಿಂಚಣಿಗೆ ಸಂಬಂಧಿಸಿದ ಪ್ರಕರಣ ಸಾರ್ವಜನಿಕ ಉಪಯುಕ್ತತೆ ಸೇವೆಗಳಿಗೆ ಸಂಬಂಧಿಸಿದ ಪ್ರಕರಣಗಳು, ರಾಜಿ ಯೋಗ್ಯ ಸಿವಿಲ್. ಮತ್ತು ಕ್ರಿಮಿನಲ್ ಪ್ರಕರಣಗಳು ಹಾಗೂ ಇತರೆ ಪ್ರಕರಣಗಳು, ಕುಟುಂಬ ನ್ಯಾಯಾಲಯದ ಪ್ರಕರಣ (ವಿವಾಹ ವಿಚ್ಛೇದನವನ್ನು ಹೊರತುಪಡಿಸಿ) ಗಳನ್ನು ಜನತಾ ನ್ಯಾಯಾಲಯಗಳಲ್ಲಿ ಇತ್ಯರ್ಥಪಡಿಸಲಾಗುವುದು ಎಂದರು.



# ಸೈಲೆಂಟಾಗಿ ಮುಗಿದ ವಿಜಯ್‌ಸೇತುಪತಿ– ನಿತ್ಯಾ ಮೆನನ್ ಚಿತ್ರದ ಶೂಟಿಂಗ್

ತಮಿಳು ಚಿತ್ರರಂಗದ ಪ್ರಮುಖ ನಟರಲ್ಲಿ ಒಬ್ಬರಾಗಿರುವ ವಿಜಯ್ ಸೇತುಪತಿ ಕೊನೆಯದಾಗಿ ಬಿಗ್ ಬಾಸ್ ತಮಿಳು ಸೀಸನ್ 8 ರ ಕಾರ್ಯಕ್ರಮ ನಿರೂಪಕರಾಗಿ 2024ರಲ್ಲಿ ಕಾಣಿಸಿಕೊಂಡಿದ್ದರು

'ಲವ್ ಬರ್ಡ್ಸ್' ಚಿತ್ರದ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ ವಿಜಯ್ ಸೇತುಪತಿ, ನಂತರ ಅನೇಕ ಚಿತ್ರಗಳಲ್ಲಿ ಪಾತ್ರಗಳಲ್ಲಿ ನಟಿಸಿದರು. ಅವರಿಗೆ ಹೆಸರು ತಂದುಕೊಟ್ಟ ಚಿತ್ರ 'ಸುಂದಪಾಂಡ್ಯನ್'.

ಅದಾದ ನಂತರ, ಅವರು ಪಿಜ್ಜಾ, ನಡುವುಲ ಕೊಂಜಮ್ ಪಕ್ಕತ್ ಕಾಣೊಮ್, ಸೂಧು ಕವ್ವುಮ್, ಇರುತ್ತನ್ ಆಸ್ಸೈಪಟ್ಟೈ ಬಾಲಕುಮಾರ, ಪನ್ನಿಯಾರುಮ್ ಪದ್ಮಿನಿಯುಮ್, ಜಿಗರ್ತಂಡ, ಬೆಂಚ್ ಟಾಕೀಸ್, ರೆಕ್ಕ, ಕವನ್, ಪೆಟ್ಟಾ, ಸೂಪರ್ ಡಿಲಕ್ಸ್, ವಿದುತುಲ್ಲು 1, ವಿದುತುಲ್ಲು 2, ಮತ್ತು ಮಹಾರಾಜ ಮುಂತಾದ ಅನೇಕ ಹಿಟ್ ಚಿತ್ರಗಳಲ್ಲಿ ನಟಿಸಿದರು. ಅವರು ಪ್ರಸ್ತುತ ಗಾಂಧಿ ಟಾಕೀಸ್, ಏಸ್ ಮತ್ತು ಟ್ರೈನ್ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ.

ಈ ನಡುವೆ ನಿರ್ದೇಶಕ ಪಾಂಡಿರಾಜ್ ನಿರ್ದೇಶನದಲ್ಲಿ ಹೊಸ ಚಿತ್ರದಲ್ಲಿ ನಟಿಸಿ ಚಿತ್ರೀಕರಣ ಮುಗಿಸಿದ್ದಾರೆ. ಸದ್ದಿಲ್ಲದೆ ನಡೆಯುತ್ತಿದ್ದ ಈ ಚಿತ್ರದ ಚಿತ್ರೀಕರಣ ಈಗ ಯಶಸ್ವಿಯಾಗಿ ಪೂರ್ಣಗೊಂಡಿದೆ. ಚಿತ್ರೀಕರಣ ಪೂರ್ಣಗೊಂಡಿರುವುದನ್ನು ಚಿತ್ರತಂಡ ಕೇಕ್ ಕತ್ತರಿಸುವ ಮೂಲಕ ಆಚರಿಸಿತು.

ಈ ಚಿತ್ರದಲ್ಲಿ ವಿಜಯ್ ಸೇತುಪತಿಗೆ ಜೋಡಿಯಾಗಿ ನಿತ್ಯಾ ಮೆನನ್ ನಟಿಸಿದ್ದಾರೆ. ಯೋಗಿ ಬಾಬು ಮತ್ತು ಸೆಂಬನ್ ವಿನೋದ್ ಜೋಸ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಸತ್ಯ ಜ್ಯೋತಿ ಫಿಲ್ಮ್ಸ್ ಈ ಚಿತ್ರವನ್ನು ನಿರ್ಮಿಸಿದೆ.

ಈ ಚಿತ್ರದಲ್ಲಿ ವಿಜಯ್ ಸೇತುಪತಿ ಮತ್ತು ನಿತ್ಯಾ ಮೆನನ್ ಮೊದಲ ಬಾರಿಗೆ ಒಟ್ಟಿಗೆ ನಟಿಸಿದ್ದಾರೆ ಎಂಬುದು ಗಮನಾರ್ಹ. ಚಿತ್ರದ ಶೀರ್ಷಿಕೆ, ಫಸ್ಟ್ ಲುಕ್ ಪೋಸ್ಟರ್,



# ಏನೋ ಮಿಸ್ಸಿಂಗ್

ಬಿಗ್ ಬಾಸ್ ಬೆಡಗಿ, ನಟಿ ನಿವೇದಿತಾ ಗೌಡ ಗೊತ್ತಿಲ್ಲದವರು ಕಡಿಮೆ. ಈಗಂತೂ ನಿವೇದಿತಾ ಸೋಷಿಯಲ್ ಮೀಡಿಯಾ ಸೆನ್ಸೇಷನ್ ಆಗಿಬಿಟ್ಟಿದ್ದಾರೆ. ನಿವೇದಿತಾ ಗೌಡ ಅವರು ಸಿನಿಮಾದಲ್ಲಿ ತೊಡಗಿಸಿಕೊಂಡಿದ್ದಾರೆ.

ನಿವೇದಿತಾ ಗೌಡ ಅವರು ಬಿಗ್ ಬಾಸ್ ಶೋದಲ್ಲಿ ಕಾಣಿಸಿಕೊಂಡಾಗ ಅವರ ಮುದ್ದುಮುದ್ದು ಮಾತಿಗೆ ಫಿದಾ ಆಗದವರೇ ಇಲ್ಲ. ಗೊಂಬೆಯಂತಹ ಅವರ ಲುಕ್ ನೋಡಿ ಎಲ್ಲರೂ ಕಣ್‌ಕಣ್ ಬಿಟ್ಟವರೇ.

ನಟಿ ನಿವೇದಿತಾ ಗೌಡ ಅವರು ತೆಲುಗಿನ ಆಲ್ಬಂ ಸಾಂಗ್ ಒಂದರಲ್ಲಿ ಕಾಣಿಸಿಕೊಂಡು ಟಾಲಿವುಡ್‌ನಲ್ಲಿ ಸಖತ್ ಕಿಚ್ಚ ಹಚ್ಚಿದ್ದಾರೆ. ಡಿವೋರ್ಸ್ ಬಳಿಕ ಸಿನಿಮಾ ನಟನೆಗೆ ಹೆಚ್ಚು ಒತ್ತುಕೊಟ್ಟಿದ್ದಾರೆ ನಿವೇದಿತಾ.

ನಿವೇದಿತಾ ಗೌಡ ಅವರು ಇತ್ತಿಚೆಗೆ ಹೆಚ್ಚು ಎಕ್ಸ್‌ಪೋಸ್ ಮಾಡುತ್ತಿದ್ದಾರೆ. ದೇಹವನ್ನು ಹೆಚ್ಚು ಹೆಚ್ಚು ತೋರಿಸುವ ಬದಲು ಬಟ್ಟೆಯನ್ನು ಹೆಚ್ಚು ಹೆಚ್ಚು ತೋರಿಸಿ ಎಂದು ಹಲವರು ಕಾಮೆಂಟ್ ಮಾಡುತ್ತಿದ್ದಾರೆ.

ನಟಿ ನಿವೇದಿತಾ ಗೌಡ ಅವರು ರೀಲ್ಸ್ ಮಾಡೋದ್ರಲ್ಲಿ ತುಂಬಾ ಬ್ಯುಸಿ ಆಗಿರ್ತಾರೆ. ಅವರ ರೀಲ್ಸ್‌ಗೆ ಬಹಳಷ್ಟು ಜನರು ಅಭಿಮಾನಿಗಳು ಕೂಡ ಇದ್ದಾರೆ ಅನ್ನೋದು ಶಾಕಿಂಗ್ ಸತ್ಯ.

ನಿವೇದಿತಾ ಗೌಡ ಹಾಗೂ ಚಂದನ್ ಶೆಟ್ಟಿಯವರ ಸಿನಿಮಾ ತೆರೆಗೆ ಯಾವಾಗ ಬರುತ್ತೊ ಗೊತ್ತಿಲ್ಲ. ಆದರೆ ಅವರಿಬ್ಬರ ಜೋಡಿಯ ಚಿತ್ರಕ್ಕೆ ಕನ್ನಡ ಸಿನಿಪ್ರೇಕ್ಷಕರು ಕಾಯುತ್ತಿದ್ದಾರೆ.

ನಿವೇದಿತಾ ಗೌಡ ಹಾಗೂ ಚಂದನ್ ಶೆಟ್ಟಿಯವರ ಸಿನಿಮಾ ತೆರೆಗೆ ಯಾವಾಗ ಬರುತ್ತೊ ಗೊತ್ತಿಲ್ಲ. ಆದರೆ ಅವರಿಬ್ಬರ ಜೋಡಿಯ ಚಿತ್ರಕ್ಕೆ ಕನ್ನಡ ಸಿನಿಪ್ರೇಕ್ಷಕರು ಕಾಯುತ್ತಿದ್ದಾರೆ.

ಒಟ್ಟಿನಲ್ಲಿ, ನಟಿ ನಿವೇದಿತಾ ಅವರು ಕನ್ನಡ ಸಿನಿಮಾ ಮೂಲಕ ಆದಷ್ಟು ಬೇಗ ಕನ್ನಡ ಚಿತ್ರರಸಿಕರಿಗೆ ದರ್ಶನ್ ಕೊಡಲಿ ಎಂದು ಅವರ ಫ್ಯಾನ್ಸ್ ಕಾಯುತ್ತಿದ್ದಾರೆ. ಆದರೆ, ಆ ಕಾಲ ಯಾವಾಗ ಬರುತ್ತೋ ಗೊತ್ತಿಲ್ಲ.

ನಟಿ ನಿವೇದಿತಾ ಗೌಡ ಅವರು ರೀಲ್ಸ್ ಮಾಡೋದ್ರಲ್ಲಿ ತುಂಬಾ ಬ್ಯುಸಿ ಆಗಿರ್ತಾರೆ. ಅವರ ರೀಲ್ಸ್‌ಗೆ ಬಹಳಷ್ಟು ಜನರು ಅಭಿಮಾನಿಗಳು ಕೂಡ ಇದ್ದಾರೆ ಅನ್ನೋದು ಶಾಕಿಂಗ್ ಸತ್ಯ.

ನಿವೇದಿತಾ ಗೌಡ ಅವರು ಸೋಷಿಯಲ್ ಮೀಡಿಯಾ ಇನ್‌ಸ್ಟಾಗ್ರಾಂನಲ್ಲಿ ಬರೋಬ್ಬರಿ 2.1 ಮಿಲಿಯನ್ ಫಾಲೋವರ್ಸ್ ಹೊಂದಿದ್ದಾರೆ. ನಿವೇದಿತಾ ಗೌಡರ ಫೋಟೋ ಹಾಗೂ ರೀಲ್ಸ್‌ಗೆ ಅವರ ಫ್ಯಾನ್ಸ್ ಕಡೆಯಿಂದ ಭಾರೀ ಬೇಡಿಕೆ ಇದೆ.

# ಇಂದಿನಿಂದ ಬೆಂಗಳೂರು ಓಪನ್ ಟೆನಿಸ್



**ಬೆಂಗಳೂರು :** ಇಂದಿನಿಂದ ಕರ್ನಾಟಕ ರಾಜ್ಯ ಲಾನ್ ಟೆನಿಸ್ ಸಂಸ್ಥೆ (ಕೆಎಸ್‌ಎಲ್‌ಟಿಎ)ನಲ್ಲಿ 9ನೇ ಆವೃತ್ತಿಯ ಬೆಂಗಳೂರು ಓಪನ್ ಟೆನಿಸ್ ಆರಂಭವಾಗಲಿದೆ. ಮಾರ್ಚ್ 2ರ ವರೆಗೂ ನಡೆಯಲಿರುವ ಟೂರ್ನಿಯಲ್ಲಿ ಭಾರತದ ರಾಮಕುಮಾರ್ ರಾಮನಾಥನ್, ಎಸ್.ಡಿ. ಪ್ರಜ್ವಲ್, ಮಾನಸ್ ಧಾಮನೆ ಮತ್ತಿತರ ಪ್ರಮುಖ ಆಟಗಾರರು ಕಣದಲ್ಲಿದ್ದಾರೆ.

ಜಪಾನಿನ 7ನೇ ಶ್ರೇಯಾಂಕದ ಶಿಂಟರೊ ಮೊಚಿಜುಕಿ ಅವರನ್ನು ರಾಮಕುಮಾರ್ ರಾಮನಾಥನ್ ಎದುರಿಸಲಿದ್ದಾರೆ. ಎಸ್.ಡಿ. ಪ್ರಜ್ವಲ್ ದೇವ್ ಅವರು ಜೆಕ್ ರಿಪಬ್ಲಿಕ್‌ನ ಮರೆಕ್ ಗೆಂಗೆಲ್ ಅವರನ್ನು ಹಾಗೂ ಮತ್ತೋರ್ವ ಉದಯೋನ್ಮುಖ ಆಟಗಾರ ಮಾನಸ್ ಧಾಮನೆ ಅರ್ಹತಾ ಸುತ್ತಿನಿಂದ ಬರಲಿರುವ ಆಟಗಾರನನ್ನು ಎದುರಿಸಲಿದ್ದಾರೆ.

ಬೆಂಗಳೂರಿನ ರಿಷಿ ರೆಡ್ಡಿ ಅವರು ಶಶಿಕುಮಾರ್ ಮುಕುಂದ್ ಅವರ ಸವಾಲಿಗೆ ಸಿದ್ಧರಾಗಿದ್ದಾರೆ. ಕೂಟದ ಅಗ್ರ ಶ್ರೇಯಾಂಕಿತ ವಿಕ್ಟರ್ ಕೊಪ್ರಿವಾ ಅರ್ಹತಾ ಸುತ್ತಿನಲ್ಲಿ ಗೆದ್ದು ಮೇಲೇರಿದ ಆಟಗಾರನನ್ನು ಎದುರಿಸಲಿದ್ದಾರೆ. 2ನೇ ಶ್ರೇಯಾಂಕಿತ ಟ್ರಿಸ್ಟನ್ ಶೂಲ್‌ಕೇಟ್ ಕುಮೊಯೂನ್ ಸುಲ್ತಾನೊವ್ ವಿರುದ್ಧ ಸೆಣಸಾಡಲಿದ್ದಾರೆ.



# ಸದ್ದಿಲ್ಲದೇ ಮದುವೆಯಾದ 'ರಾಕ್‌ಸ್ಟಾರ್' ನರ್ಗಿಸ್

ಸೂಪರ್ ಹಿಟ್ ರಾಕ್‌ಸ್ಟಾರ್, ಮೆ ತೇರಾ ಹೀರೋ ಮತ್ತು ಹೌಸ್‌ಫುಲ್ 3 ಚಿತ್ರಗಳಿಗೆ ಹೆಸರುವಾಸಿಯಾಗಿರುವ ಬಾಲಿವುಡ್ ನಟಿ ನರ್ಗಿಸ್ ಫಕ್ರಿ, ಅಮೆರಿಕ ಮೂಲದ ಉದ್ಯಮಿ ಟೋನಿ ಬೀಗ್ ಅವರೊಂದಿಗೆ ದಾಂಪತ್ಯ ಜೀವನ ಶುರು ಮಾಡಿದ್ದಾರೆ ಎಂದು ವರದಿಯಾಗಿದೆ.

ಇತ್ತೀಚಿನ ವರದಿಗಳ ಪ್ರಕಾರ, ಕಳೆದ ವಾರಾಂತ್ಯದಲ್ಲಿ ಕ್ಯಾಲಿಫೋರ್ನಿಯಾದ ಐಷಾರಾಮಿ ಹೋಟೆಲ್‌ನಲ್ಲಿ ನಡೆದ ಆತ್ಮೀಯ ಸಮಾರಂಭದಲ್ಲಿ ಮದುವೆಯಾಗಿದ್ದಾರೆ. ವಿವಾಹವನ್ನು ಗೌಪ್ಯವಾಗಿಡಲಾಗಿದ್ದರೂ, ಸುಳಿವುಗಳು ಆನ್‌ಲೈನ್‌ನಲ್ಲಿ ಹರಿದಾಡುತ್ತಿವೆ. ಇದು ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿದೆ.

ಟೋನಿ ಬೀಗ್ ಯಾರು? ಖ್ಯಾತ ಉದ್ಯಮಿ ಟೋನಿ ಬೀಗ್ ಡಿಯೋಜ್ ಗ್ರೂಪ್‌ನ ಅಧ್ಯಕ್ಷರು. ಅಲಾನಿಕ್, 8ಹೆಲ್ತ್ ಮತ್ತು ಓಯಸಿಸ್ ಅಪರಲ್ ಸೇರಿದಂತೆ ಹಲವು ಉದ್ಯಮಗಳನ್ನು ನೋಡಿಕೊಳ್ಳುತ್ತಾರೆ. 2006ರಲ್ಲಿ ಅವರ ಉದ್ಯಮ ಪ್ರಯಾಣ ಪ್ರಾರಂಭವಾಯಿತು. ಅಂದಿನಿಂದ, ಗ್ಲೋಬಲ್ ಬ್ಯುಸಿನೆಸ್ ವರ್ಲ್ಡ್‌ನಲ್ಲಿ ಸಖತ್ ಸ್ಟ್ರಾಂಗ್ ಆಗಿ ಗುರುತಿಸಿಕೊಂಡಿದ್ದಾರೆ.



1984ರಲ್ಲಿ ಕಾಶ್ಮೀರದಲ್ಲಿ ಜನಿಸಿದ ಟೋನಿ, ಪ್ರತಿಷ್ಠಿತ ಕುಟುಂಬದಿಂದ ಬಂದವರು. ತಂದೆ ಶಕೀಲ್ ಅಹ್ಮದ್ ಬೀಗ್, ಹಿಂದೆ ಜಮ್ಮು ಮತ್ತು ಕಾಶ್ಮೀರದ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಗಿ ಸೇವೆ ಸಲ್ಲಿಸಿದ್ದಾರೆ. ಸಹೋದರ ಜಾನಿ ಬೀಗ್ ಟೆಲಿವಿಷನ್ ಪ್ರೊಡ್ಯೂಸರ್. ಟೋನಿ ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿರುವ ವಿಕ್ಟೋರಿಯಾ ಯೂನಿವರ್ಸಿಟಿ ಆಫ್ ಟೆಕ್ನಾಲಜಿಯಿಂದ ಬ್ಯುಸಿನೆಸ್, ಮ್ಯಾನೇಜ್‌ಮೆಂಟ್ ಆ್ಯಂಡ್ ಮಾರ್ಕೆಟಿಂಗ್‌ನಲ್ಲಿ ಎಂಬಿಎ ಪದವಿ ಪಡೆದಿದ್ದಾರೆ. 2005–06ರ ಸಂದರ್ಭ ಯುಎಸ್ ಮೂಲದ ಪ್ರಮುಖ ಬಟ್ಟೆ ಬ್ರ್ಯಾಂಡ್ ಅಲಾನಿಕ್ ಇಂಟರ್‌ನ್ಯಾಷನಲ್‌ನ ವ್ಯವಸ್ಥಾಪಕ ನಿರ್ದೇಶಕರಾಗಿ ಅವರ ವೃತ್ತಿಜೀವನ ಪ್ರಾರಂಭವಾಯಿತು.



ಭಾರತ, ಆಸ್ಟ್ರೇಲಿಯಾ ಮತ್ತು ಅಮೆರಿಕದಲ್ಲಿ ವಾಸಿಸಿರುವ ಟೋನಿ, ಜಾಗತಿಕ ವ್ಯವಹಾರದಲ್ಲಿ ಪ್ರಭಾವಶಾಲಿಯಾಗಿ ಗುರುತಿಸಿಕೊಂಡಿದ್ದಾರೆ. ಪ್ರೈವೆಸಿಗೆ ಹೆಚ್ಚು ಮಹತ್ವ ಕೊಡುತ್ತಾರಾದರೂ, ನರ್ಗಿಸ್ ಫಕ್ರಿ ಅವರೊಂದಿಗಿನ ಸಂಬಂಧದಿಂದ ಸದ್ಯ ಸಖತ್ ಸುದ್ದಿಯಾಗುತ್ತಿದ್ದಾರೆ.

2021ರಿಂದ ಡೇಟಿಂಗ್– 2025ರಲ್ಲಿ ಮದುವೆ : ನರ್ಗಿಸ್ ಹಾಗೂ ಟೋನಿ 2021ರ ಅಂತ್ಯದಿಂದ ಡೇಟಿಂಗ್‌ನಲ್ಲಿದ್ದರು ಎಂದು ವರದಿಯಾಗಿದೆ. ಕಳೆದ ವಾರಾಂತ್ಯ ಅವರ ವಿವಾಹವು ಬಿಗಿ ಭದ್ರತೆಯಲ್ಲಿ ನಡೆದಿದೆ. ಆಪ್ತ ಸ್ನೇಹಿತರು ಮತ್ತು ಕುಟುಂಬದವರನ್ನು ಮಾತ್ರ ಆಹ್ವಾನಿಸಲಾಗಿತ್ತು. ಗೌಪ್ಯತೆಯನ್ನು ಕಾಪಾಡಿಕೊಳ್ಳಲು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಲಾಯಿತು. ಆದಾಗ್ಯೂ, ಅವರ ವಿವಾಹದ ಕೆಲ ಫೋಟೋಗಳು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡಿವೆ. ರೆಡ್ಡಿಟ್ ಪೋಸ್ಟ್ ಒಂದರಲ್ಲಿ ಅವರ ಹೆಸರಿನ ಲೋಗೋವನ್ನು ಹೊಂದಿರುವ, ಸುಂದರವಾಗಿ ಅಲಂಕರಿಸಲ್ಪಟ್ಟ ವೆಡ್ಡಿಂಗ್ ಎಂಟ್ರೆಸ್‌ನ ಫೋಟೋವನ್ನು ಕಾಣಬಹುದು. ಅವರ ಹೆಸರಿನ ಮೊದಲಕ್ಷರಗಳಿಂದ ಅಲಂಕರಿಸಲ್ಪಟ್ಟ ವೆಡ್ಡಿಂಗ್ ಕೇಕ್ ಅನ್ನೂ ಕಾಣಬಹುದು.

ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ಹನಿಮೂನ್ : ನವ ದಂಪತಿಯೀಗ ಹನಿಮೂನ್‌ಗಾಗಿ ಸ್ವಿಟ್ಜರ್‌ಲ್ಯಾಂಡ್‌ನಲ್ಲಿದ್ದಾರೆ ಎಂದು ಹೇಳಲಾಗಿದೆ. ನವ ವಧು ನರ್ಗಿಸ್ ಇನ್ನೂ ಮದುವೆಗೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ಮಾಹಿತಿ ಹಂಚಿಕೊಂಡಿಲ್ಲ. ಆದರೆ ದಂಪತಿ ಇನ್‌ಸ್ಟಾಗ್ರಾಮ್‌ನಲ್ಲಿ ಪ್ರವಾಸದ ಮುದ್ದಾದ ಫೋಟೋವನ್ನು ಹಂಚಿಕೊಂಡಿದ್ದಾರೆ. ಈ ಫೋಟೋ ಮದುವೆ ಸುತ್ತಲಿನ ಊಹಾಪೋಹಗಳಿಗೆ ತುಪ್ಪ ಸುರಿದಿದೆ.

# ಆಲಿಯಾ ಭಟ್ ಮತ್ತು ಅನನ್ಯಾ ಪಾಂಡೆ ಅಚ್ಚುಮೆಚ್ಚು

ಗೌತಮ್ ಮೆನನ್ ನಿರ್ದೇಶಿಸಿದ ವಿಣ್ಣೈತಾಂಡಿ ವರುವಾಯಾ ಚಿತ್ರದ ಮೂಲಕ ಸಮಂತಾ ಪರಿಚಿತರಾದರು. ಈ ಚಿತ್ರದ ಯಶಸ್ಸಿನ ನಂತರ, ಸಮಂತಾ ತಮಿಳು ಮತ್ತು ತೆಲುಗು ಭಾಷೆಗಳಲ್ಲಿ ಬ್ಯುಸಿಯಾದ ನಟಿಯಾದರು.

ಟಾಪ್ ನಟಿಯಾಗಿ ಮೆರೆಯುತ್ತಿದ್ದಾಗಲೇ ನಟ ನಾಗ ಚೈತನ್ಯ ಅವರನ್ನು ಪ್ರೀತಿಸಿ ಮದುವೆಯಾದ ಸಮಂತಾ, ಮದುವೆಯ ನಂತರವೂ ನಟನೆಯನ್ನು ಮುಂದುವರೆಸಿದರು. ಇದರ ಮಧ್ಯೆ, 2021 ರಲ್ಲಿ, ಸಮಂತಾ ಪತಿ ಜೊತೆಗಿನ ಭಿನ್ನಾಭಿಪ್ರಾಯದಿಂದಾಗಿ ವಿಚ್ಛೇದನ ಪಡೆದರು.

ವಿಚ್ಛೇದನದ ನಂತರ, ನಟಿ ಸಮಂತಾ ಮಯೋಸಿಟಿಸ್ ಎಂಬ ಅಪರೂಪದ ಕಾಯಿಲೆಯಿಂದ ಬಳಲುತ್ತಿದ್ದರು. ಇದರಿಂದ ಕಳೆದ ಒಂದು ವರ್ಷದಿಂದ ಸಿನಿಮಾದಿಂದ ದೂರವಿದ್ದ ಸಮಂತಾ, ಅದಕ್ಕೆ ಚಿಕಿತ್ಸೆ ಪಡೆಯುತ್ತಿದ್ದರು. ಕ್ರಮೇಣ ಅದರಿಂದ ಚೇತರಿಸಿಕೊಂಡ ಸಮಂತಾ, ಈಗ ಮತ್ತೆ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಅವರು ನಟಿಸಿದ ಸಿಟಾಡೆಲ್ ವೆಬ್ ಸರಣಿ ಬಿಡುಗಡೆಯಾಯಿತು. ಇದರ ನಂತರ, ಅವರು ಬಾಲಿವುಡ್‌ನಲ್ಲಿ ಕೆಲವು ಚಿತ್ರಗಳಲ್ಲಿ ನಾಯಕಿಯಾಗಿ ನಟಿಸುತ್ತಿದ್ದಾರೆ.

ಇನ್‌ಸ್ಟಾಗ್ರಾಮ್‌ನಲ್ಲಿ ಸಕ್ರಿಯವಾಗಿರುವ ಸಮಂತಾ, ಆಗಾಗ ಅಭಿಮಾನಿಗಳೊಂದಿಗೆ ಲೈವ್‌ನಲ್ಲಿ ಸಂವಾದ ನಡೆಸುತ್ತಾರೆ. ಆಗ ಅಭಿಮಾನಿಗಳು ಕೇಳುವ ಪ್ರಶ್ನೆಗಳಿಗೆ ಮುಕ್ತವಾಗಿ ಉತ್ತರಿಸುತ್ತಾರೆ.





ಆ ರೀತಿಯಲ್ಲಿ, ಅವರು ಇತ್ತೀಚೆಗೆ ಅಭಿಮಾನಿಗಳೊಂದಿಗೆ ಸಂವಾದ ನಡೆಸುತ್ತಿದ್ದಾಗ, ಒಬ್ಬರು, ನಿಮ್ಮ ಪ್ರಕಾರ ಅತ್ಯುತ್ತಮ ನಟಿಯರು ಯಾರು ಎಂದು ಕೇಳಿದರು. ಇದಕ್ಕೆ ನಟಿ ಸಮಂತಾ ತನಗೆ ಇಷ್ಟವಾದ ಐವರು ನಟಿಯರ ಹೆಸರನ್ನು ಬಿಡುಗಡೆ ಮಾಡಿದ್ದಾರೆ.

ಆ ಪಟ್ಟಿಯಲ್ಲಿ ಒಳ ಒಳುಕ್ಕು ಚಿತ್ರದಲ್ಲಿ ನಟಿಸಿದ ನಟಿ ಪಾರ್ವತಿ ತಿರುವೋತು, ಸೂಕ್ಷ್ಮದರ್ಶಿನಿ ಚಿತ್ರದಲ್ಲಿ ನಟಿಸಿದ ನಜ್ರಿಯಾ, ಅಮರನ್ ಚಿತ್ರದಲ್ಲಿ ನಟಿಸಿದ ಸಾಯಿ ಪಲ್ಲವಿ ಅವರ ನಟನೆ ತನ್ನನ್ನು ತುಂಬಾ ಆಕರ್ಷಿಸಿದೆ ಎಂದು ಹೇಳಿದ್ದರು.

ಇದಲ್ಲದೆ, ಬಾಲಿವುಡ್‌ನ ಜಿಗ್ರಾ ಚಿತ್ರದಲ್ಲಿ ನಟಿಸಿದ ನಟಿ ಆಲಿಯಾ ಭಟ್ ಮತ್ತು ಸಿಟಿಆರ್‌ಎಲ್ ಚಿತ್ರದ

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **944807487**